ಬೆಂಗಳೂರು ಸಂಪುಟ: 16 ಸಂಚಿಕೆ: 19 ಪುಟ: 06 ಸೋಮವಾರ 09–12–2024 Mail: mussanje2010@gmail.com ₹ 3

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LL.B)

Executive Editor: L.P. Babu

**ನಾವೂ ಈಗ ಡಿಜಿಟಲೀಕರಣಗೊಂಡಿದ್ದೇವೆ...**

ಪ್ರಿಯ ಓದುಗರೇ.....

ತಮ್ಮೆಲ್ಲರ ಒತ್ತಾಸೆಯ ಮೇರೆಗೆ ನಿಮ್ಮ 'ಮುಸ್ಸಂಜೆ' ಸಂಜೆ ದಿನ ಪತ್ರಿಕೆ ಈಗ ಡಿಜಿಟಲೀಕರಣಗೊಂಡಿದೆ. ಹದಿನೈದು ವಸಂತಗಳನ್ನು ಯಶಸ್ವಿಯಾಗಿ ಪೂರೈಸಿ 16ನೇ ವಸಂತಕ್ಕೆ ಕಾಲಿಟ್ಟ ಈ ಸುಸಂದರ್ಭದಲ್ಲಿ ರಾಜ್ಯದಲ್ಲಿ ಅಲ್ಲದೇ ದೇಶದ ವಿವಿಧೆಡೆಗಳಿಂದ ಸಹಕಾರ ದೊರೆತ ಹಿನ್ನೆಲೆಯಲ್ಲಿ ಪತ್ರಿಕೆಯನ್ನು ಡಿಜಿಟಲೀಕರಣಗೊಳಿಸಿ ನೂತನ ವೆಬ್‌ಸೈಟ್ ಲಾಂಚ್ ಮಾಡುವ ಮೂಲಕ onlineನಲ್ಲಿ ಪತ್ರಿಕೆ ವೀಕ್ಷಿಸಲು ಅವಕಾಶ ಕಲ್ಪಿಸಿದ್ದೇವೆ. ಪತ್ರಿಕೆಯನ್ನು ತಾಜಾ ಸುದ್ದಿಯೊಂದಿಗೆ ಹೊಸ ರೂಪದಲ್ಲಿ ನಿಮ್ಮ ಮುಂದಿಡುವ ಪ್ರಯತ್ನ ಮಾಡಿದ್ದೇವೆ. ನಮ್ಮ ಈ ಪ್ರಯತ್ನಕ್ಕೆ ಓದುಗರು, ಚಂದಾದಾರರೂ, ಹಾಗೂ ಜಾಹೀರಾತುದಾರರಾದ ತಮ್ಮ ಪ್ರೋತ್ಸಾಹವನ್ನು ಎಂದಿನಂತೆ ಬಯಸುತ್ತೇವೆ...

www.mussanjenews.com

ಇಂತಿ ಸಂಪಾದಕ

# ಪಂಚಮಸಾಲಿ ಮೀಸಲಾತಿ ಹೋರಾಟಕ್ಕೆ ಸರ್ಕಾರ ಶಾಕ್



**ಬೆಳಗಾವಿ:** ಪಂಚಮಸಾಲಿ ಸಮುದಾಯಕ್ಕೆ 2ಎ ಮೀಸಲಾತಿಗೆ ಆಗ್ರಹಿಸಿ ಚಳಿಗಾಲದ ಅಧಿವೇಶನ ನಡೆಯುತ್ತಿರುವ ಬೆಳಗಾವಿಯ ಸುವರ್ಣಸೌಧಕ್ಕೆ ನಾಳೆ ಮುತ್ತಿಗೆ ಹಾಕಲು ನಿರ್ಧರಿಸಿದ್ದ ಹೋರಾಟಗಾರರಿಗೆ ಸರ್ಕಾರ ಶಾಕ್ ನೀಡಿದೆ.

2ಎ ಮೀಸಲಾತಿಗಾಗಿ ಆಗ್ರಹಿಸಿ ಡಿಸೆಂಬರ್ 10 ರಂದು ಸುವರ್ಣಸೌಧಕ್ಕೆ ಟ್ರ್ಯಾಕ್ಟರ್? ಮೂಲಕ ಮುತ್ತಿಗೆ ಹಾಕಲು ಪಂಚಮಸಾಲಿ ಸಮುದಾಯ ಕರೆ ನೀಡಿತ್ತು. ಬಸವ ಜಯಮೃತ್ಯುಂಜಯಶ್ರೀಗಳ ನೇತೃತ್ವದಲ್ಲಿ 2ಎ ಮೀಸಲಾತಿಗಾಗಿ ಪಂಚಮಸಾಲಿ ಸಮುದಾಯ ಹೋರಾಟಕ್ಕೆ ಸಿದ್ಧತೆ ಮಾಡಿಕೊಂಡಿದೆ. ಡಿ.10ರಂದು ಸುವರ್ಣಸೌಧಕ್ಕೆ ಟ್ರ್ಯಾಕ್ಟರ್ ಮುತ್ತಿಗೆಗೆ ನಿರ್ಧರಿಸಿದ್ದರು.

ಆದರೆ ಇದೀಗ ಡಿಸೆಂಬರ್ 9, 10ರಂದು ಹೋರಾಟದ ವಾಹನ ಬೆಳಗಾವಿ ಪ್ರವೇಶಕ್ಕೆ ನಿಷೇಧಿಸಲಾಗಿದೆ. ಹೋರಾಟಕ್ಕೆ ಬರುವ ಟ್ರ್ಯಾಕ್ಟರ್, ಕ್ರೂಸರ್ ವಾಹನಗಳಿಗೆ ನಿರ್ಬಂಧ ಹೇರಿ ಡಿಸಿ ಮೊಹಮ್ಮದ್ ರೋಷನ್?? ನಿಷೇಧಾಜ್ಞೆ ಜಾರಿಗೊಳಿಸಿದ್ದಾರೆ.

ಈ ಕುರಿತು ಮಾತನಾಡಿ ಅಸಮಾಧಾನ ವ್ಯಕ್ತಪಡಿಸಿರುವ ಬಸವಜಯ ಮೃತ್ಯುಂಜಯ ಸ್ವಾಮೀಜಿ, ಹೋರಾಟವನ್ನು ಹತ್ತಿಕ್ಕುವ ದುಸ್ಸಾಹಸಕ್ಕೆ ಸರ್ಕಾರ ಕೈ ಹಾಕಬಾರದು. ಪಂಚಮಸಾಲಿ 2ಂ ಮೀಸಲಾತಿಗಾಗಿ ಆಗ್ರಹಿಸಿ ನಾಳೆ ಬೃಹತ್ ಹೋರಾಟ ಹಮ್ಮಿಕೊಳ್ಳಲಾಗಿದೆ. ಆದರೆ ಹೋರಾಟದಲ್ಲಿ ಟ್ರ್ಯಾಕ್ಟರ್, ಕ್ರೂಸರ್ ವಾಹನ ನಿಷೇಧ ಹೇರಿ ಬೆಳಗಾವಿ ಜಿಲ್ಲಾಧಿಕಾರಿ ಆದೇಶ ಹೊರಡಿಸಿದ್ದಾರೆ. ನಮ್ಮ ಹೋರಾಟ ಹತ್ತಿಕ್ಕುವ ಯತ್ನ ಮಾಡಬಾರದು ಎಂದು ಕಿಡಿಕಾರಿದರು.

## ಬಾಣಂತಿಯರ ಸಾವು ಸರ್ಕಾರದ ಪ್ರಾಯೋಜಿತ ಕೊಲೆ: ಸಿಟಿ ರವಿ ಆಕ್ರೋಶ



**ಬೆಳಗಾವಿ:** ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ಬಾಣಂತಿಯರ ಸರಣಿ ಸಾವು ಕುರಿತು ಸರ್ಕಾರದ ವಿರುದ್ಧ ವಿಧಾನಪರಿಷತ್ ಸದಸ್ಯ ಸಿ.ಟಿ ರವಿ ಆಕ್ರೋಶ ಹೊರ ಹಾಕಿದ್ದಾರೆ.

ಈ ಕುರಿತು ಮಾತನಾಡಿದ ಸಿ.ಟಿ ರವಿ, ಅಧಿವೇಶನದಲ್ಲಿ ಸರ್ಕಾರದ ವಿರುದ್ಧ ಹೋರಾಟಕ್ಕೆ ಬಿಜೆಪಿ ಸಿದ್ದತೆ ಮಾಡಿಕೊಂಡಿದೆ. ಬಾಣಂತಿಯರ ಹಸುಗೂಸಿನ ಸಾವಿನ ಬಗ್ಗೆ ಸರ್ಕಾರಕ್ಕೆ ಕಾಳಜಿ ಇಲ್ಲ. ಬಾಣಂತಿಯರ ಸಾವು ಸರ್ಕಾರದ ಪ್ರಾಯೋಜಿತ ಕೊಲೆ ಎಂಧು ಕಿಡಿಕಾರಿದರು.

ರಾಜ್ಯದಲ್ಲಿ ಭ್ರಷ್ಟಾಚಾರ ತಾಂಡವಾಡುತ್ತಿದೆ. ಸರ್ಕಾರಿ ನೌಕರರಿಗೆ ಸಂಬಳ ಕೊಡಲು ಹಣ ಇಲ್ಲದೆ ಪರದಾಟ ನಡೆಸುತ್ತಿದ್ದಾರೆ ವಕ್ಫ್ ಕಾನೂನು ಸಂವಿಧಾನಕ್ಕೆ ವಿರುದ್ದವಾಗಿದೆ. ಆದರೆ ರಾಜ್ಯ ಸರ್ಕಾರ ರೈತರಿಗೆ ಸ್ಪಂದಿಸುತ್ತಿಲ್ಲ ಎಂದು ವಾಗ್ದಾಳಿ ನಡೆಸಿದರು.

## ಕೈಯಲ್ಲಿ ಸಂವಿಧಾನ ಹಿಡಿದು ಪ್ರಮಾಣ ವಚನ ಸ್ವೀಕರಿಸಿದ ನೂತನ ಶಾಸಕ ಶಿಗ್ಗಾಂವ್ ಪಠಾಣ್



ಚಳಿಗಾಲದ ಅಧಿವೇಶನದ ಪ್ರಥಮ ದಿನ ಸುವರ್ಣಸೌಧದಲ್ಲಿ ಮೂವರು ನೂತನ ಶಾಸಕರು ಪ್ರಮಾಣ ವಚನ ಸ್ವೀಕರಿಸಿದರು. ಸಂಡೂರು ಕ್ಷೇತ್ರದ ಅನ್ನಪೂರ್ಣಮ್ಮ, ಚನ್ನಪಟ್ಟಣ ಕ್ಷೇತ್ರದ ಯೋಗೇಶ್ವರ್ ಮತ್ತು ಶಿಗ್ಗಾಂವ್ ನ ಪಠಾಣ್ ಪ್ರಮಾಣ ವಚನ ಸ್ವೀಕರಿಸಿದರು.

ಇವರಲ್ಲಿ ಪಠಾಣ್ ಅವರು ಸಂವಿಧಾನ ಪ್ರತಿಯನ್ನು ಕೈಯಲ್ಲಿ ಹಿಡಿದು ಪ್ರಮಾಣ ವಚನ ಸ್ವೀಕರಿಸುವ ಮೂಲಕ ಸದನದ ಗಮನ ಸೆಳೆದರು.

## ಪ್ರಕರಣ ಮುಚ್ಚಿಡುವ ಪ್ರಶ್ನೆಯೇ ಇಲ್ಲ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್



**ಬೆಳಗಾವಿ:** ಬೆಳಗಾವಿ ಜಿಲ್ಲಾ ಆಸ್ಪತ್ರೆಯಲ್ಲಿ (ಬಿಮ್ಸ್) ಸಂಭವಿಸಿರುವ ಬಾಣಂತಿಯರು ಹಸಿಗೂಸುಗಳ ಸಾವಿನ ಪ್ರಕರಣವನ್ನು ಮುಚ್ಚಿಡುವ ಪ್ರಶ್ನೆಯೇ ಇಲ್ಲ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಬಿಮ್ಸ್‌ನಲ್ಲಿ ಬಾಣಂತಿಯರು, ಹಸಿಗೂಸುಗಳ ಸಾವಿನ ಬಗ್ಗೆ ಸುದ್ದಿಗಾರರು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, ಪ್ರಕರಣ ಕುರಿತು ಈಗಾಗಲೇ ನಾನು ಅಧಿಕಾರಿಗಳ ಜೊತೆ ಮಾತನಾಡಿರುವೆ. ಯಾಕೆ ಸಮಸ್ಯೆಯಾಗಿದೆ, ಎಲ್ಲವನ್ನೂ ಕೂಡ ಚರ್ಚೆ ಮಾಡಿದ್ದೇನೆ ಎಂದರು.

ಯಾವ ಕಾರಣಕ್ಕೆ ಸಾವಿನ ಪ್ರಕರಣಗಳು ಸಂಭವಿಸಿವೆ. ಸಾವನ್ನ ತಡೆಯಲು ಯಾವ ಕ್ರಮಕೈಗೊಳ್ಳಬೇಕು. ಏನೆಲ್ಲ ಮಾಡಬೇಕು ಅದನ್ನ ಮಾಡುತ್ತಿದ್ದೇವೆ. ನಮ್ಮ ಜಿಲ್ಲೆಯಲ್ಲಿ 54 ಲಕ್ಷ ಜನಸಂಖ್ಯೆ ಇದೆ. ಹೀಗಾಗಿ ಅಂಕಿ ಅಂಶ ಹೆಚ್ಚಾಗಿ ಕಾಣುತ್ತಾ ಇದೆ. ಕಾರವಾರ ಸೇರಿದಂತೆ ಅನೇಕ ಕಡೆಗಳಿಂದ ಆಸ್ಪತ್ರೆಗೆ ಬೆಳಗಾವಿಗೆ ಬರುತ್ತಾರೆ ಎಂದು ತಿಳಿಸಿದರು.

ಬಾಣಂತಿರು, ಹಸಿಗೂಸುಗಳ ಸಾವಿಗೆ ಬಹಳಷ್ಟು ಕಾರಣಗಳಿವೆ. ಬಳ್ಳಾರಿ ಪ್ರಕರಣಗಳಿಗೂ, ಬ್ರಿಮ್ಸ್‌ಗೂ ಸಂಬಂಧ ಇಲ್ಲ. ಕಬ್ಬಿನಾಂಶ ಕೊರತೆ, ಪ್ರೀ ಮೆಚ್ಯುರ್ ಬೇಬಿ ಹೀಗೆ ಅನೇಕ ಕಾರಣಗಳಿವೆ. ಒಂದು ಲಕ್ಷ ಮಕ್ಕಳು ಹುಟ್ಟಿದರೆ 28 ಮಕ್ಕಳು ಅದರಲ್ಲಿ ತೀರಿಕೊಳ್ಳುತ್ತಿದ್ದಾರೆ. ಇಡೀ ದೇಶಕ್ಕೆ 6ನೇ ಅತ್ಯುತ್ತಮ ಆಸ್ಪತ್ರೆ ಎಂದು ಬಿಮ್ಸ್ ಪಾತ್ರವಾಗಿದೆ. ಬಾಣಂತಿಯರು, ಹಸಿಗೂಸುಗಳ ಸಾವಿಗೆ ಇಂಥದ್ದೇ ಕಾರಣ ಅಂತ ಈ ಹಂತದಲ್ಲಿ ಹೇಳಲು ಸಾಧ್ಯವಿಲ್ಲ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

## ಅರಮನೆ ಮೈದಾನದಲ್ಲಿ ಸೊರಬ ನಿವಾಸಿಗಳ ಸಮ್ಮಿಲನ –2024 ಕಾರ್ಯಕ್ರಮ





» ಟ್ರೋಲ್‌ಗಳ ಬಗ್ಗೆ ಯಾರೂ ತಲೆಕೆಡಿಸಿಕೊಳ್ಳಬೇಡಿ ಶಿಕ್ಷಣ ಇಲಾಖೆ ಸಮರ್ಥವಾಗಿ ನಿಭಾಯಿಸುವೆ: ಶಿಕ್ಷಣ ಸಚಿವ ಮಧು ಬಂಗಾರಪ್ಪ

**ಬೆಂಗಳೂರು:** ಮುಖ್ಯಮಂತ್ರಿ ಸಿದ್ಧರಾಮಯ್ಯ ನನ್ನ ಮೇಲೆ ನಂಬಿಕೆ ಇಟ್ಟು ಲಕ್ಷಾಂತರ ಶಿಕ್ಷಕರು, ಮಕ್ಕಳನ್ನು ನಿಭಾಯಿಸುವ ಮಹತ್ವದ ಶಿಕ್ಷಣ ಖಾತೆಯನ್ನು ನೀಡಿದ್ದಾರೆ,ಅದನ್ನು ಸಮರ್ಥವಾಗಿ ಮುನ್ನಡೆಸುತ್ತಿದ್ದೇನೆ. ಮುಖ್ಯಮಂತ್ರಿಗಳು ಕೂಡ ನಮ್ಮ ಕಾರ್ಯವೈಖರಿಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ, ಸಮಾಜಿಕ ಜಾಲತಾಣಗಳಲ್ಲಿ ಬರುವ ಟ್ರೋಲ್ ಗಳ ಕುರಿತು ಯಾರೂ ತಲೆಕೆಡಿಸಿಕೊಳ್ಳಬೇಕಿಲ್ಲ ಎಂದು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಹೇಳಿದರು.

ಬೆಂಗಳೂರಿನ ಅರಮನೆ ಮೈದಾನದಲ್ಲಿ ಹಮ್ಮಿಕೊಂಡಿದ್ದ ಶಿವಮೊಗ್ಗ ಜಿಲ್ಲೆಯ ಸೊರಬ ವಿಧಾನ ಸಭಾ ಕ್ಷೇತ್ರದ ಬೆಂಗಳೂರು ನಿವಾಸಿಗಳ ಸಮ್ಮಿಲನ 2024ರ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಕಳೆದ ಅನೇಕ ದಶಕಗಳಿಂದ ನಮ್ಮ ತಂದೆ ಬಂಗಾರಪ್ಪನವರನ್ನು ಗೆಲ್ಲಿಸಿ ರಾಜ್ಯ ಮುಖ್ಯಮಂತ್ರಿ ಮಾಡುವಲ್ಲಿ ಮತ್ತು ನನ್ನ ಎರಡು ಬಾರಿ ಗೆಲ್ಲಿಸಿ ಮಂತ್ರಿಯನ್ನಾಗಿ ಮಾಡಿದ್ದೀರಿ ನಿಮ್ಮ ಋಣ ತೀರಿಸಲು ಸಾಧ್ಯವಿಲ್ಲ,ಯಾವುದೇ ಸಮಯದಲ್ಲಿ ಮನೆಗೆ ತಮ್ಮ ಸಮಸ್ಯೆಗಳನ್ನು ಹೊತ್ತು ತನ್ನಿ ಸಾಧ್ಯವಾದಷ್ಟು ಅದಕ್ಕೆ ಪರಿಹಾರ ಕಂಡುಕೊಡುವುದಾಗಿ ತಿಳಿಸಿದರು.

ಕಳೆದ ಒಂದೂವರೆ ವರ್ಷಗಳಿಂದ ರಾಜ್ಯ ಸರ್ಕಾರದಲ್ಲಿನ ಜನಪರ ಕಾರ್ಯಕ್ರಮಗಳಿಂದ ಸೊರಬ ತಾಲೂಕಿನ ಅಭಿವೃದ್ಧಿ ಕೈಗೊಳ್ಳಲು ಸಾಧ್ಯವಾಗಿರಲಿಲ್ಲ, ಸದ್ಯ ಸರ್ಕಾರ ದಿಂದ ಸುಮಾರು 250ಕೋಟಿ ರೂಪಾಯಿ ಹಣವನ್ನು ಅಭಿವೃದ್ಧಿ ಕಾರ್ಯಗಳಿಗಾಗಿ ಬಿಡುಗಡೆ ಮಾಡಲಾಗಿದೆ,ಅಭಿವೃದ್ಧಿ ಕಾಮಗಾರಿಗಳಿಗೆ ಸದ್ಯದಲ್ಲೇ ಚಾಲನೆ ನೀಡಲಾಗುವುದು, ಯಾವುದೇ ರಾಜಕೀಯ ಪಕ್ಷ ಬೇದ ಬಾವವಿಲ್ಲದೇ, ನಾವು ಸೋಲಲ್ಲಿ ಗೆಲ್ಲಲ್ಲಿ ಇಂತಹ ವಿಶೇಷ ಸಮ್ಮಿಲನ ಕಾರ್ಯಕ್ರಮವನ್ನು ಶಿವಮೊಗ್ಗ,ಸೊರಬ ತಾಲೂಕಿನ ಬೆಂಗಳೂರಿನ ನಿವಾಸಿಗಳಿಗಾಗಿ ಪಕ್ಷಾತೀತವಾಗಿ ಹಮ್ಮಿಕೊಳ್ಳುವುದಾಗಿ ತಿಳಿಸಿದರು.

ನಟ ಶಿವರಾಜ್ ಕುಮಾರ್ ಅವರ ಅನಾರೋಗ್ಯ ನಿಮಿತ್ತ ಆಸ್ಪತ್ರೆಯಲ್ಲಿ ದಾಖಲಾಗಿರುವ ಹಿನ್ನಲೆಯಲ್ಲಿ ತಡವಾಗಿ ಕಾರ್ಯಕ್ರಮಕ್ಕೆ ಆಗಮಿಸಿದ ಸಚಿವ ಮಧು ಬಂಗಾರಪ್ಪ, ಶಿವರಾಜ ಕುಮಾರ್ ಅವರು ಆರೋಗ್ಯವಾಗಿದ್ದಾರೆ, ಸಣ್ಣ ಆರೋಗ್ಯದ ಸಮಸ್ಯೆಯಿಂದ ಚಿಕಿತ್ಸೆಗಾಗಿ ಅವರು ಅಮೆರಿಕಕ್ಕೆ ತೆರಳಲಿದ್ದು ಒಂದು ವಾರಗಳ ಕಾಲ ತಾವು ಅವತ ಜತೆಯಲ್ಲಿ ಇರುವುದಾಗಿ ತಿಳಿಸಿದರು.

ಬಂಗಾರಪ್ಪ ಅವರ ಹಿರಿಯ ಪುತ್ರಿ ಸುಜಾತ ತಿಲಕ್ ಕುಮಾರ್ ಮಾತನಾಡಿ,ಸಂಬಂಧಗಳನ್ನು ಬೆಸೆಯುವ ಇಂತಹ ಸಮ್ಮಿಲನ ಕಾರ್ಯಕ್ರಮಗಳು ನಡೆಯುತ್ತಿರಬೇಕು, ವಿಶೇಷವಾಗಿ ಮಲೆನಾಡಿನ ಕೊಟ್ಟೆ ಕಡಬು, ತೊಡೆದೊಳಗಿ,ಕಜ್ಜಾಯ, ಕೋಳಿಸಾರು, ಹೀಗೆ ವಿವಿಧ ತಿನಿಸುಗಳ ಪರಿಚಯವನ್ನು ಬೆಂಗಳೂರು ಜನತೆಗೆ ಮಾಡಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಬೆಂಗಳೂರು ಸೊರಬ ನಿವಾಸಿಗಳ ಪೋಷಕರ ಮಕ್ಕಳು ನಡೆಸಿ ಕೊಟ್ಟ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಎಲ್ಲರ ಮನಸೂರೆಗೊಂಡಿತ್ತು.

ಕಾರ್ಯಕ್ರಮದಲ್ಲಿ ಒಂದೂವರೆ ಸಾವಿರ ಮಂದಿಗೆ ಮಾಂಸಹಾರಿ,ಸಸ್ಯಹಾರಿ ಭೋಜನ ವ್ಯವಸ್ಥೆ ಮಾಡಲಾಗಿತ್ತು.

ಕಾರ್ಯಕ್ರಮದಲ್ಲಿ ಸಮ್ಮಿಲನ 2024ರ ಕಾರ್ಯಕ್ರಮದ ಸಂಚಾಲಕರಾದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನಿರ್ದೇಶಕ ಏಕಾಂತಪ್ಪ,ವಕೀಲರಾದ ಕೇಶವಮೂರ್ತಿ ಹಾಲಗಳಲೆ,ಕುಮಾರಸ್ವಾಮಿ ಹೊಸೂರು,ದಯಾನಂದ ಬಿದರಗೆರೆ, ಮುಕುಂದ ಹಿರೇಇಡಗೋಡು, ಅನಿಲ್, ಗಣಪತಿ ಹಳೆ ಸೊರಬ, ಯುವರಾಜ್ ಓಟೂರು, ಮತ್ತಿತರರು ಭಾಗವಹಿಸಿದ್ದರು.



**ಬೆಳಗಾವಿ:** ಚಳಿಗಾಲದ ಅಧಿವೇಶನದ ಮೊದಲ ದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು "ಮಹಾತ್ಮ ಗಾಂಧಿ ಅವರ ನೇತೃತ್ವದಲ್ಲಿ ನಡೆದ ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ" ಕಾರ್ಯಕ್ರಮದ ಮಹಾತ್ಮಗಾಂಧಿ ಅವರ ಲೋಗೋ ಅನಾವರಣ ಗೊಳಿಸಿದರು. ಬಳಿಕ ಸುವರ್ಣಸೌಧದ ಮೊದಲ ಮಹಡಿಯಲ್ಲಿ ಅನುಭವ ಮಂಟಪದ ತೈಲ ಕಲಾಕೃತಿಯನ್ನು ಲೋಕಾರ್ಪಣೆಗೊಳಿಸಿದ, ಸಭಾಧ್ಯಕ್ಷರ ಕೊಠಡಿಯಲ್ಲಿ ಅನುಭವ ಮಂಟಪ ತೈಲ ಕಲಾಕೃತಿಯ ಕಲಾವಿದರನ್ನು ಸನ್ಮಾನಿಸಿದರು.

## ಚಳಿಗಾಲದ ಅಧಿವೇಶನ ಹಿನ್ನೆಲೆ: ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ಕರೆದ ಸಿಎಂ

**ಬೆಳಗಾವಿ:** ಇಂದಿನಿಂದ ಚಳಿಗಾಲದ ಅಧಿವೇಶನ ಆರಂಭವಾಗಲಿದ್ದು ಈ ಹಿನ್ನೆಲೆಯಲ್ಲಿ ಸಿಎಂ ಸಿದ್ದರಾಮಯ್ಯ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ಕರೆದಿದ್ದಾರೆ.

ಸಿಎಂ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಬೆಳಗಾವಿಯ ಖಾಸಗಿ ಹೋಟೆಲ್ ನಲ್ಲಿ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಡೆಯಲಿದೆ. ಸಭೆಯಲ್ಲಿ ಕಾಂಗ್ರೆಸ್ ಶಾಸಕರು, ಸಂಸದರು, ಪರಿಷತ್ ಸದಸ್ಯರು ಭಾಗಿಯಾಗಲಿದ್ದಾರೆ.

ಅಧಿವೇಶನದಲ್ಲಿ ರಾಜ್ಯ ಸರ್ಕಾರದ ವಿರುದ್ಧ ಹಲವು ಆರೋಪ ಮಾಡಲಿರುವ ವಿಪಕ್ಷಗಳು ಸರ್ಕಾರವನ್ನ ಇಕ್ಕಟ್ಟಿಗೆ ಸಿಲುಕಿಸುವ ಸಾಧ್ಯತೆ ಇದೆ. ಈ ಹಿನ್ನೆಲೆ ವಿಪಕ್ಷಗಳ ಆರೋಪಗಳಿಗೆ ಪ್ರತ್ಯುತ್ತರ ನೀಡಲು 'ಕೈ' ಪಡೆ ಸಿದ್ಧತೆ ನಡೆಸಿದ್ದು ಸಭೆಯಲ್ಲಿ ಸಿಎಂ ಸಿದ್ದರಾಮಯ್ಯ ಕಾಂಗ್ರೆಸ್ ಶಾಸಕರಿಗೆ ಪಾಠ ಮಾಡಲಿದ್ದಾರೆ.

## ಒಂದಿಷ್ಟು ಬಿಜೆಪಿಗರು ರಾತ್ರಿ ವೇಳೆ ಡಿಕೆ ಶಿವಕುಮಾರ್‌ರನ್ನು ಭೇಟಿ ಮಾಡ್ತಾರೆ: ಶಾಸಕ ಎಸ್.ಟಿ ಸೋಮಶೇಖರ್



**ಬೆಳಗಾವಿ:** ಯಶವಂತಪುರದ ಬಿಜೆಪಿ ಶಾಸಕ ಎಸ್.ಟಿ ಸೋಮಶೇಖರ್ ಇತ್ತೀಚೆಗೆ ಕಾಂಗ್ರೆಸ್ ಜೊತೆ ಗುರುತಿಸಿಕೊಳ್ಳುತ್ತಿದ್ದು ಹಲವು ಬಾರಿ ಬಿಜೆಪಿ ನಾಯಕರ ವಿರುದ್ದವೇ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಇದೀಗ ಮತ್ತೆ ಬಿಜೆಪಿ ವಿರುದ್ದ ಕಿಡಿಕಾರಿದ್ದಾರೆ.

ಇಂದು ಮಾತನಾಡಿದ ಶಾಸಕ ಎಸ್ ಟಿ ಸೋಮಶೇಖರ್, ಒಂದಿಷ್ಟು ಬಿಜೆಪಿಗರು ಡಿಸಿಎಂ ಡಿಕೆ ಶಿವಕುಮಾರ್ ಅವರನ್ನ ರಾತ್ರಿ ವೇಳೆ ಭೇಟಿ ಮಾಡ್ತಾರೆ. ಆದರೆ ನಾನು ಡಿಸಿಎಂ ಅವರನ್ನ ರಾತ್ರಿ ಭೇಟಿ ,ಮಾಡಿಲ್ಲ. ಬೆಳಿಗ್ಗೆಯೇ ಭೇಟಿ ಮಾಡುತ್ತೇನೆ. ವಿಜಯೇಂದ್ರ ನೇರವಾಗಿ ಹೇಳಲಾಗದೆ ನನ್ನ ಹೆಸರು ಹೇಳ್ತಿದ್ದಾರೆ ಎಂದು ಟಾಂಗ್ ಕೊಟ್ಟರು.

ಕ್ಷೇತ್ರ ಕೆಲಸದ ವಿಚಾರದಲ್ಲಿ ಸಿಎಂ ಮತ್ತು ಡಿಸಿಎಂ ಭೇಟಿ ಮಾಡಿದ್ದೀನಿ. ನನ್ನ ವಿರುದ್ದ ಯಾವುದೇ ಕ್ರಮ ಕೈಗೊಂಡರೂ ಸ್ವಾಗತಿಸುತ್ತೇನೆ. ನನ್ನ ಬಗ್ಗೆ ಕೋರ್ ಕಮಿಟಿ ಸಭೆಯಲ್ಲಿ ಕ್ರಮ ಜರುಗಿಸಲು ಹೇಳಿದವರಿಗೆ ತಾಯಿ ಚಾಮುಂಡೇಶ್ವರಿ ಒಳ್ಳೆಯದು ಮಾಡಲಿ ಎಂದು ಎಸ್ ಟಿ ಸೋಮಶೇಖರ್ ಟಾಂಗ್ ಕೊಟ್ಟರು.

ಪಕ್ಷ ವಿರೋಧಿ ಚಟುವಟಿಕೆ ಆರೋಪದ ಮೇಲೆ ಎಸ್.ಟಿ. ಸೋಮಶೇಖರ್ ಮತ್ತು ಶಿವರಾಮ್ ಹೆಬ್ಬಾರ್ ಅವರನ್ನು ಪಕ್ಷದಿಂದ ಅಮಾನತು ಮತ್ತು ಅನರ್ಹಗೊಳಿಸುವ ಬಗ್ಗೆ ವರಿಷ್ಠರಿಗೆ ಮನವಿ ಮಾಡಲು ಶನಿವಾರ ನಡೆದ ಬಿಜೆಪಿ ಕೋರ್ ಕಮಿಟಿ ಸಭೆ ತೀರ್ಮಾನ ಕೈಗೊಳ್ಳಲಾಗಿದೆ ಎನ್ನಲಾಗುತ್ತಿದೆ.

## 26, 27ರಂದು ಬೆಳಗಾವಿಯಲ್ಲಿ ಬೃಹತ್ ಗಾಂಧಿ ಭಾರತ ಕಾರ್ಯಕ್ರಮ; ಬೆಳಗಾವಿ ಜಿಲ್ಲೆಯಲ್ಲಿ ಹಬ್ಬದ ವಾತಾವರಣ: ಡಿಸಿಎಂ ಡಿ.ಕೆ. ಶಿವಕುಮಾರ್

**ಬೆಳಗಾವಿ.:** "ಇದೇ ತಿಂಗಳು 26 ಹಾಗೂ 27ರಂದು ಗಾಂಧಿ ಭಾರತ ಕಾರ್ಯಕ್ರಮ ಅಂಗವಾಗಿ ಕಾಂಗ್ರೆಸ್ ಕಾರ್ಯಕಾರಣಿ ಸಭೆ ಹಾಗೂ ಬೃಹತ್ ಸಾರ್ವಜನಿಕ ಸಭೆ ಮಾಡಲಾಗುವುದು. ಇಡೀ ಜಿಲ್ಲೆಯಲ್ಲಿ ಹಬ್ಬದ ವಾತಾವರಣ ಸೃಷ್ಟಿಯಾಗಲಿದೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ಇಲ್ಲಿನ ಬೆಳಕವಾಡಿಯು ವೀರಸೌಧದ ಬಳಿ ಮಾಧ್ಯಮಗಳಿಗೆ ಶಿವಕುಮಾರ್ ಅವರು ಸೋಮವಾರ ಪ್ರತಿಕ್ರಿಯಿಸಿ, ಗಾಂಧಿ ಭಾರತ ಕಾರ್ಯಕ್ರಮದ ಬಗ್ಗೆ ಮಾಹಿತಿ ನೀಡಿದರು.

"ಮಹಾತ್ಮಾ ಗಾಂಧಿಜಿ ಅವರು ದೇಶದ ಸ್ವಾತಂತ್ರ್ಯ ಹೋರಾಟದ ನಾಯಕತ್ವ ವಹಿಸಲು ಕಾಂಗ್ರೆಸ್ ಅಧ್ಯಕ್ಷ ಜವಾಬ್ದಾರಿಯನ್ನು ಸ್ವೀಕರಿಸಿದ ಬೆಳಗಾವಿ ಅಧಿವೇಶನಕ್ಕೆ ನೂರು ವರ್ಷವಾಗಿದೆ. ದೇಶಕ್ಕೆ ಸ್ವಾತಂತ್ರ್ಯ ಬಂದ ನಂತರ ನಮಗೆ ಪ್ರಜಾಪ್ರಭುತ್ವ ವ್ಯವಸ್ಥೆ ಬಂದಿದೆ. ನಾವೆಲ್ಲರೂ ಇದರ ಫಲವನ್ನು ಅನುಭವಿಸುತ್ತಿದ್ದು, ಈ ಶತಮಾನೋತ್ಸವದ ಸಂಭ್ರಮಾಚರಣೆ ಮಾಡುತ್ತಿದ್ದೇವೆ" ಎಂದರು. "ನೂರು ವರ್ಷದ ಈ ಸಂಭ್ರಮವನ್ನು ಸರ್ಕಾರ ಹಾಗೂ ಕಾಂಗ್ರೆಸ್ ಪಕ್ಷದಿಂದ ಗಾಂಧಿ ಭಾರತ ಎಂಬ ಕಾರ್ಯಕ್ರಮದ ಅಡಿ ವರ್ಷಪೂರ್ತಿ ಆಚರಣೆಗೆ ಮುಂದಾಗಿದ್ದೇವೆ. ಗಾಂಧಿ ಭಾರತದ ಚಿಹ್ನೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅನಾವರಣ ಮಾಡಿದ್ದಾರೆ. ನೂರು ವರ್ಷದ ಹಿಂದೆ ಮಹಾತ್ಮಾ ಗಾಂಧಿಜಿ ಅವರು ಅಲಂಕರಿಸಿದ ಸ್ಥಾನದಲ್ಲಿ ಈಗ ನಮ್ಮದೇ ರಾಜ್ಯದ ಮಲ್ಲಿಕಾರ್ಜುನ ಖರ್ಗೆ ಅವರು ಇದ್ದಾರೆ" ಎಂದು ತಿಳಿಸಿದರು.

"ಈ ಹಿನ್ನೆಲೆಯಲ್ಲಿ ಇದೇ ತಿಂಗಳು 26 ಹಾಗೂ 27ರಂದು ದೊಡ್ಡ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ರಾಷ್ಟ್ರ ನಾಯಕರು, ಕಾರ್ಯಕಾರಿ ಸಮಿತಿ ಸದಸ್ಯರು, ಸಂಸದರು ಆಗಮಿಸುತ್ತಿದ್ದಾರೆ. ಕಾಂಗ್ರೆಸ್ ಪಕ್ಷದ ಕಾರ್ಯಕಾರಣಿ ಸಭೆ ಹಾಗೂ ಬೃಹತ್ ಸಾರ್ವಜನಿಕ ಸಭೆ ನಡೆಸಲಾಗುವುದು. ಗಾಂಧೀಜಿ ಅವರು ಬಂದು ಹೋಗಿದ್ದ ಸ್ಥಳಗಳಿಗೆ ಭೇಟಿ ನೀಡಲಾಗುವುದು.

ಎಲ್ಲೆಲ್ಲಿ ಸಭೆ ಮಾಡಬಹುದು ಎಂದು ಮೂರು ನಾಲ್ಕು ಜಾಗಗಳನ್ನು ನಾವು ಗುರುತಿಸುತ್ತಿದ್ದೇವೆ. ನಾಳೆ ನಾಡಿದ್ದು ನಮ್ಮ ರಾಷ್ಟ್ರೀಯ ನಾಯಕರು ಕಾರ್ಯಕ್ರಮದ ಸ್ಥಳ ಪರಿಶೀಲನೆ ಮಾಡಲಿದ್ದಾರೆ. ಈ ಕಾರ್ಯಕ್ರಮಗಳ ರೂಪುರೇಷೆ ಮಾಡಲು ಹೆಚ್.ಕೆ ಪಾಟೀಲ್, ವೀರಪ್ಪ ಮೋಯ್ಲಿ ಹಾಗೂ ಬಿ.ಎಲ್ ಶಂಕರ್ ಅವರನ್ನು ಒಳಗೊಂಡ ಸಮಿತಿ ರಚಿಸಲಾಗಿದೆ" ಎಂದು ಮಾಹಿತಿ ನೀಡಿದರು. ಕಾರ್ಯಕ್ರಮಕ್ಕೆ ಅಮೆರಿಕ ಮಾಜಿ ಅಧ್ಯಕ್ಷ ಬರಾಕ್ ಒಬಾಮಾ ಆಗಮಿಸುವ ಬಗ್ಗೆ ಕೇಳಿದಾಗ, "ಅವರು ಬಂದು ಭಾಷಣ ಮಾಡುವ ಆಲೋಚನೆ ಇತ್ತು. ಸಮಯ ಹಾಗೂ ಭದ್ರತೆ ವಿಚಾರಗಳಿವೆ. ಈ ಬಗ್ಗೆ ಚರ್ಚೆ ನಡೆಯುತ್ತಿದೆ" ಎಂದರು.

## ಸುದ್ದಿ ಸಂಜೆ

### ನಕಲಿ ಕಟ್ಟಡ ಕಾರ್ಮಿಕ ಕಾರ್ಡ್‌ಗಳನ್ನು ಪತ್ತೆ ಹಚ್ಚಿ ರದ್ದು ಮಾಡುತ್ತೇವೆ: ಸಚಿವ ಲಾಡ್

**ಬೆಳಗಾವಿ:** "ಕಾರ್ಮಿಕ ಇಲಾಖೆಯಿಂದ 'ಅಂಬೇಡ್ಕರ್ ಸೇವಾ ಕೇಂದ್ರ' ಎಂಬ ನೂತನ ಕಾರ್ಯಕ್ರಮಕ್ಕೆ ಜನವರಿ ಅಥವಾ ಫೆಬ್ರವರಿಯಲ್ಲಿ ಚಾಲನೆ ಸಿಗಲಿದೆ. ಈಗಾಗಲೇ 58 ಲಕ್ಷ ಇದ್ದ ಕಟ್ಟಡ ಕಾರ್ಮಿಕ ಕಾರ್ಡ್‌ಗಳನ್ನು 38 ಲಕ್ಷಕ್ಕೆ ತಂದಿದ್ದೇವೆ" ಎಂದು ಕಾರ್ಮಿಕ ಇಲಾಖೆ ಸಚಿವ ಸಂತೋಷ್ ಲಾಡ್ ತಿಳಿಸಿದ್ದಾರೆ. ನಗರದಲ್ಲಿಂದು ಅವರು ಮಾಧ್ಯಮದವರೊಂದಿಗೆ ಮಾತನಾಡಿದರು.

"43 ವಿಭಾಗಗಳಲ್ಲಿ 43 ವಾಹನಗಳು ಸಂಚರಿಸಲಿವೆ. ಇಲಾಖೆಯ ಪ್ರತಿನಿಧಿಗಳು ನಮ್ಮ ಇಲಾಖೆಯಿಂದ ಲಾಭ ಪಡೆದ ಫಲಾನುಭವಿಗಳನ್ನು ಭೇಟಿಯಾಗಿ ಮಾಹಿತಿ ಕಲೆ ಹಾಕಲಿದ್ದಾರೆ. ಜೊತೆಗೆ, ನಕಲಿ ಕಾರ್ಮಿಕ ಕಾರ್ಡ್‌ಗಳನ್ನು ಪತ್ತೆ ಹಚ್ಚಿ ಅವುಗಳನ್ನು ರದ್ದು ಮಾಡುತ್ತೇವೆ. ನಾಲ್ಕೈದು ತಿಂಗಳಲ್ಲಿ ಶೇ.70 ರಿಂದ 80ರಷ್ಟು ನಕಲಿ ಕಟ್ಟಡ ಕಾರ್ಮಿಕ ಕಾರ್ಡ್‌ಗಳನ್ನು ರದ್ದು ಮಾಡುತ್ತೇವೆ" ಎಂದರು.

"ಈ ಬಾರಿಯ ಅಧಿವೇಶನದಲ್ಲಿ ಪ್ರತಿಪಕ್ಷಗಳಿಗೆ ಸರ್ಕಾರ ಸಮರ್ಪಕ ಉತ್ತರ ನೀಡುತ್ತದೆ. ಬಿಜೆಪಿಯವರಿಗೆ ನಾವು ಸದನದಲ್ಲಿ ಮಾತನಾಡಲು ಹೆಚ್ಚು ಅವಕಾಶ ನೀಡಿದ್ದೇವೆ. ಬಿಜೆಪಿ ನಾಯಕರು ಉತ್ತರ ಕರ್ನಾಟಕದ ಸಮಗ್ರ ಅಭಿವೃದ್ಧಿಯ ಬಗ್ಗೆ ಚರ್ಚೆಗೆ ಆಸಕ್ತಿ ತೋರಿಸಲಿ. ಅಭಿವೃದ್ಧಿ ಬಿಟ್ಟು ಬಿಜೆಪಿಯವರು ಕೇವಲ ವಿವಾದಾತ್ಮಕ ಹಾಗೂ ರಾಜಕೀಯ ವಿಷಯಗಳ ಕುರಿತು ಚರ್ಚೆಗೆ ಹೋಗ್ತಾರೆ" ಎಂದು ಹೇಳಿದರು.

"ಕಾಂಗ್ರೆಸ್ ಸರ್ಕಾರ ಪಂಚಮಸಾಲಿ ಸೇರಿದಂತೆ ಯಾವುದೇ ಹೋರಾಟಕ್ಕೆ ಅಡ್ಡಿಪಡಿಸುತ್ತಿಲ್ಲ. ಯಾರೇ ಆಗಲಿ ಅಧಿಕಾರದಲ್ಲಿ ಇದ್ದಾಗ ಪ್ರತಿಭಟನೆಗಳು ನಡೆಯುವುದು ಸಹಜ ಪ್ರಕ್ರಿಯೆ. ಆ ಪ್ರತಿಭಟನೆಗಳು ಪ್ರಜಾಪ್ರಭುತ್ವದ ಸೌಂದರ್ಯವನ್ನು ಇನ್ನಷ್ಟು ಹೆಚ್ಚಾಗುವಂತೆ ಮಾಡುತ್ತವೆ" ಎಂದು ತಿಳಿಸಿದರು.

### ಮೈಸೂರಿನಲ್ಲಿ ಗುಜರಾತ್ ಮಾದರಿ ಚಿರತೆ ಪುನರ್ವಸತಿ ಕೇಂದ್ರಕ್ಕೆ ಡಿಪಿಆರ್



**ಮೈಸೂರು:** ಜಿಲ್ಲೆಯ ಕಾಡಂಚಿನ ಹಾಗೂ ನಗರ ಪ್ರದೇಶ ವ್ಯಾಪ್ತಿಯಲ್ಲಿ ಇತ್ತೀಚಿನ ವರ್ಷಗಳಲ್ಲಿ ಚಿರತೆಗಳ ದಾಳಿ ಹೆಚ್ಚಾಗುತ್ತಿದೆ. ಚಿರತೆಗಳ ಬಿಕ್ಕಟ್ಟು ತಡೆಯಲು ಹಾಗೂ ಗಾಯಗೊಂಡ ಚಿರತೆಗಳಿಗೆ ಚಿಕಿತ್ಸೆ ನೀಡಿ ಆರೈಕೆ ಮಾಡುವ ಉದ್ದೇಶದಿಂದ ಇಲವಾಲದಲ್ಲಿ ಚಿರತೆ ಸಂರಕ್ಷಣೆ ಮತ್ತು ಪುನರ್ವಸತಿ ಕೇಂದ್ರ ನಿರ್ಮಾಣ ಮಾಡಲು ಡಿಪಿಆರ್ ತಯಾರಾಗಿದೆ. ಶೀಘ್ರದಲ್ಲೇ ಅನುಮೋದನೆ ದೊರೆಯುವ ನಿರೀಕ್ಷೆ ಇದೆ.

ಗುಜರಾತ್ ಮಾದರಿಯಲ್ಲಿ ಮೈಸೂರು–ಹುಣಸೂರು ರಸ್ತೆಯಲ್ಲಿರುವ ಇಲವಾಲದ ಅರಣ್ಯ ಪ್ರದೇಶದಲ್ಲಿ ಅತ್ಯಾಧುನಿಕ ಶೈಲಿಯಲ್ಲಿ ಪುನರ್ವಸತಿ ಕೇಂದ್ರ ನಿರ್ಮಾಣಕ್ಕೆ ವಿಸ್ತೃತ ಯೋಜನಾ ವರದಿ ಸಿದ್ಧಗೊಂಡಿದ್ದು, ಸರ್ಕಾರ ಒಪ್ಪಿಗೆಗೆ ಕಾಯಲಾಗುತ್ತಿದೆ. ಈ ಯೋಜನೆಗೆ ರಾಜ್ಯ ಸರ್ಕಾರದಿಂದ ಅನುಮೋದನೆ ದೊರೆತರೆ, ರಾಜ್ಯದಲ್ಲೇ ಮೊದಲ ಬಾರಿಗೆ ಮೈಸೂರಿನಲ್ಲಿ ಚಿರತೆ ಸಂರಕ್ಷಣೆ ಮತ್ತು ಪುನರ್ವಸತಿ ಕೇಂದ್ರ ಆರಂಭವಾಗಲಿದೆ.

ಕಳೆದ ನಾಲ್ಕು ವರ್ಷಗಳಿಂದ ಮೈಸೂರು, ಮಂಡ್ಯ, ಚಾಮರಾಜನಗರ, ಹಾಸನ, ಕೊಡಗು ಜಿಲ್ಲೆಗಳಲ್ಲಿ ಚಿರತೆ ಹಾವಳಿ ಮಿತಿಮೀರಿದೆ. ತಿ.ನರಸೀಪುರ ತಾಲೂಕಿನ ಗ್ರಾಮದಲ್ಲಿ ಚಿರತೆ ದಾಳಿಗೆ ಸಿಲುಕಿ ಶಾಲಾ ಬಾಲಕನೊಬ್ಬ ಮೃತಪಟ್ಟ ವಿಚಾರ ರಾಜ್ಯಾದ್ಯಂತ ಸದ್ದು ಮಾಡಿತ್ತು. ಮಾನವ ಪ್ರಾಬಲ್ಯದ ಭೂ ಪ್ರದೇಶದಲ್ಲಿ ಹೊಂದಿಕೊಳ್ಳುವುದು, ಸುಗ್ಗಿಯ ಕಾಲದಲ್ಲಿ ಗ್ರಾಮಗಳತ್ತ ಬರುತ್ತಿರುವುದರಿಂದ ಒಂದಲ್ಲಾ ಒಂದು ಪ್ರದೇಶಗಳಲ್ಲಿ ಚಿರತೆ ಪ್ರತ್ಯಕ್ಷವಾಗಿ ಗ್ರಾಮಸ್ಥರಲ್ಲಿ ಆತಂಕ ಮೂಡಿಸುತ್ತಿವೆ.



ಮಹಾಲಕ್ಷ್ಮಿಪುರಂನ ನಾಗಪುರದಲ್ಲಿರುವ ಬಿಜಿಎಸ್ ವರ್ಲ್ಡ್ ಸ್ಕೂಲ್‌ನ ಆಡಿಟೋರಿಯಂ ನಲ್ಲಿ ಆಯೋಜಿಸಿದ್ದ ಶಾಲಾ ವಾರ್ಷಿಕೋತ್ಸವ ಸಮಾರಂಭದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಜಗದ್ಗುರು ಶ್ರೀ ಶ್ರೀ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಪ್ರಶಸ್ತಿ ವಿತರಿಸಿದರು. ಕಾರ್ಯಕ್ರಮದಲ್ಲಿ ಮಠದ ಶ್ರೀ ಸೌಮ್ಯನಾಥ ಸ್ವಾಮೀಜಿ, ಮಾಜಿ ಸಚಿವರು ಹಾಗು ಸ್ಥಳೀಯ ಶಾಸಕರಾದ ಕೆ ಗೋಪಾಲಯ್ಯ, ಇಸ್ರೋ ವಿಜ್ಞಾನಿ ಶಿವಾನಿ,ಉಪ ಪೋಲಿಸ್ ಆಯುಕ್ತ ದೇವರಾಜ್, ಸಮಾಜ ಸೇವಾಕ ರಾಮಣ್ಣಗೌಡ, ಶಾಲಾ ಶಿಕ್ಷಕ ಶಿಕ್ಷಕಿಯರು ಹಾಗು ವಿದ್ಯಾರ್ಥಿಗಳು ಪೋಷಕರು ಪಾಲ್ಗೊಂಡಿದ್ದರು.

### ಬಿಮ್ಸ್ ಆಸ್ಪತ್ರೆಗೆ ವಿಜಯೇಂದ್ರ ಭೇಟಿ: ಬಾಣಂತಿಯರು, ಶಿಶುಗಳ ಸಾವಿಗೆ ಸರ್ಕಾರದ ಬೇಜವಾಬ್ದಾರಿಯೇ ಕಾರಣವೆಂದು ಕಿಡಿ

**ಬೆಳಗಾವಿ:** ಬಳ್ಳಾರಿಯಲ್ಲಿ ಬಾಣಂತಿಯರು ಸಾವು ಪ್ರಕರಣ ಬೆನ್ನಲ್ಲೇ ಬೆಳಗಾವಿಯಲ್ಲೂ ಬಾಣಂತಿಯರು, ಶಿಶುಗಳ ಮರಣ ಪ್ರಕರಣ ಕಳೆದ ಆರು ತಿಂಗಳಲ್ಲಿ ಏರಿಕೆಯಾದ ಆರೋಪ ಕೇಳಿಬಂದ ಹಿನ್ನೆಲೆಯಲ್ಲಿ ಇಲ್ಲಿನ ಬಿಮ್ಸ್ ಆಸ್ಪತ್ರೆಯ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಹೆರಿಗೆ ವಾರ್ಡ್‌ಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ. ವೈ. ವಿಜಯೇಂದ್ರ ಭೇಟಿ ನೀಡಿದರು.



ಈ ವೇಳೆ ವಿಜಯೇಂದ್ರ ಅವರಿಗೆ ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಡಿಸಿಎಂ ಡಾ. ಅಶ್ವತ್ಥ ನಾರಾಯಣ, ಶಾಸಕಿ ಶಶಿಕಲಾ ಜೊಲ್ಲೆ ಸೇರಿ ಜಿಲ್ಲೆಯ ಹಲವು ಬಿಜೆಪಿ ಮುಖಂಡರು ಸಾಥ್ ನೀಡಿದರು. ಬಾಣಂತಿಯರ ಆರೋಗ್ಯವನ್ನು ವಿಚಾರಿಸಿ, ವೈದ್ಯರಿಂದ ಮಾಹಿತಿಯನ್ನು ಪಡೆದರು.

ರಾಜಕಾರಣ ಮಾಡುವ ಪ್ರಶ್ನೆ ಇಲ್ಲ: ಬಳಿಕ ಮಾಧ್ಯಮಗಳ ಜೊತೆಗೆ ಮಾತನಾಡಿದ ವಿಜಯೇಂದ್ರ, "ವಿಪಕ್ಷ ನಾಯಕರು ಈಗಾಗಲೇ ಈ ಬಗ್ಗೆ ಮಾತನಾಡಿದ್ದಾರೆ. ಬಳ್ಳಾರಿಯಲ್ಲಿ 6 ಜನ ಬಾಣಂತಿಯರು, ಹಸುಗೂಸುಗಳು ಪ್ರಾಣ ಕಳೆದುಕೊಂಡಿದ್ದಾರೆ. ಎಲ್ಲೊ ಒಂದು ಕಡೆ ಇದರಲ್ಲಿ ರಾಜ್ಯ ಸರ್ಕಾರದ ಬೇಜವಾಬ್ದಾರಿ ಮೇಲ್ನೋಟಕ್ಕೆ ಕಾಣುತ್ತಿದೆ. ಹಾಗಾಗಿ, ಇದರ ಬಗ್ಗೆ ಸಮಗ್ರವಾಗಿ ಸತ್ಯಾಂಶ ತಿಳಿದುಕೊಳ್ಳಬೇಕೆಂದು ಆಸ್ಪತ್ರೆಗೆ ಭೇಟಿ ಕೊಟ್ಟಿದ್ದೇವೆ. ಇದರಲ್ಲಿ ರಾಜಕಾರಣ ಮಾಡುವ ಪ್ರಶ್ನೆ ಇಲ್ಲ" ಎಂದು ಸ್ಪಷ್ಟಪಡಿಸಿದರು.

"ಇಂದು ಬಡವರಿಗೆ ಅನ್ಯಾಯ ಆಗುತ್ತಿದೆ. ಸರ್ಕಾರಿ ಆಸ್ಪತ್ರೆಗೆ ಹೋಗುವ ಬಾಣಂತಿಯರಿಗೆ ತೊಂದರೆ ಆಗುತ್ತಿದ್ದು, ಪ್ರಾಣ ಕಳೆದುಕೊಳ್ಳುತ್ತಿದ್ದಾರೆ. ಸತ್ಯಾಂಶ ಅರ್ಥ ಮಾಡಿಕೊಳ್ಳಬೇಕೆಂದು ಇಲ್ಲಿಗೆ ಬಂದಿದ್ದೇವೆ. ಈ ಬಗ್ಗೆ ಸದನದಲ್ಲಿ ಚರ್ಚಿಸುತ್ತೇವೆ. ಆರೋಗ್ಯ ಸಚಿವರು, ಜಿಲ್ಲಾ ಉಸ್ತುವಾರಿ ಸಚಿವರು ಸೇರಿ ಯಾರೂ ತಲೆ ಕೆಡಿಸಿಕೊಳ್ಳುತ್ತಿಲ್ಲ. ಸರ್ಕಾರಿ ಮೆಡಿಕಲ್ ಕಾಲೇಜಿಗೆ ವೈದ್ಯಕೀಯ ಸಚಿವ ಶರಣಪ್ರಕಾಶ ಪಾಟೀಲರು ಹೋಗುತ್ತಿಲ್ಲ. ಬೇಜವಾಬ್ದಾರಿತನ ಬಿಟ್ಟು ಸರ್ಕಾರ ತುರ್ತಾಗಿ ಈ ಬಗ್ಗೆ ಗಮನಹರಿಸಬೇಕು. ಆ ದೃಷ್ಟಿಕೋನದಿಂದ ಒತ್ತಾಯಿಸುತ್ತಿದ್ದೇವೆ" ಎಂದು ವಿಜಯೇಂದ್ರ ಹೇಳಿದರು.

ಛಲವಾದಿ ನಾರಾಯಣಸ್ವಾಮಿ ಮಾತನಾಡಿ, "ಇಡೀ ರಾಜ್ಯದಲ್ಲಿ ಬಾಣಂತಿಯರು, ಹಸುಗೂಸುಗಳು ತೀರಿಕೊಂಡು ಹೋಗಿರುವುದನು ಗಮನಿಸಿದರೆ, ಇಡೀ ರಾಜ್ಯಾದ್ಯಂತ ಒಂದು ಗೊಂದಲದ ವಾತಾವರಣ ಸೃಷ್ಟಿಯಾಗಿದೆ. ಆಸ್ಪತ್ರೆಗಳು ಶವಾಗಾರ ಆಗುತ್ತಿರುವ ಪರಿಸ್ಥಿತಿ ಬಂದಿದೆ. ಇದಕ್ಕೆ ನೇರ ಕಾರಣ ಕಾಂಗ್ರೆಸ್ ಸರ್ಕಾರ" ಎಂದು ದೂರಿದರು.

"ಯಾವುದೇ ಒಂದು ಸರ್ಕಾರಿ ಆಸ್ಪತ್ರೆ ಬಗ್ಗೆ ಸರ್ಕಾರ ಗಮನ ಕೊಟ್ಟಿಲ್ಲ. ಅವರು ಅಧಿಕಾರದ ದಾಹದಲ್ಲಿ ಏನೆಲ್ಲಾ ಭ್ರಷ್ಟಾಚಾರ ಮಾಡಬಹುದು.. ಇಂಥಹದರಲ್ಲಿ ತೊಡಗಿರುವುದರಿಂದ, ಆಸ್ಪತ್ರೆಗಳ ಮೇಲೆ ಸರ್ಕಾರಕ್ಕೆ ನಿಯಂತ್ರಣ ಇಲ್ಲವೇ ಇಲ್ಲ. ಕಳಪೆ ಔಷಧಿಗಳನ್ನು ಕೊಟ್ಟಿದ್ದರಿಂದಲೇ ಇಂಥ ಘಟನೆಗಳು ನಡೆದಿವೆ. ಈ ಸಮಸ್ಯೆ ಬಗ್ಗೆ ಸದನದಲ್ಲಿ ನಾವು ಧ್ವನಿ ಎತ್ತುತ್ತೇವೆ" ಎಂದು ಹೇಳಿದರು.

#### ಐಎಫ್‌ಬಿ ಕಂಪನಿ ಸೇವೆಯ ಹೆಸರಿನಲ್ಲಿ ಲಕ್ಷಾಂತರ ವಂಚನೆ

### ಆರೋಪಿಗಳನ್ನು ಹಿಡಿದು ಪೋಲೀಸರಿಗೆ ಒಪ್ಪಿಸಿದ ಕಂಪನಿ ಏಜೆಂಟರು




**ಚಿಕ್ಕಬಳ್ಳಾಪುರ:** ಐಎಫ್‌ಬಿ ವಾಷಿಂಗ್ ಮಷೀನ್ ಕಂಪನಿ ಹೆಸರಲ್ಲಿ ಗ್ರಾಹಕರಿಗೆ ಉಚಿತ ಸೇವೆ ನೀಡುವ ನೆಪದಲ್ಲಿ ವಂಚನೆ ಎಸಗುತ್ತಿದ್ದ ಮೂವರು ಆರೋಪಿಗಳನ್ನು ಹಿಡಿದು ಪೊಲೀಸರಿಗೆ ಒಪ್ಪಿಸಿದ ಘಟನೆ ಚಿಕ್ಕಬಳ್ಳಾಪುರ ನಗರದಲ್ಲಿ ನಡೆದಿದೆ.

ವಿವೇಕಾನಂದ ಎಂಟರ್ ಪ್ರೈಸಸ್ ಮಾಲೀಕ ಚರಣ್ ಐಎಫ್‌ಬಿ ವಾಷಿಂಗ್ ಮಿಷನ್ ಅಧಿಕೃತ ಸೇವಾದಾರರಾಗಿ ನಗರದಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ.ಐಎಫ್‌ಬಿ ವಾಷಿಂಗ್ ಮಿಷನ್ ಕೊಳ್ಳುವ ಯಾವುದೇ ಗ್ರಾಹಕರಿಗೆ ಇವರು ಉಚಿತವಾಗಿ ಮನೆಗೆ ಹೋಗಿ ಸೇವೆ ಕೊಡುತ್ತಿದ್ದಾರೆ.

ಪರಿಸ್ಥಿತಿ ಹೀಗಿರುವಾಗ ಇವರಂತೆ ಕಂಪನಿಯ ಹೆಸರು ಹೇಳಿಕೊಂಡು ಗ್ರಾಹಕರ ಮನೆಗೆ ಹೋಗುತ್ತಿದ್ದ ಮಂಡ್ಯ, ಶ್ರೀರಂಗಪಟ್ಟಣ, ತುರುವೇಕೆರೆ ಮೂಲದ ಅರ್ಜುನ್, ದರ್ಶನ್, ಮಂಜುನಾಥ್ ಎಂಬ ಖದೀಮರು ನಾವೇ ಐಎಫ್‌ಬಿ ಕಂಪನಿ ಸೇವಾದಾರರು ಎಂದು ಗ್ರಾಹಕರ ಮನೆಗೆ ತರಳಿ ಯಂತ್ರದಲ್ಲಿರುವ ಅಸಲಿ ಯಂತ್ರಗಳನ್ನು ಕಳಸಿಕೊಂಡು ನಕಲಿ ಮತ್ತು ಕಳಪೆ ವಸ್ತುಗಳನ್ನು ಅದಕ್ಕೆ ಹಾಕಿ ಸಾವಿರಾರು ರೂಪಾಯಿ ಸೇವಾಶುಲ್ಕವಾಗಿ ಪಡೆದು ವಂಚನೆ ಮಾಡುತ್ತಿದ್ದರು ಎನ್ನಲಾಗಿದೆ. ಈಬಗ್ಗೆ ಕಳೆದ 2 ತಿಂಗಳಿಂದ ಪದೇ ಪದೇ ಗ್ರಾಹಕರಿಂದ ದೂರು ಬರುತ್ತಿದ್ದುದನ್ನು ಗಂಭೀರವಾಗಿ ಪರಿಗಣಿಸಿದ ಐಎಫ್‌ಬಿ ಕಂಪನಿ ಅಧಿಕೃತ ಸೇವಾದಾರರಾದ ಚರಣ್ ಖದೀಮರ ಹೆಡೆಮುರಿ ಕಟ್ಟಲು ತೀರ್ಮಾನಿಸಿ ಹೊಂಚುಹಾಕಿದ್ದು, ಇವರು ಬೀಸಿದ ಬಲೆಗೆ ಅವರು ಬಿದ್ದಿದ್ದಾರೆ.

ನಗರದ ಸೆಂಟ್ ಜೋಸೆಫ್ ಕಾನ್ವೆಂಟ್ ಸಮೀಪದ ಮನೆಯೊಂದಕ್ಕೆ ಸೇವೆ ನೀಡುವ ನೆಪದಲ್ಲಿ ಬಂದಿದ್ದ ಖದೀಮರನ್ನು ವಿವೇಕಾನಂದ ಎಂಟರ್ ಪ್ರೈಸಸ್ ಮಾಲೀಕ ಹಾಗೂ ಐಎಫ್‌ಬಿ ವಾಷಿಂಗ್ ಮಿಷನ್ ಅಧಿಕೃತ ಸೇವಾದಾರ ಚರಣ್ ಮತ್ತು ತಂಡ ದಿಢೀರ್ ದಾಳಿ ನಡೆಸಿ 5 ಮಂದಿಯ ಪೈಕಿ ಮೂವರನ್ನು ಪೊಲೀಸರಿಗೆ ಒಪ್ಪಿಸಿ ವಂಚಕರ ಬೃಹತ್ ಜಾಲ ಬೇಧಿಸಲು ಮನವಿ ಮಾಡಿದ್ದಾರೆ.

ಈ ಬಗ್ಗೆ ಮಾಧ್ಯಮದೊಂದಿಗೆ ಮಾತನಾಡಿದ ಚರಣ್ ಚಿಕ್ಕಬಳ್ಳಾಪುರ ನಗರ ಸೇರಿದಂತೆ ಜಿಲ್ಲೆಯಲ್ಲಿ ಈ ತಂಡ ಕಳೆದ ಐದಾರು ತಿಂಗಳಿಂದ ಸುಮಾರು 400 ರಿಂದ 500 ಮಂದಿಗೆ ಟೋಪಿ ಹಾಕಿದ್ದಾರೆ. ಯಂತ್ರದ ಕ್ಲೀನಿಂಗ್ ಪೌಡರ್ ಬದಲಿಸುತ್ತೇವೆ ಎಂದು ಹೇಳಿ ಉಪ್ಪನ್ನು ತುಂಬಿದ್ದಾರೆ. ಇದರ ಬೆಲೆ 10 ರೂಪಾಯಿ ಇದ್ದರೆ 300 ರೂಪಾಯಿ ಬಿಲ್ ಮಾಡಿದ್ದಾರೆ.

ನೀರಿನ ಫಿಲ್ಟರ್ ಒಂದಕ್ಕೆ ಕಂಪನಿಯಲ್ಲಿ 2600 ರೂಪಾಯಿ ಇದ್ದರೆ ಇವರು ಕಡಿಮೆ ಬೆಲೆಗೆ ನೀಡು ತ್ತೇವೆ ಎಂದು ಕಂಪನಿ ವಸ್ತುಗಳನ್ನು ಲಪಟಾಯಿಸಿ ನಕಲು ವಸ್ತುಗಳನ್ನು ಹಾಕಿ ಯಂತ್ರಗಳು ಹಾಳಾಗುವಂತೆ ಮಾಡಿ ಗ್ರಾಹಕರಿಗೆ ಲಕ್ಷಾಂತರ ಹಣ ವಂಚನೆ ಮಾಡಿದ್ದಾರೆ. ವಂಚನೆಯೇ ಇವರ ಕಸುಬಾಗಿದ್ದು ಸುಮಾರು 500 ಮಂದಿ ಇರಬಹುದು ಎಂದು ಶಂಕಿಸಲಾಗಿದೆ. ಈಗ ಬಂಧನಕ್ಕೆ ಒಳಗಾಗಿರುವವರನ್ನು ಪೊಲೀಸರು ಬಾಯಿ ಬಿಡಿಸಿದರೆ ಇವರ ಮೋಸ ಬಯಲಿಗೆ ಬರಲಿದೆ ಎಂದು ತಿಳಿಸಿದರು.

ಒಟ್ಟಾರೆ ಗ್ರಾಹಕರು ಸೇವೆಯ ಹೆಸರಿನಲ್ಲಿ ಮನೆಬಾಗಿಲಿಗೆ ಬರುವವರನ್ನು ಮನೆಯೊಳಗೆ ಬಿಟ್ಟುಕೊಂಡರೆ ಯಂತ್ರಗಳಷ್ಟೇ ಮಾಯವಾಗಲ್ಲ, ಪಡವೆ ವಸ್ತ್ರದ ಜತೆಗೆ ಪ್ರಾಣವೂ ಹೋಗಬಹುದು ಎಂಬ ಎಚ್ಚರಿಕೆಯನ್ನು ನಕಲಿ ವಂಚಕರ ಪ್ರಕರಣ ಬಯಲು ಮಾಡಿದೆ.

# ಹಾಡಹಗಲೇ ಬೈಕ್ ಅಡ್ಡಗಟ್ಟಿ ಮಚ್ಚು ತೋರಿಸಿ ರಾಬರಿ.!

## ಕಳ್ಳರನ್ನು ಹಿಡಿಯಲು ಹೋದವರ ಮೇಲೆಯೇ ಮಚ್ಚಿನಿಂದ ಅಟ್ಯಾಕ್‌ಗೆ ಯತ್ನ

## ಸಿನಿಮೀಯ ಶೈಲಿಯಲ್ಲಿ ಪೆಪ್ಪರ್ ಸ್ಪ್ರೆ ಹೊಡೆದು ಕಳ್ಳರ ಹಿಡಿಯುವ ಯತ್ನ.!

## ಸಾರ್ವಜನಿಕರ ಮೇಲೆಯೇ ಮಚ್ಚು ಬೀಸಿ ಪರಾರಿಯಾದ ಕಿಲಾಡಿ ಕಳ್ಳರು

**ಚಿಕ್ಕಬಳ್ಳಾಪುರ:** ಹಾಡಹಗಲೇ ಬೈಕ್ ಅಡ್ಡಗಟ್ಟಿದ ಕಳ್ಳರು ಮಚ್ಚು ತೋರಿಸಿ ಬೈಕ್ ಸವಾರರ ಬಳಿ ಇದ್ದ ನಗದು ಮೊಬೈಲ್ ದೋಚಿ ಪರಾರಿಯಾಗಿರುವ ಪ್ರಕರಣ ನಂದಿಗಿರಿಧಾಮ ಪೊಲೀಸ್‌ಠಾಣೆ ವ್ಯಾಪ್ತಿ ಕುಡುವತಿ ಗ್ರಾಮದ ಸರಹದ್ದಿನಲ್ಲಿ ನಡೆದಿದೆ.

ಈ ಘಟನೆ ಚಿಕ್ಕಬಳ್ಳಾಪುರ ತಾಲೂಕಿನ ಕುಡುವತಿ ಗ್ರಾಮದಿಂದ ಹುರುಳಗುರ್ಕಿ ಗ್ರಾಮಕ್ಕೆ ತೆರಳುವ ರಸ್ತೆ ನಡುವೆ ಶನಿವಾರ ನಡೆದಿದೆ ಎನ್ನಲಾಗಿದೆ.ಇನ್ನೂ ನಗದು ದೋಚಿ ಪರಾರಿಯಾಗಿದ್ದ ಕಳ್ಳರನ್ನು ಹಿಡಿಯಲು ಬಂದ ಸಾರ್ವಜನಿಕರ ಮೇಲೆಯೇ ಹಾಡುಹಗಲೇ ಮತ್ತೆ ಮಚ್ಚು ಬೀಸಿ ಪರಾರಿಯಾಗಿದ್ದಾರೆ.

ಇವರು ದರೋಡೆ ಮಾಡಿರುವ ಚಿತ್ರವನ್ನು ನೋಡಿದರೆ ಎಂಥಹವರಿಗೂ ಭಯ ಉಂಟಾಗುತ್ತದೆ. ಥೇಟ್ ಸಿನಿಮಾ ಶೈಲಿಯಲ್ಲಿ ನಡೆದ ಈ ಘಟನೆಯನ್ನು ಯಾರೋ ಮೊಬೈಲ್‌ನಲ್ಲಿ ಸೆರೆಹಿಡಿದಿದ್ದು,ಸದರಿ ದೃಶ್ಯಾವಳಿ ಸಿಸಿಟಿವಿ ಯಲ್ಲೂ ಸೆರೆಯಾಗಿದೆ. ರಸ್ತೆ ಮಧ್ಯೆ ಬೈಕ್ ಸವಾರನೊಬ್ಬನನ್ನು ಅಟ್ಟಗಟ್ಟಿದ ಇಬ್ಬರು ದರೋಡೆಕೋರರು ಆತ ತಪ್ಪಿಸಿಕೊಂಡು ಜಮೀನಿ ನತ್ತ ಓಡಿ ಹೋದರೂ ಬಿಡದೆ ಮಚ್ಚು ಹಿಡಿದು ಬೆದರಿಸುತ್ತಾ ಆತನ ಬಳಿ ಇರೋ ನಗದನ್ನು ಲೂಟಿ ಮಾಡಿದ್ದಾರೆ. ಇಬ್ಬರ ಪೈಕಿ ಒಬ್ಬ ರಾಬರಿ ಮಾಡಿದರೆ ಮತ್ತೊಬ್ಬ ಬೈಕ್ ಆನ್ ಮಾಡಿಕೊಂಡೇ ಇದ್ದು ಕೆಲಸ ಮುಗಿದ ನಂತರ ಎಸ್ಕೇಪ್ ಆಗಿದ್ದಾರೆ. ಈ ಇಬ್ಬರನ್ನು ಹಿಡಿಯಲು ಮುಂದಾದ ಸಾರ್ವಜನಿಕರು ಹಾಗೂ ಕಳ್ಳರ ಮಧ್ಯೆ



ಸಣ್ಣ ಫೈಟ್ ನಡೆದಿದ್ದು ಈ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ.ಈ ಘಟನೆಯನ್ನು ಮನೆಯಲ್ಲಿದ್ದ ಒಬ್ಬ ಮಹಿಳೆ ಮೊಬೈಲ್ ಮೂಲಕ ಸೆರೆ ಹಿಡಿದು ಸಾಮಾಜಿಕ ಜಾಲತಾಣದಲ್ಲಿ ಅಪ್ಲೋಡ್ ಮಾಡಿದ್ದು ಸಕತ್ ವೈರಲ್ ಆಗಿದೆ.

ಇನ್ನೂ ಮಹಿಳೆ ಮಾಡಿದ್ದ ವಿಡಿಯೋ ವಾಟ್ಸಾಫ್ ಮೂಲಕ ಸ್ನೇಹಿತರು ಹಾಗೂ ಸಂಬ0ಧಿಕರಿಗೆ ಕಳುಹಿಸಿದ್ದಾರೆ. ಈ ವಿಡಿಯೋವನ್ನು ನೋಡಿದ ಮುದ್ದೇನಹಳ್ಳಿಯ ಸತ್ಯಸಾಯಿ ಆಸ್ಪತ್ರೆ ಗೇಟ್ ಬಳಿ ಮೆಡಿಕಲ್ಸ್ ಶಾಪ್ ಇಟ್ಟಿರುವ ಪ್ರದೀಪ್ ಪರಿಶೀಲನೆ ಮಾಡಿದಾಗ ರಾಬರಿ ಮಾಡಿರುವ ಇಬ್ಬರು ಹಾಗೂ ಬೈಕ್ ತಮ್ಮ ಮೆಡಿಕಲ್ ಶಾಪ್ ಮುಂಭಾಗದ ಅಂಗಡಿ ಮುಂದೆಯೇ ಇರುವ ನಂದಿನಿ ಬೂತ್ ಬಳಿ ಇರುವುದು ಕಂಡಿದೆ. ಕೂಡಲೇ ಜಾಗೃತರಾದ ಇವರು ಕುಡುವತಿ ಗ್ರಾಮಸ್ಥರಿಗೂ ಮಾಹಿತಿ ನೀಡಿ, ಎಲ್ಲರೂ ಸೇರಿ ಕಳ್ಳರ ಮುಖಕ್ಕೆ ಪೆಪ್ಪರ್ ಸ್ಪ್ರೆ ಹೊಡೆದು ಹಿಡಿದುಕೊಳ್ಳಲು ಪ್ರಯತ್ನಿಸಿದ್ದಾರೆ. ಈ ಸಂದರ್ಭದಲ್ಲಿ ಕಳ್ಳರು ಸ್ಥಳೀಯರ ಜೊತೆ ಹೊಡೆದಾಟ ಬಡಿದಾಟ ಮಾಡಿಕೊಂಡು ಕೊನೆಗೆ ಮಚ್ಚು ತೋರಿಸಿ ಅಲ್ಲಿಂದ ಎಸ್ಕೇಪ್ ಆಗಿದ್ದಾರೆ. ಸ್ಥಳಕ್ಕೆ ಎಸ್ಪಿ ಕುಶಲ್ ಚೌಕ್ಸೆ ಮತ್ತು ಎಎಸ್ಪಿ ಇಮಾಂ ಕಾಸಿಂ ಬೇಟಿ ನೀಡಿ ಪರಿಶೀಲಿಸಿದರು.

ಈ ಬಗ್ಗೆ ಪ್ರತಿಕ್ರಯಿಸಿರುವ ಎಸ್ಪಿ ಕುಶಲ್ ಚೌಕ್ಸೆ ಈ ಬಗ್ಗೆ ಸ್ಥಳೀಯರಿಂದ ಮಾಹಿತಿ ಪಡೆದುಕೊಂಡಿದ್ದು ತನಿಖೆ ಕೈಗೊಂಡಿದ್ದೇವೆ.ದರೋಡೆಗೆ ಒಳಗಾದವರು ಖಾಸಗಿ ಫೈನಾನ್ಸ್ ಕಂಪನಿಗೆ ಸೇರಿದವರಾಗಿದ್ದಾರೆ. ಅವರನ್ನು ಬಲ್ಲವರೇ ಫಾಲೋ ಮಾಡಿ ಕೃತ್ಯ ಎಸಗಿರಬಹುದು ಅಂತ ಅಂದಾಜಿಸಲಾಗಿದೆ ಎಂದಿದ್ದಾರೆ.

ಇನ್ನೂ ಕಳ್ಳರು ಕೃತ್ಯಕ್ಕೆ ಬಳಸಿರುವ ಫೇಜರ್ ಯಮಹಾ ಬೈಕ್‌ನ ನಂಬರ್ ಸಹ ನಕಲಿ ಎಂದು ತಿಳಿದುಬಂದಿದ್ದು ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿರುವ ನಂದಿಗಿರಿಧಾಮ ಪೊಲೀಸರು ಕಳ್ಳರ ಬೆನ್ನುಹತ್ತಿದ್ದಾರೆ ಎನ್ನಲಾಗಿದ್ದು ಆದಷ್ಟು ಬೇಗ ಖದೀಮರ ಹೆಡೆಮುರಿ ಕಟ್ಟಲಿಲ್ಲ ಎಂದರೆ ಸಾರ್ವಜನಿಕ ವಲಯದಲ್ಲಿ ಭಾರೀ ಆತಂಕ ಸೃಷ್ಟಿಯಾಗಿ ಪೊಲೀಸರ ಮೇಲಿನ ನಂಬಿಕೆಯೇ ಹುಸಿಯಾಗಲಿದೆ ಎನ್ನುವುದು ಸ್ಥಳೀಯರ ಮಾತಾಗಿದೆ.

## ಕಲ್ಲು ಕ್ವಾರಿ ಮತ್ತು ಸ್ಟೋನ್ ಕ್ರಷರ್‌ಗಳ ಮೇಲಿನ ಓಟಿಎಸ್ ಪದ್ಧತಿ ತೆಗೆಯಲು ಅಸೋಸಿಯೇಶನ್ ಒತ್ತಾಯ

**ಬೆಂಗಳೂರು ಡಿಸೆಂಬರ್ 9;** ಕಲ್ಲು ಕ್ವಾರಿ ಮತ್ತು ಸ್ಟೋನ್ ಕ್ರಷರ್ ಗಳಿಗೆ ಓಟಿಎಸ್ ಪದ್ಧತಿ ಮೂಲಕ ತೆರಿಗೆ ವಿಧಿಸಲು ರಾಜ್ಯ ಸರ್ಕಾರ ಮುಂದಾಗಿರುವುದು ಸರಿಯಲ್ಲ ಇದರ ವಿರುದ್ಧ ಹೋರಾಟ ನಡೆಸಲಾಗುವುದು ಎಂದು ಯೂನಿಯನ್ ಆಫ್ ಕರ್ನಾಟಕ ಕ್ವಾರಿ ಮತ್ತು ಸ್ಟೋನ್ ಕ್ರಷರ್ ಓನರ್ಸ್ ಅಸೋಸಿಯೇಶನ್ ಎಚ್ಚರಿಕೆ ನೀಡಿದೆ.

ಬೆಂಗಳೂರು ಪ್ರೆಸ್ ಕ್ಲಬ್ ನಲ್ಲಿಂದು ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ರಾಜ್ಯಾಧ್ಯಕ್ಷ ಸಿದ್ಧರಾಜು, ಕಲ್ಲು ಗಣಿ ಮತ್ತು ಸ್ಟೋನ್ ಕ್ರಷರ್ ಉದ್ಯಮಕ್ಕೆ ಸಂಬಂಧಿಸಿದಂತೆ ಅದಿವೇಶನದಲ್ಲಿ ತಿದ್ದುಪಡಿ ಮಸೂದೆ ತರಲು ಮುಂದಾಗಿರುವುದು ಸರಿಯಲ್ಲ, ಈಗಾಗಲೇ ರಾಜಧನ ವೇದಾಸ್ ನ ಮೂಲಕ ಸರ್ಕಾರದ ಕಾಮಗಾರಿಗಳಿಂದ ರಾಜಧ'ನ ಭ'ರ್ತಿ೦ಯಾಗಿದ್ದು, ಓಟಿಎಸ್ ಪದ್ಧತಿಯಂತೆ ದಂಡ ವಿಧಿಸಿ ಮಾಲೀಕರಿಗೆ ತುಂಬಲಾರದ ಹೊರೆ೦ಯನ್ನು ಭ'ರಿಸಲು ಸಾಧ್ಯವಿಲ್ಲ,ಇದೊಂದು ಅವೈಜ್ಞಾನಿಕ ಪದ್ಧತಿಯನ್ನು ಜಾರಿತರಬಾರದು ಎಂದು ಹೇಳಿದರು.

ಕಲ್ಲುಗಣಿಗೆ ವಿಧಿಸಿದ ಐದು ಪಟ್ಟು ದಂಡವನ್ನು ವಜಾಗೊಳಿಸಿ ಹೆಕ್ಟೇರ್ ಗೆ ಐದು ಲಕ್ಷದವರೆಗೆ ದಂಡ ವಿಧಿಸಿಬೇಕು, ಕೆಎಂಎಂಸಿಆರ್ ನಿಯಮದಲ್ಲಿ ಐದು ಪಟ್ಟು ದಂಡದ ವಿಷಯವನ್ನು ತೆಗೆದು ಹೆಕ್ಟೇರ್ ಗೆ 5ಲಕ್ಷ ರೂಪಾಯಿಗಳವರೆಗೆ ದಂಡ ವಿಧಿಸಬೇಕು ಎಂದು ತಿದ್ದುಪಡಿ ಮಾಡಿ ಸರಳೀಕರಣ ಮಾಡಿಕೊಡಬೇಕು, ಈಗಾಗಲೇ ಕಲ್ಲುಗಣಿಗಳಿಂದ ರಾಜಧನ ಬಂದಿರುತ್ತದೆ ಮತ್ತೇ ದಂಡ ವಿಧಿಸುವುದು ಸರಿಯಲ್ಲ ಎಂದು ಹೇಳಿದರು.

ಸರ್ಕಾರ ತನ್ನ ತಿದ್ದುಪಡಿ ತೀರ್ಮಾನದಿಂದ ಹಿಂದೆ ಸರಿಯದಿದ್ದರೆ ಜನವರಿ ತಿಂಗಳಲ್ಲಿ ರಾಜ್ಯದಲ್ಲಿರುವ ಎಲ್ಲ ಕ್ರಷರ್ ಗಳನ್ನು ಬಂದ್ ಮಾಡಿ ಹೋರಾಟ ನಡೆಸಲಾಗುವುದು ಎಂದು ತಿಳಿಸಿದರು.

ಅವೈಜ್ಞಾನಿಕವಾಗಿ ಸ್ಟೋನ್ ಕ್ರಷರ್ ನಿಂದ ವಿದ್ಯುಚಕ್ತಿ ಪಡೆಯುವುದನ್ನು ತಕ್ಷಣ ನಿಲ್ಲಿಸಬೇಕು,ಲಾರಿಗಳಿಗೆ ಅಳವಡಿಸಲು ಸೂಚಿಸಿದ ಜಿಪಿಎಸ್ ವ್ಯವಸ್ಥೆ ತೆಗೆಯಬೇಕು ಎಂದರು. ರಾಜ್ಯದಲ್ಲಿ ಪಟ್ಟಾ ಭೂಮಿಯಲ್ಲಿ ಕಲ್ಲು ಗಣಿಗಾರಿಕೆ ಮಾಡುವವರಿಗೆ ಸಂಪೂರ್ಣ ರಾಜಧನ ತೆಗೆಯಬೇಕು,ಕಲ್ಲು ಗಣಿ ಗುತ್ತಿಗೆ ಅವಧಿ 30 ವರ್ಷಗಳಿಂದ 50 ವರ್ಷಕ್ಕೆ ಡೀಮ್ಡ್ ಎಕ್ಸ್ ಟೆನ್ಸ್ ನ್ ಮಾಡಬೇಕು ಎಂದು ಒತ್ತಾಯಿಸಿದರು.



## ಗ್ರಂಥಾಲಯ ಸಪ್ತಾಹ ಕಾರ್ಯಕ್ರಮಗಳಲ್ಲಿ ವಿಜೇತರಿಗೆ ಬಹುಮಾನ ವಿತರಣೆ



**ಮಾಲೂರು, ಡಿಸೆಂಬರ್ 09:** ಪಟ್ಟಣದ ಸಾರ್ವಜನಿಕ ಗ್ರಂಥಾಲಯದಲ್ಲಿ ನವೆಂಬರ್ 14 ರಿಂದ 20 ರವರಿಗೆ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹದ ಅಂಗವಾಗಿ ಹಮ್ಮಿಕೊಂಡಿದ್ದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ನೀಡಲಾಯಿತು. ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಕಾರ್ಯಕ್ರಮದ ಅಂಗವಾಗಿ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ನವಂಬರ್ 14ರಿಂದ ನವಂಬರ್ 20 ರ ತನಕ ಮಾಲೂರು ಶಾಖಾ ಗ್ರಂಥಾಲಯದ ವತಿಯಿಂದ ಪ್ರಬಂಧ ಸ್ಪರ್ಧೆ, ಚಿತ್ರ ಕಲೆ ಸ್ಪರ್ಧೆ, ಜಾನಪದ ಗೀತೆ, ರಸಪ್ರಶ್ನೆ ಕ್ರೀಡೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗಿತ್ತು.

ಈ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾ ರ್ಥಿಗಳಿಗೆ ಶನಿವಾರ ಗ್ರಂಥಾಲಯದ ಆವರಣದಲ್ಲಿ ಏರ್ಪಡಿ ಸಿದ್ದ ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಕಾರ್ಯಕ್ರಮದಲ್ಲಿ ವಿಜೇತರಿಗೆ ಪ್ರಥಮ ದ್ವಿತೀಯ, ತೃತೀಯ ಬಹುಮಾನ ಹಾಗೂ ಭಾಗವಹಿಸಿದ ಎಲ್ಲಾ ವಿದ್ಯಾರ್ಥಿಗಳಿಗೂ ಸಮಾಧಾನಕರ ಬಹುಮಾನ ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಗ್ರಂಥಪಾಲಕಿ ನಾಗಮಣಿ, ಸಿಬ್ಬಂದಿ ಎನ್. ದಯಾನಂದ್ ಸಾಹಿತಿ ದೊಡ್ಡ ಕಲ್ಲಹಳ್ಳಿ ನಾರಾಯಣಪ್ಪ ಬಾಲಕಿಯರ ವಿದ್ಯಾರ್ಥಿನಿಲಯದ ಮೇಲ್ವಿಚಾರಕಿ ಸವಿತಾ, ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಶಿಕ್ಷಕರು, ವಿದ್ಯಾರ್ಥಿಗಳು, ಓದುಗರು ಭಾಗವಹಿಸಿದ್ದರು.

## ದುರುದ್ದೇಶ ಪೂರಿತವಾಗಿ ಕ್ಷೇತ್ರ ವಿಂಗಡಣೆ: ಎಸ್.ಎನ್.ನಾರಾಯಣಸ್ವಾಮಿ ಆಕ್ರೋಶ



**ಬಂಗಾರಪೇಟೆ, ಡಿಸೆಂಬರ್ 09:** ಪ್ರಭಾವಿ ಕುಟುಂಬದ ಬೆಂಬಲಕ್ಕೆ ನಿಂತ ಕೋಲಾರ ಹಾಲು ಉತ್ಪಾದಕರ ಸಹಕಾರಿ ಸಂಘದ ವ್ಯವಸ್ಥಾಪಕ ಗೋಪಾಲಸ್ವಾಮಿ ಅವರು ಸರ್ಕಾರದ ನಿಯಮವನ್ನು ಗಾಳಿಗೆ ತೂರಿ ದುರುದ್ದೇಶ ಪೂರಿತವಾಗಿ ಕ್ಷೇತ್ರ ವಿಂಗಡಣೆ ಮಾಡಿರುವುದು ಬಡ ರೈತರಿಗೆ ಮಾಡಿದ ವಂಚನೆ ಎಂದು ಶಾಸಕ ಎಸ್.ಎನ್.ನಾರಾಯಣಸ್ವಾಮಿ ಆಕ್ರೋಶ ಹೊರಹಾಕಿದರು.

ಪಟ್ಟಣದ ಪುರಸಭೆ ಕಚೇರಿಯ ಸಭಾಂಗಣದಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಉದ್ದೇಶಿಸಿ ಮಾತನಾಡಿದ ಅವರು, ಸುಗಮ ಆಡಳಿತ ನಡೆಸುವ ಉದ್ದೇಶದಿಂದ ಅವಿಭಜಿತವಾಗಿದ್ದ ಕೋಲಾರ ಹಾಗೂ ಚಿಕ್ಕಬಳ್ಳಾಪುರ ಹಾಲು ಉತ್ಪಾದಕರ ಸಹಕಾರಿ ಸಂಘವನ್ನು ಬೇರ್ಪಡಿಸಿ ಕೋಲಾರ ಜಿಲ್ಲೆಗೆ 11 ಕ್ಷೇತ್ರಗಳನ್ನು ವಿಂಗಡಿಸುವಂತೆ ಜಂಟಿ ನಿರ್ದೇಶಕರು ಅಕ್ಟೋಬರ್ 29 ರಂದು ಆದೇಶ ನೀಡಿರುತ್ತಾರೆ. ಅವರ ಆದೇಶದಂತೆ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು, ಉಪ ನೊಂದನಾಧಿಕಾರಿಗಳು, ಹಾಗೂ ಸಾರ್ವಜನಿಕರ ಸಮಕ್ಷಮದಲ್ಲಿ ಸಭೆ ನಡೆಸಿ ವಿಷಯ ಮಂಡನೆ ಮಾಡಬೇಕು ತದನಂತರ ಸಭೆಯ ನಿರ್ಣಯಗಳನ್ನು ಸರ್ಕಾರಿ ಕಚೇರಿಗಳ ಸೂಚನಾ ಫಲಕದಲ್ಲಿ ಅಳವಡಿಸಬೇಕು, ಇದರೊಟ್ಟಿಗೆ ಸಾರ್ವಜನಿಕ ಆಕ್ಷೇಪ ಅರ್ಜಿಗಳಿಗೆ ಮುಕ್ತ ಅವಕಾಶವನ್ನು ಕಲ್ಪಿಸಿ ಕೊಡಬೇಕು ಆದರೆ ಇಲ್ಲಿನ ವ್ಯವಸ್ಥಾಪಕರಾದ ಗೋಪಾಲಸ್ವಾಮಿ ರವರು ಇದಾವುದ್ದನ್ನೂ ಮಾಡದೆ ಪ್ರಸ್ಥಾವಣೆಯನ್ನು ಡಿ ಮ್ಯೂಟ್ ಮಾಡಿ ಸರ್ಕಾರದ ನಿಯಮವನ್ನು ಗಾಳಿಗೆ ತೂರಿ ಪ್ರಭಾವಿ ಕುಟುಂಬದವರ ಕಪಿಮುಷ್ಠಿಯಲ್ಲಿ ಸಿಲುಕಿ ಕ್ಷೇತ್ರಗಳನ್ನು ವಿಂಗಡಣೆ ಮಾಡಿರುವುದು ಸಮಂಜಸಬಲ್ಲ ಎಂದರು.

ಸರ್ಕಾರದ ದಿಕ್ಕು ತಪ್ಪಿಸಿ, ಅಕ್ರಮವಾಗಿ ಭೂ ಮಂಜೂರು: ಬಂಗಾರಪೇಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಹುತ್ತೂರು ಹೋಬಳಿ ಹೊಳಲಿ ಗ್ರಾಮದ ಸರ್ವೆ.ನಂ.130ರಲ್ಲಿ 569 ಎಕರೆ ಗೋಮಾಳ ಜಮೀನಿರುತ್ತದೆ. ಇದನ್ನು ಕಬಳಿಸುವ ದುರುದ್ದೇಶದಿಂದ ಹಾಲು ಉತ್ಪಾದಕ ಸಹಕಾರಿ ಒಕ್ಕೂಟದ ಅಧಿಕಾರಿಗಳು ಸದರಿ ಜಾಗದಲ್ಲಿ ರಾಸುಗಳಿಗೆ ಮೇವು ಬೆಳೆದು ರೈತರಿಗೆ ನೀಡುವುದಾಗಿ ಸುಳ್ಳು ಹೇಳಿ ಜಿಲ್ಲಾಧಿಕಾರಿಗಳ ದಿಕ್ಕುತಪ್ಪಿಸಿ 50ಎಕರೆ ಜಮೀನನ್ನು 2020ರ ಅಕ್ಟೋಬರ್ 29 ರಲ್ಲಿ ಚಿಕ್ಕಬಳ್ಳಾಪುರ ಸಹಕಾರಿ ಹಾಲು ಒಕ್ಕೂಟ ನಿರ್ವಹಕರ ನಿರ್ದೇಶಕರಿಗೆ ಮಂಜೂರು ಮಾಡಿಕೊಂಡಿರುತ್ತಾರೆ. ಆದರೆ ಮೇವು ಬೆಳೆಯ ಬೇಕಾದ ಸ್ಥಳದಲ್ಲಿ ಸೋಲಾರ್ ಪೆನ್ಸಿಂಗ್ ಹಾಕಿ ವಿದ್ಯುತ್ ಮಾರಾಟ ಮಾಡಿ ಹಣ ಸಂಪಾಧಿಸುತ್ತಿದ್ದಾರೆ. ಮತ್ತು ಸರ್ಕಾರದ ನಿಯಮದಂತೆ ಜಿಲ್ಲಾಧಿಕಾರಿಗಳಿಗೆ 9.36 ಎಕರೆ ಜಮೀನನ್ನು ಮಂಜೂರು ಮಾಡಲು ಅವಕಾಶವಿರುತ್ತದೆ ಹಾಗೂ ಸದರಿ ಜಮೀನಿನಲ್ಲಿ ಸಮಾಜ ಕಲ್ಯಾಣ ಇಲಾಖೆ, ಮೊರಾರ್ಜಿ ದೇಸಾಯಿ ವಸತಿ ನಿಲಯ, ಕರ್ನಾಟಕ ಕ್ರಿಕೆಟ್ ಅಸೋಷಿಯೇಷನ್ ಸಂಸ್ಥೆಗೆ ತಲಾ 10 ಎಕರೆ ಜಮೀನನ್ನು ಮಂಜೂರು ಮಾಡಲಾಗಿರುತ್ತದೆ. ಡೇರಿ ಅಧಿಕಾರಿಗಳು ಅಕ್ರಮವಾಗಿ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಮೀಸಲಿಟ್ಟ ಜಮೀನಿಗೆ ಕಾಂಪೌಂಡ್ ನಿರ್ಮಿಸಿಕೊಂಡಿದ್ದಾರೆ ಎಂದು ಗಂಭೀರ ಆರೋಪ ಮಾಡಿದರು.

ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷ ಗೋವಿಂದ, ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಗೋಪಾಲರೆಡ್ಡಿ, ಪುರಸಭೆ ಸದಸ್ಯರಾದ ಕೆ.ಚಂದ್ರಾರೆಡ್ಡಿ, ಷಂಶುದ್ದೀನ್‌ಬಾಬು, ಅರುಣಾಚಲಂಮಣಿ, ರಾಕೇಶ್ ಗೌಡ, ಶಫಿ, ಪ್ರಶಾಂತ್, ಇದ್ದರು.

## ಬಾಂಗ್ಲಾದೇಶದಲ್ಲಿರುವ ನಮ್ಮ ಹಿಂದೂಗಳ ತಲೆದಂಡಕ್ಕೆ ಹೊಣೆಯಾರು?

**ಕೋಲಾರ, ಡಿಸೆಂಬರ್ 09:** ಬಾಂಗ್ಲಾದೇಶದ ಜನತೆ ಅಲ್ಲಿನ ಆಡಳಿತದ ಬಗ್ಗೆ ಬೇಸತ್ತು, ಅರಾಜಕತೆ ಮೂಡಿ, ದಂಗೆಯೆದ್ದಾಗ ಅಲ್ಲಿನ ಪ್ರಧಾನಿಯೇ ಪ್ರಾಣಭಯದಿಂದ ಪರಾರಿಯಾದಂಥ ಸಂದರ್ಭದಲ್ಲಿ, ಅವರಿಗೆ ತಲೆ



ಮರೆಸಿಕೊಳ್ಳಲು ನಮ್ಮ ದೇಶದಲ್ಲಿ ಅವಕಾಶ ನೀಡಿದ ತಪ್ಪಿಗೆ ಈಗ ಬಾಂಗ್ಲಾದೇಶದಲ್ಲಿರುವ ನಮ್ಮ ಹಿಂದೂಗಳು ತಲೆದಂಡ ನೀಡಬೇಕಾದ ದುಃಸ್ಥಿತಿ ಎದುರುರಾಗಿದೆ ಎಂದು ಆಲ್ ಇಂಡಿಯಾ ಅಡ್ವೊಕೇಟ್ಸ್ ಅಸೋಸಿಯೇಷನ್‌ನ ಕೋಲಾರ ಜಿಲ್ಲೆಯ ಅಧ್ಯಕ್ಷ ಹಾಗೂ ವಕೀಲ ಕೆ.ನರೇಂದ್ರಬಾಬು ಅಭಿಪ್ರಾಯಿಸಿದ್ದಾರೆ.

ಬಾಂಗ್ಲಾದೇಶದಲ್ಲಿ ಸಾವಿರಾರು ಜನ ಹಿಂದೂಗಳು ತಮ್ಮ ತಲೆದಂಡ ನೀಡುತ್ತಿರುವಾಗ, ಅದನ್ನು ತಡೆಯುವ, ನಿಗ್ರಹಿಸುವ, ನಿಯಂತ್ರಿಸುವ ಬದಲಾಗಿ ಒಂದು ನಿರ್ಧಿಷ್ಟ ರಾಜಕೀಯ ಪಕ್ಷದ ಕಾರ್ಯಕರ್ತರು, ಅದರ ಅಂಗ ಸಂಘಗಳ ಕಾರ್ಯಕರ್ತರು ರಾಷ್ಟ್ರವಿಡೀ ಪ್ರತಿಭಟಿಸಿ ಬಾಂಗ್ಲಾದೇಶದ ಹಿಂದೂಗಳ ರಕ್ಷಣೆಗೆ ನಮ್ಮ ದೇಶದ ಪ್ರಧಾನಿ ಮಧ್ಯಪ್ರವೇಶಿಸಬೇಕು ಎಂದು ಒತ್ತಾಯಿಸುತ್ತಿರುವುದು ಪರಿಸ್ಥಿತಿಯ ವಿಷಯ ಪಲ್ಲಟನೆ ಎಂದು ಜನ ಆಡಿಕೊಳ್ಳುತ್ತಿದ್ದಾರೆ.

ಈ ರೀತಿ ಕಾರ್ಯಕರ್ತರ ಪ್ರತಿಭಟನೆಯ ನಂತರ ನಮ್ಮ ಪ್ರಧಾನಿಯು ಬಾಂಗ್ಲಾ ಹಿಂದೂ ದೌರ್ಜನ್ಯ ತಡೆಗೆ ಮುಂದಾಗುವರು ಎಂದು ನಮ್ಮ ರಾಷ್ಟ್ರದ ಸಮಸ್ತ ಜನತೆಯು ನಿರೀಕ್ಷಿಸುವುದು, ಇಂಥಾ ತಡೆಯ ಕ್ರಮಕ್ಕಾಗಿ ನಮ್ಮ ರಾಷ್ಟ್ರಜನತೆಯು ಇನ್ನಷ್ಟು ಹೆಚ್ಚಿನ ಸಂಖ್ಯೆಯಲ್ಲಿ ಸಂಘಟಿತರಾಗುವುದಕ್ಕಿಂತಲೂ ಹೆಚ್ಚಿನ ಪರಿಣಾಮ ಸಾಧ್ಯವಾಗುವುದೇ ಎಂದು ಅವರು ಪ್ರಶ್ನಿಸಿದ್ದಾರೆ. ಆದರೆ ಪಕ್ಷ ಸಂಘಟನೆಗೂ ಬಾಂಗ್ಲಾಹಿಂದೂಮಾರಣವನ್ನು ಬಳಸಿಕೊಳ್ಳುವುದು ಅಮಾನವೀಯ ಎಂದಿದ್ದಾರೆ. ನಮ್ಮ ರಾಷ್ಟ್ರದ ಪರಿಸ್ಥಿತಿಯೇ ಹೀಗಿರುವಾಗ ಪಲಾಯಿತ ಪ್ರಧಾನಿಗೆ ಆಶ್ರಯ ನೀಡಿದ ದೊಡ್ಡಸ್ಥಿಕೆ ಬಾಂಗ್ಲಾ ಹಿಂದೂಗಳ ಆಸ್ತಿ–ಪಾಸ್ತಿ–ಪ್ರಾಣಕ್ಕೇ ಕಂಠಕವಾಗಿ ಪರಿಣಮಿಸಿದೆ. ಇದನ್ನು ಒಪ್ಪಿಕೊಳ್ಳುವ ಎದೆಗಾರಿಕೆಯಿಲ್ಲದೇ, ವೃಥಾ ಪ್ರತಿಭಟನೆಗಳನ್ನು ನಡೆಸಿ, ಜನರ ಗಮನ ಬೇರೆಡೆಗೆ ಹೊರಳಿಸಿ, ಪಕ್ಷ ಸಂಘಟನೆಗೆ ಪ್ರಯತ್ನಿಸಿರುವುದು, ಸಾವಿರಾರು ಜನರ ಸಾವಿನ ಜವಾಬ್ದಾರಿಯಿಂದ ನುಣುಚಿಕೊಳ್ಳುವುದು ಅಕ್ಷಮ್ಯ ಅಪರಾಧವಾಗುತ್ತದೆ ಎಂದು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

## ನಂದಗುಡಿ ಭಾಗದ ರೈತರ ಭೂಮಿ ಸ್ವಾಧೀನ ಪಡಿಸಿಕೊಳ್ಳಲು ಅವಕಾಶ ನೀಡುವುದಿಲ್ಲ: ಶಾಸಕ ಶರತ್ ಬಚ್ಚೇಗೌಡ




**ಹೊಸಕೋಟೆ, ಡಿಸೆಂಬರ್ 09:** ರೈತರ ಹೋರಾಟಕ್ಕೆ ಸಂಪೂರ್ಣ ಬೆಂಬಲವಿದ್ದು, ಅಗತ್ಯ ಬಿದ್ದರೆ ನಿಮ್ಮ ಹೋರಾಟದಲ್ಲಿ ನಾನು ಭಾಗಿಯಾಗುತ್ತೇನೆ ಎಂದು ಶಾಸಕ ಶರತ್ ಬಚ್ಚೇಗೌಡ ತಿಳಿಸಿದರು.

ಹೊಸಕೋಟೆ ತಾಲೂಕಿನ ನಂದಗುಡಿಯ ಶ್ರೀಕಾಡು ಮಲ್ಲೇಶ್ವರಸ್ವಾಮಿ ದೇವಾಲಯದ ಆವರಣದಲ್ಲಿ ಭೂಸ್ವಾಧೀನ ವಿರೋಧಿ ಹೋರಾಟ ಸಮಿತಿ ಹಮ್ಮಿಕೊಂಡಿದ್ದ ಸಭೆಯಲ್ಲಿ ಮಾತನಾಡಿದ ಅವರು, ಸರಕಾರ 60;40, 50;40 ಅನುಪಾತದಲ್ಲಿ ರೈತರ ಭೂಮಿಯನ್ನು ಸ್ವಾಧೀನ ಪಡಿಸಿಕೊಂಡ ಬೆಂಗಳೂರ ಸನಿಹದಲ್ಲೆ ವಶಪಡಿಸಿಕೊಂಡು ಹತ್ತಾರು ವರ್ಷಗಳು ಕಳೆದರೂ, ಅ ಪ್ರದೇಶಗಳು ಅಭಿವೃದ್ಧಿ ಕಂಡಿಲ್ಲ, ರೈತರು ಬಿತ್ತನೆ ಮಾಡಿ ಬೆಳೆ ಬೆಳೆಯಲಾಗದೇ ರೈತರ ಪರಿಸ್ಥಿತಿ ಅದೋಗತಿಯಾಗಿದೆ ಎಂದರು.

ಭೂಮಿ ಒಮ್ಮೆ ಕಳೆದುಕೊಂಡರೆ ಮತ್ತೇ ಸಂಪಾದಿಸಲು ಸಾಧ್ಯವಿಲ್ಲ, ಬೆಂಗಳೂರಿನ ಸುತ್ತಮುತ್ತ 05 ಭಾಗಗಳಲ್ಲಿ ಟೌನ್ ಶಿಪ್ ನಿರ್ಮಾಣಕ್ಕೆ ಸರಕಾರ ಮುಂದಾಗಿದ್ದು, ಮೊದಲು ಮಾಗಡಿ ಭಾಗದಲ್ಲಿ ಪ್ರಕ್ರಿಯೆ ಆರಂಭವಾಗಿದ್ದು, ಆ ಭಾಗವು ಗುಡ್ಡಗಾಡು ಪ್ರದೇಶವಾಗಿದ್ದು, ಅಲ್ಲಿನ ರೈತರು ಭೂ ಸ್ವಾಧೀನಕ್ಕೆ ಒಪ್ಪಿಗೆ ನೀಡಿದ್ದಾರೆ. ನಂದಗುಡಿ ಭಾಗದಲ್ಲಿ ಸಮತಟ್ಟಾದ ಕೃಷಿಗೆ ಯೋಗ್ಯವಾದ ಜಾಗವಾಗಿದ್ದು, ನೆಲಮಂಗಲ ಭಾಗದಲ್ಲಿ 18 ಸಾವಿರ ಎಕರೆ ಪ್ರದೇಶದಲ್ಲಿ ಟೌನ್ ಶಿಪ್ ಸೇರಿದಂತೆ ಅಂತರ ರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ನೀಲನಕ್ಷೆ ಸಿದ್ದವಾಗುತ್ತಿದೆ. ಸರಕಾರದ ಮಟ್ಟದಲ್ಲಿ ಮಾಗಡಿ ಭಾಗದಲ್ಲಿ ಮೊದಲ ಆದ್ಯತೆಯಾಗಿದ್ದು, ನಂದಗುಡಿ ಭಾಗದ ಭೂ ಸ್ವಾಧೀನ ಪ್ರಕ್ರಿಯೆ ಕೊನೆಯದಾಗಿದೆ, ಸದ್ಯದ ಮಟ್ಟಿಗಂತೂ ಇದರ ಪ್ರಸ್ತಾಪವಿಲ್ಲ. ನಂದಗುಡಿ ಭಾಗದ 36 ಹಳ್ಳಿಗಳ ಭೂ ಸ್ವಾಧೀನ ಪ್ರಕ್ರಿಯೆಯನ್ನು ಕಡೇ ಸ್ಥಾನದಲ್ಲಿರುವಂತೆ ಸರಕಾರದ ಮಟ್ಟದಲ್ಲಿ ಕಾಳಜಿ ವಹಿಸಿದ್ದು, ಯಾವುದೇ ಕಾರಣಕ್ಕೂ ನಂದಗುಡಿ ಭಾಗದ ರೈತರ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲು ಅವಕಾಶ ನೀಡುವುದಿಲ್ಲ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಭೂಸ್ವಾಧೀನ ವಿರೋಧಿ ಹೋರಾಟ ಸಮಿತಿ ವತಿಯಿಂದ ಭೂ ಸ್ವಾಧೀನ ಪ್ರಕ್ರಿಯೆ ಕೈ ಬಿಡುವಂತೆ ಒತ್ತಾಯಿಸಿ ಶಾಸಕರಿಗೆ ಮನವಿ ಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕೆಪಿಸಿಸಿ ಕಾರ್ಯದರ್ಶಿ ಬಿ. ಗೋಪಾಲ್, ರಾಜ್ಯ ಒಕ್ಕಲಿಗ ಸಂಘದ ನಿರ್ದೇಶಕ ರಾಜಶೇಖರಗೌಡ, ಉದ್ಯಮಿ ನಾರಾಯಗೌಡ, ಟಿಎಪಿಸಿಎಂಎಸ್ ಉಪಾಧ್ಯಕ್ಷ ರವೀಂದ್ರ, ಎಪಿಎಂಸಿ ಮಾಜಿ ಅಧ್ಯಕ್ಷ ಧರ್ಮೇಶ್, ಮಾಜಿ ನಿರ್ದೇಶಕ ಚಂದ್ರಮೋಹನ್, ಭೂಸ್ವಾಧೀನ ವಿರೋಧಿ ಹೋರಾಟ ಸಮಿತಿ ಅಧ್ಯಕ್ಷ ಕೆಂಚೇಗೌಡ, ಪ್ರಧಾನ ಕಾರ್ಯದರ್ಶಿ ಐಸಿ. ಮುನಿಶಾಮಗೌಡ, ಸದಸ್ಯರಾದ ಎಂ.ಬಿ. ವೆಂಕಟೇಶ್, ಚೊಕ್ಕಸಂದ್ರ ನಾರಾಯಣಸ್ವಾಮಿ, ಶಂಕರ್ ನಾರಾಯಣ್, ಲಕ್ಷ್ಮೀಶ, ಆನಂದ್, ಮಾಜಿ ತಾಪಂ. ಸದಸ್ಯರಾದ ಬೀರಪ್ಪ, ಯರ್ರೇಗೌಡ, ವೆಂಕಟೇಶ್, ಗ್ರಾಪಂ ಅಧ್ಯಕ್ಷೆ ಮುನಿವೆಂಕಟಮ್ಮ ಬಚ್ಚಪ್ಪ ಹಾಗೂ ನೂರಾರು ರೈತರು ಭಾಗವಹಿಸಿದ್ದರು.

## ಕ್ಷಯ ಮುಕ್ತ ಭಾರತದೆಡೆಗೆ 100 ದಿನಗಳ ಅಭಿಯಾನ: ಜಾಥಾ ಕಾರ್ಯಕ್ರಮ



**ಬೇಲೂರು, ಡಿಸೆಂಬರ್ 09:** ಬೇಲೂರು ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿ ಸಾರ್ವಜನಿಕ ಆಸ್ಪತ್ರೆ ಹಾಗೂ ತಾಲೂಕು ಕಾನೂನು ಸೇವೆಗಳ ಪ್ರಾಧಿಕಾರ ಸಮಿತಿಯ ಸಂಯುಕ್ತಾಶ್ರಯದಲ್ಲಿ "ಕ್ಷಯ ಮುಕ್ತ ಭಾರತದೆಡೆಗೆ 100 ದಿನಗಳ ಅಭಿಯಾನ ಕುರಿತು ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಜಾಥಾ ಕಾರ್ಯಕ್ರಮದ ಉದ್ಘಾಟಿಸಿ ಮಾತನಾಡಿದ ಬೇಲೂರು ಜೆಎಂಎಫ್ ಸಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಎಂ ಎಸ್ ಶಶಿಕಲಾ, ಕ್ಷಯ ರೋಗವು ಒಬ್ಬರಿಂದ ಒಬ್ಬರಿಗೆ ಹರಡುವ ಸಾಂಕ್ರಾಮಿಕ ರೋಗವಾಗಿದೆ. ಕ್ಷಯ ರೋಗದ ಲಕ್ಷಣಗಳಾದ ಎರಡು ವಾರಕ್ಕಿಂತ ಜಾಸ್ತಿ ಕೆಮ್ಮು, ಜ್ವರ,ಕಫ ಬರುವುದು,ಹಸಿವಾಗದೆ ಇರುವುದು, ತೂಕ ಕಡಿಮೆಯಾಗುವುದು, ಇಂತಹ ಲಕ್ಷಣಗಳು ಕಂಡು ಬಂದರೆ ತಕ್ಷಣವೇ ಆರೋಗ್ಯ ಸಂಸ್ಥೆಗೆ ಭೇಟಿ ನೀಡಿ ಕಫ ಪರೀಕ್ಷೆ ಮತ್ತು ಎಕ್ಸರೇ ಪರೀಕ್ಷೆಯನ್ನು ಮಾಡಿಸಿ ಸೂಕ್ತ ಚಿಕಿತ್ಸೆಯನ್ನು ಪಡೆಯಲು ತಿಳಿಸಿದರು

ನಂತರ ತಾಲೂಕಾ ಆರೋಗ್ಯ ಅಧಿಕಾರಿಗಳಾದ ಡಾ. ವಿಜಯ ಮಾತನಾಡಿ, ಕ್ಷಯ ಮುಕ್ತ ಭಾರತವನ್ನು ಮಾಡಲು ನೂರು ದಿನಗಳ ಅಭಿಯಾನವನ್ನು ಹಮ್ಮಿಕೊಂಡಿದ್ದು ಪ್ರತಿ ಮನೆಯಲ್ಲೂ ಭೇಟಿ ನೀಡಿ ಕ್ಷಯರೋಗದ ಲಕ್ಷಣಗಳು ಕಂಡುಬಂದರೆ ಅಂಥವರನ್ನು ಪರೀಕ್ಷೆಗೆ ಒಳಪಡಿಸಿ ಸೂಕ್ತ ಚಿಕಿತ್ಸೆ ನೀಡಲಾಗುವುದು. ಅಪಾಯದ ಅಂಚಿನಲ್ಲಿರುವ ಮಧು ಮೇಹಿಗಳು, ಧೂಮಪಾನಿಗಳು, ಮದ್ಯಪಾನ ಸೇವಿಸುವವರು, ಅಪೌಷ್ಠಿಕತೆಯಿಂದ ಬಳಲುವವರು ವಲಸೆ ಬಂದಿರುವಂತವರಿಗೆ ಗುರುತಿಸಿ ಸ್ಕ್ರೀನಿಂಗ್ ಮಾಡಲಾಗುವುದು ಮೇಲ್ಕಂಡ ಲಕ್ಷಣಗಳು ಕಂಡು ಬಂದರೆ ತಕ್ಷಣ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಪರೀಕ್ಷೆಗೆ ಒಳಪಡುವಂತೆ ತಿಳಿಸಲಾಯಿತು.

ಕಾರ್ಯಕ್ರಮದಲ್ಲಿ ಸಾರ್ವಜನಿಕ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿಗಳಾದ ಡಾ. ಸುಧಾ, ಸರ್ಕಾರಿ ಸಹಾಯಕ ಅಭಿಯೋಜಕರಾದ ಶಶಿಕಲಾ, ಬೇಲೂರು ವಕೀಲರ ಸಂಘದ ಕಾರ್ಯದರ್ಶಿ ಜಿ ಸಿ ಪುಟ್ಟಸ್ವಾಮಿಗೌಡರು, ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿಗಳಾದ ತಿ ಉಷಾ ಕೆಎಸ್, ತಾಲೂಕು ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ದಯಾನಂದ್, ಕ್ಷಯ ರೋಗದ ಮೇಲ್ವಿಚಾರಕರಾದ ದೇವರಾಜ್, ಆರ್ ಬಿಎಸ್ ಕೆ ವೈದ್ಯಾಧಿಕಾರಿಗಳು ಮತ್ತು ತಂಡದವರು, ಆರೋಗ್ಯ ಇಲಾಖೆ ಸಿಬ್ಬಂದಿಯವರು ಮತ್ತು ಆಶಾ ಕಾರ್ಯಕರ್ತೆಯರು ಹಾಜರಿದ್ದರು.

## ಅಸಮಾನತೆಯ ವಿರುದ್ಧ ಸಮರ ಸಾರಿದ ಮಹಾನ್ ಚೇತನ ಅಂಬೇಡ್ಕರ್: ಕೆ.ವೈ.ನಂಜೇಗೌಡ



**ಮಾಲೂರು, ಡಿಸೆಂಬರ್ 09:** ಅಸಮಾನತೆಯ ವಿರುದ್ಧ ಸಮರ ಸಾರಿದ ಮಹಾನ್ ಚೇತನ, ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ಪ್ರಜಾಪ್ರಭುತ್ವಕ್ಕೊಂದು ಅರ್ಥ ಕಲ್ಪಿಸಿಕೊಡುವ ವ್ಯವಸ್ಥೆಯನ್ನು ಜಾರಿಗೆ ತಂದ ಅಂಬೇಡ್ಕರ್ ಅವರು, ಎಲ್ಲಾ, ಜಾತಿ, ಧರ್ಮದವರು ಸ್ವಾಭಿಮಾನದ ಬದುಕು ಕಟ್ಟಿಕೊಳ್ಳಲು ಪ್ರೇರಣೆಯಾಗಿದ್ದಾರೆ ಎಂದು ಶಾಸಕ ಕೆ.ವೈ.ನಂಜೇಗೌಡ ಹೇಳಿದರು.

ಪಟ್ಟಣದ ಬಸ್ ನಿಲ್ದಾಣದ ಅಂಬೇಡ್ಕರ್ ಉದ್ಯಾನವನದಲ್ಲಿ ತಾಲ್ಲೂಕು ಆಡಳಿತ, ಸಮಾಜ ಕಲ್ಯಾಣ ಇಲಾಖೆ ಹಾಗೂ ವಿವಿಧ ಸಂಘಟನೆಗಳು ನೇತೃತ್ವದಲ್ಲಿ 68ನೇ ಅಂಬೇಡ್ಕರ್ ಮಹಾಪರಿನಿಬ್ಬಾಣ ದಿನ ಅಂಗವಾಗಿ ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಹಾಗೂ ಮೆಣದಬತ್ತಿ ಹಚ್ಚಿ ನಮನ ಸಲ್ಲಿಸಿ ಮಾತನಾಡಿದರು.

ದಲಿತ ಸಿಂಹ ಸೇನೆ ಕರ್ನಾಟಕ, ಕರ್ನಾಟಕ ಅಂಬೇಡ್ಕರ್ ಸೇವಾ ಸಂಘ, ದಮನಿತ ಸಂರಕ್ಷಣಾ ಸಮಿತಿ, ಕದಸಂಸ ಅಂಬೇಡ್ಜರ್ ವಾದ, ತಾಲ್ಲೂಕು ಆಡಳಿ, ಸಮಾಜ ಕಲ್ಯಾಣ ಇಲಾಖೆ, ಪುರಸಭೆ, ಸೇರಿದಂತೆ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು. ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಶಿವಕುಮಾರ್, ಗ್ರೇಡ್ 2 ತಹಶೀಲ್ದಾರ್ ಹರಿಪ್ರಸಾದ್, ಕೆಪಿಸಿಸಿ ಸದಸ್ಯ ಎಂ.ಎಸ್.ಪ್ರದೀಪ್ ರೆಡ್ಡಿ, ದರಖಾಸ್ತು ಸಮಿತಿ ಅಧ್ಯಕ್ಷ ಸಂತೇಹಳ್ಳಿ ನಾರಾಯಣಸ್ವಾಮಿ, ಗ್ಯಾರಂಟಿಗಳ ಪ್ರಾಧಿಕಾರದ ಅಧ್ಯಕ್ಷ ಎಂ.ಆಂಜಿನಪ್ಪ, ಪ್ರಾಧಿಕಾರ ಅಧ್ಯಕ್ಷ ನಯೀಂ ಉಲ್ಲಾ ,ಕೆ.ಎ.ಎಸ್. ಎಸ್ ರಾಜ್ಯಾಧ್ಯಕ್ಷ ಪಿ.ಎನ್.ದಾಸ್, ದಮನಿತ ಸಂರಕ್ಷಣಾ ಸಮಿತಿ ರಾಜ್ಯಾಧ್ಯಕ್ಷ ಸಂತೋ?, ದಲಿತ ಸಿಂಹ ಸೇನೆ ತಿಪ್ಪಸಂದ್ರ ಶ್ರೀನಿವಾಸ್, ಎಟ್ಟಕೋಡಿ ವೆಂಕಟೇಶ್, ಲಕ್ಕೂರುವೆಂಕಟೇಶ್, ಚನ್ನಕಲ್ ಸಂತೋ?, ಪುರಸಭಾ ಅಧ್ಯಕ್ಷೆ ಕೋಮಲ, ಉಪಾಧ್ಯಕ್ಷೆ ವಿಜಯಲಕ್ಷ್ಮಿ,ಸದಸ್ಯರಾದ ಎನ್.ವಿ.ಮುರಳೀಧರ್, ಮಂಜುನಾಥ್, ಜಾಕೀರ್, ದಲಿತ ಮುಖಂಡರಾದ ಸಿ.ಎಸ್. ಕೃ?ಪ್ಪ, ಸೋಮಣ್ಣ, ನಾಗರಾಜ್, ಕೆ.ಅಶ್ವಥಪ್ಪ, ಸಿ.ಎಂ.ನಾರಾಯಣಸ್ವಾಮಿ, ಸಂಪಂಗೆರೆ ಅಶೋಕ್, ಮೈಲಾಂಡಹಳ್ಳಿ ಮುನಿಯಪ್ಪ, ಉಪಾಸಪುರ ಆನಂದ್, ಸೇರಿದಂತೆ ಹಲವಾರು ಸಂಘಟನೆಗಳ ಮುಖಂಡರು, ತಾಲ್ಲೂಕಿನ ವಿಧ್ಯಾರ್ಥಿ ನಿಲಯಗಳ ಮೇಲ್ವಿಚಾರಕರು ಭಾಗವಹಿಸಿದ್ದರು.

## ರೈತರ ಜಮೀನಿನ ದಾಖಲೆಗಳನ್ನು ಬದಲಾವಣೆ ಮಾಡಲಾರದಂಥ ಪವಿತ್ರ ಕಾರ್ಯ: ಡಿಕೆಶಿ



**ರಾಮನಗರ, ಡಿ. 09:** ರಾಜ್ಯದಲ್ಲಿ ನೂತನವಾಗಿ ಹಮ್ಮಿಕೊಳ್ಳಲಾಗಿರುವ ಸರಳೀಕರಣವಾದ ದರಖಾಸ್ತು ಪೋಡಿ ಅಭಿಯಾನಕ್ಕೆ ರಾಜ್ಯದ ಉಪಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಕನಕಪುರದ ತಾಲ್ಲೂಕು ಕಚೇರಿ ಆವರಣದಲ್ಲಿ ಚಾಲನೆ ನೀಡಿ, ಇದು ರೈತರ ಜಮೀನಿನ ದಾಖಲೆಗಳನ್ನು ಬದಲಾವಣೆ ಮಾಡಲಾರದಂಥಹ ಪವಿತ್ರವಾದ ಕಾರ್ಯಕ್ರವಾಗಿದೆ ಎಂದು ಬಣ್ಣಿಸಿದರು.

ಶನಿವಾರ ಕನಕಪುರದ ತಾಲ್ಲೂಕು ಕಚೇರಿ ಆವರಣದಲ್ಲಿ ಸರಳೀಕರಣವಾದ ದರಖಾಸ್ತು ಪೋಡಿ ಅಭಿಯಾನಕ್ಕೆ ವಿದ್ಯುಕ್ತವಾಗಿ ಚಾಲನೆ ನೀಡಿದ ನಂತರ ಮಾತನಾಡಿದರು.

ಲ್ಯಾಂಡ್ ಗ್ರಾಂಟ್ ನ್ಯಾಯಮಂಡಳಿಯಿಂದ ಸರ್ಕಾರ ಯಾವುದೇ ಜಮೀನು ರೈತರಿಗೆ ಕೊಟ್ಟಿದ್ದರೆ ಅದನ್ನು ದುರಸ್ತಿ ಮಾಡಿ ನೇರವಾಗಿ ಕೊಡಬೇಕೆಂದು ಈ ಸರಳೀಕರಣ ಮಾಡಲಾಗಿದೆ, ಆ ಮೂಲಕ ರೈತರಿಗೆ ಆಗುವ ತೊಂದರೆಗಳನ್ನು ತಪ್ಪಿಸಲು ಈ ಕಾರ್ಯಕ್ರಮ ರೂಪಿಸಲಾಗಿದೆ,

ಮೊದಲ ಹಂತದಲ್ಲಿ ರಾಮನಗರ ಜಿಲ್ಲೆಯಲ್ಲಿ ಇದಕ್ಕೆ ಚಾಲನೆ ನೀಡಲಾಗಿದ್ದು, ಮುಂದೆ ಹಾಸನ ಜಿಲ್ಲೆಯಲ್ಲಿಯೂ ಈ ಕಾರ್ಯಕ್ರಮ ಆರಂಭಿಸಲಾಗುತ್ತಿದೆ, ತದನಂತದಲ್ಲಿ ಇಡೀ ರಾಜ್ಯಕ್ಕೆ ಈ ವಿಶೇಷವಾದ ಯೋಜನೆ ರೂಪಿಸಲಾಗುವುದು,

ಇಂದು ಭೂಮಿ ಬೆಲೆ ಹೆಚ್ಚಾಗುತ್ತಿದ್ದು, ರೈತರ ದಾಖಲೆಗಳನ್ನು ಮುಂದಿನ ದಿನಗಳಲ್ಲಿ ಬದಲಾವಣೆ ಮಾಡಲಾಗದಂತಹ ಈ ಕಾರ್ಯಕ್ರಮ ಅನುಷ್ಠಾನಕ್ಕೆ ತರಲಾಗುತ್ತಿದೆ ಎಂದ ಉಪ ಮುಖ್ಯಮಂತ್ರಿಗಳು ಕಂದಾಯ ಸಚಿವರೊಂದಿಗೆ ಚರ್ಚಿಸಿ ಈ ಕಾರ್ಯಕ್ರಮಕ್ಕೆ ಹೊಸ ಹೆಸರು ನೀಡಲಾಗುವುದು ಎಂದರು.

ರಾಮನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಇಕ್ಬಾಲ್ ಹುಸೇನ್, ವಿಧಾನ ಪರಿಷತ್ ಸದಸ್ಯರಾದ ಎಸ್. ರವಿ, ಮುಖಂಡರಾದ ವಿಜಯ್ ದೇವ್, ಕನಕಪುರ ನಗರಸಭೆ ಅಧ್ಯಕ್ಷೆ ಲಕ್ಷ್ಮೀ ದೇವಮ್ಮ, ಕನಕಪುರ ತಾಲ್ಲೂಕಿನ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ದಿಲೀಪ್, ಮುಖಂಡರಾದ ಎಚ್.ಕೆ. ಶ್ರೀಕಂಠ, ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ದಿಗ್ವಿಜಯ ಬೋಡ್ಕೆ, ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ ಕಾರ್ತಿಕ್ ರೆಡ್ಡಿ ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ಸಾರ್ವಜನಿಕರು, ರೈತರು ಉಪಸ್ಥಿತರಿದ್ದರು.

## ಅಂಬೇಡ್ಕರ್ ಮಹಾಪರಿನಿಬ್ಬಾಣ ದಿನ ಆಚರಣೆ

**ಮಾಲೂರು, ಡಿಸೆಂಬರ್ 09:** ಅಂಬೇಡ್ಕರ್ ಮಹಾಪರಿನಿಬ್ಬಾಣ ದಿನದ ಅಂಗವಾಗಿ ಮಾಲೂರು ಬಸ್ ನಿಲ್ದಾಣದ ಬಳಿ ಇರುವ ಅಂಬೇಡ್ಕರ್ ಉದ್ಯಾನದಲ್ಲಿರುವ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಶಿವಕುಮಾರ್, ಕರ್ನಾಟಕಕರ್ನಾಟಕ ಅಂಬೇಡ್ಕರ್ ಸೇವಾ ಸಂಘದ ರಾಜ್ಯಾಧ್ಯಕ್ಷ ಹಾಗೂ ಏನು ಸಮಾಚಾರ ಪತ್ರಿಕೆಯ ಸಂಪಾದಕ ಪಿ ಎನ್ ದಾಸ್ ಮತ್ತು ಕರ್ನಾಟಕ ದಲಿತ ಸಿಂಹ ಸೇನೆ ರಾಜ್ಯ ಅಧ್ಯಕ್ಷ ತಿಪ್ಪಸಂದ್ರ ಶ್ರೀನಿವಾಸ್, ಕರ್ನಾಟಕ ಅಂಬೇಡ್ಕರ್ ಸೇವಾ ಸಂಘದ ಪೋಷಕರಾದ ಸಿ.ಎಸ್.ಕೃಷ್ಣಪ್ಪ, ರಾಜ್ಯ ಪ್ರಧಾನ ಕಾರ್ಯದರ್ಶಿ ಸೋಮಶೇಖರ್, ರಾಜ್ಯ ಉಪಾಧ್ಯಕ್ಷ ಎನ್. ನಾಗರಾಜ್, ವಿದ್ಯಾರ್ಥಿ ನಿಲಯ ಮೇಲ್ವಿಚಾರಕ ಕೆ. ಅಶ್ವಥಪ್ಪ, ಚನ್ನಕಲ್ ಸಂತೋಷ ಈ ಸಂದರ್ಭದಲ್ಲಿ ಇದ್ದರು.



## ಸ್ವಯಂ ಉದ್ಯೋಗದಿಂದ ಜೀವನ ಸುಧಾರಣೆ; ವಿಠ್ಠಲ್ ಕಾವಳೆ ಅಭಿಮತ




**ಸೂಲಿಬೆಲೆ, ಡಿಸೆಂಬರ್ 09:** ತಮ್ಮ ವಿದ್ಯಾರ್ಹತೆಗೆ ಅನುಗುಣವಾಗಿ ಸ್ವ ಉದ್ಯೋಗ ಕೇಂದ್ರದಲ್ಲಿ ತರಬೇತಿ ಪಡೆಯುವ ಮೂಲಕ ಸ್ವಯಂ ಉದ್ಯೋಗಗಳನ್ನು ಪ್ರಾರಂಭಿಸಿ ಜೀವನ ಸುಧಾರಣೆ ಜೊತೆಯಲ್ಲಿ ಉಜ್ವಲ ಭವಿಷ್ಯ ರೂಪಿಸಿಕೊಳ್ಳಬಹುದು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ವಿಠ್ಠಲ್ ಕಾವಳೆ ತಿಳಿಸಿದರು. ಸೂಲಿಬೆಲೆ ಹೋಬಳಿ ಸೊಣ್ಣಹಳ್ಳಿಪುರ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಕೇಂದ್ರಕ್ಕೆ ಶನಿವಾರ ಬೇಟಿ ಲಘು ವಾಹನ ಚಾಲನಾ ತರಬೇತಿಗೆ ಚಾಲನೆ ನೀಡಿ ಮಾತನಾಡಿದರು.

> ಮಹಿಳೆಯರಿಗೆ ಹೆಚ್ಚಿನ ಉದ್ಯೋಗವಕಾಶಗಳಿದ್ದು ತರಬೇತಿ ಪಡೆದ ಫಲಾನುಭವಿಗಳು ಸಂಸ್ಥೆಯ ರಾಯಭಾರಿಗಳಾಗಿ ತರಬೇತಿ ಪಡೆದ ಸಂಸ್ಥೆಗೆ ಕೀರ್ತಿ ತರುವಂತಹ ಉದ್ಯೋಗಗಳನ್ನು ಪಡೆಯಬೇಕು.
>
> । ವಿಠ್ಠಲ್ ಕಾವಳೆ, ಜಿಲ್ಲಾ ಯೋಜನಾ ನಿರ್ದೇಶಕರು, ಜಿ.ಪಂ.ಬೆಂ.ಗ್ರಾ.ಜಿಲ್ಲೆ.

ಹೆಚ್ಚಿನ ಪ್ರಮಾಣದಲ್ಲಿ ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲೂ ಉದ್ಯೋಗವಕಾಶಗಳನ್ನು ಸೃಷ್ಟಿಸಿಕೊಳ್ಳಬೇಕು ಸಿಗುವ ಎಲ್ಲಾ ತರಬೇತಿಗಳನ್ನು ಪಡೆಯಬೇಕು ಮಹಿಳಾ ಸಬಲೀಕರಣವಾಗಬೇಕು ಎಂದರು. ಮಹಿಳಾ ಸ್ವ–ಸಹಾಯ ಸಂಘ ಸದಸ್ಯರಿಗೆ ಸರ್ಕಾರದಿಂದ ಅನೇಕ ಯೋಜನೆಗಳು ದೊರೆಯುತ್ತಿದ್ದು, ವಿಮಾನ ನಿಲ್ದಾಣಗಳಲ್ಲಿ ಮಹಿಳಾ ಚಾಲಕರಿಗೆ ವಿಪುಲ ಅವಕಾಶಗಳಿದ್ದು ಸದುಪಯೋಗ ಮಾಡಿಕೊಳ್ಳಬೇಕು ಎಂದರು.

ತರಬೇತಿ ಕೇಂದ್ರದ ನಿರ್ದೇಶಕರಾದ ಅಂಬರೀಷ್ ಮಾತನಾಡಿ, ತರಬೇತಿಯಲ್ಲಿನ ಸ್ವ–ಸಹಾಯ ಸಂಘದ ಮಹಿಳಾ ಶಿಬಿರಾರ್ಥಿಗಳಿಗೆ ಗ್ರಾಮಪಂಚಾಯತಯಲ್ಲಿನ ಘನ ತ್ಯಾಜ್ಯ ವಿಲೇವಾರಿ ಘಟಕನಿರ್ವಹಣಾ ವಾಹನಕ್ಕೆ ಚಾಲಕರನ್ನಾಗಿ ನಿಯೋಜನೆ ಮಾಡಬೇಕೆಂದು ಯೋಜನಾ ನಿರ್ದೇಶಕರಲ್ಲಿ ಮನವಿ ಮಾಡಿದರು.ನಿವೃತ್ತ ಉಪನ್ಯಾಸಕ ನಾರಾಯಣಸ್ವಾಮಿ, ಎನ್.ಆರ್.ಎಲ್.ಎಂ.ಜಿಲ್ಲಾ ವ್ಯವಸ್ಥಾಪಕ ರಾಜೇಶ್, ಸಂಸ್ಥೆಯ ಉಪನ್ಯಾಸಕರಾದ ಮುನಿಕೃಷ್ಣ, ರಾಮಕೃಷ್ಣಪ್ಪ, ಸಿಬ್ಬಂದಿಗಳಾದ ಸುಗುಣ, ಕವನ,ನಾಗೇಶ್, ಇತರರು ಇದ್ದರು.

# ಏನಿಗದಲೆ ನವೋದಯ ಶಾಲೆಯಲ್ಲಿ ಸಮಾಗಮಾ ಕಾರ್ಯಕ್ರಮ

**ಚೇಳೂರು:** ಆರ್ಥಿಕವಾಗಿ ಹಿಂದುಳಿದ ಪ್ರದೇಶದಲ್ಲಿರುವ ಬಡಮಕ್ಕಳನ್ನು ಶೈಕ್ಷಣಿವಾಗಿ ಬಲಿಷ್ಠಗೊಳಿಸುವಲ್ಲಿ ಶಿಕ್ಷಕರ ಪಾತ್ರ ಎಷ್ಟು ಪ್ರಮುಖವೋ ಅಷ್ಟೆ ಮುಖ್ಯವಾಗಿ ಮುಂದಿನ ಪೀಳಿಗೆಯ ದೇಶದ ಶೈಕ್ಷಣಿಕ ಅಭಿವೃದ್ಧಿಗಾಗಿ ಮಕ್ಕಳ ಭವಿಷ್ಯತ್‌ಕ್ಕಾಗಿ ಶ್ರೀಪಿ.ಎಂ.ಶ್ರೀ ಜವಾಹಾರ್ ನವೋದಯ ವಿದ್ಯಾಲಯಗಳನ್ನು ಭಾರತ ದೇಶದಲ್ಲಿ 1987 ರಲ್ಲಿ ಸ್ಥಾಪಿಸಿದ ಪ್ರಧಾನ ಮಂತ್ರಿ ರಾಜೀವ್ ಗಾಂಧೀ ರವರಿಗೆ ಕೀರ್ತಿ ಸಲ್ಲುತ್ತದೆ ಎಂದು ರಾಜ್ಯ ಸರ್ಕಾರದ ಉನ್ನತ ಶಿಕ್ಷಣಾ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಂ.ಸಿ.ಸುಧಾಕರ್ ಹೇಳಿದರು.

ಅವರು ಚೇಳೂರು ತಾಲೂಕಿನ ಏನಿಗದಲೆ ನವೋದಯ ಶಾಲಾವರಣದಲ್ಲಿ ನಡೆದ 1998-99 ನೇ ಸಾಲಿನ ದ್ವಿತಿಯ ಪಿಯುಸಿ ಅಲಿವಿನ್ ವಿದ್ಯಾರ್ಥಿಗಳಿಂದ ಅಯೋಜಿಸಿದ್ದ ಸಮಾಗಮ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಇಡಿ ಪ್ರಪಂಚದಲ್ಲಿ ಗುರುಗಳಿಗೆ ತಲೆ ಭಗ್ಗಿಸಿ ನಮಸ್ಕರಿಸುವ ಸಂಸ್ಕೃತಿ ಇರುವುದು ಭಾರತ ದೇಶದಲ್ಲಿ ಮಾತ್ರ, ಅದಕ್ಕಾಗಿ ಪವಿತ್ರವಾದ ಭಾರತೀಯ ಸಂಸ್ಕೃತಿಯನ್ನು ಪ್ರಪಂಚದ ಎಲ್ಲ ದೇಶಗಳು ಅಪ್ಪುಕೊಳ್ಳುತ್ತಿವೆ. ಶೈಕ್ಷಣಿಕ, ರಾಜಕೀಯ ಹಾಗೂ ಸಾಂಸ್ಕೃತಿಕ ಮೌಲ್ಯಗಳು ಇಲ್ಲದ ನೆಲೆಯಲ್ಲಿ ಶಿಕ್ಷಕರು ಅಕ್ಷರದ ಬೀಜವನ್ನು ಬಿತ್ತನೆ ಮಾಡುತ್ತಿದ್ದಾರೆ.

ಕೇಂದ್ರ ಸರಕಾರ ಈ ಶಾಲೆಗೆ ಪ್ರತಿವರ್ಷ 10 ಲಕ್ಷ ಹಣ ನೀಡುತ್ತಿದ್ದು ಸಾಕಾಗುತ್ತಿಲ್ಲ ಪಿಯುಸಿಗೆ ಶಿಕ್ಷಕರ ಕೊರತೆ ಜೊತೆಗೆ ಸಿಬ್ಬಂದಿ ಕೊರತೆ ಇದ್ದು ಹೆಚ್ಚು ಅನುದಾನ ನೀಡಬೇಕಾಗಿದೆ ಬೆಂಗಳೂರು ರೋಟರಿ ಸಂಸ್ಥೆಗಳಿಂದ ಸಹಾಯ ಮಾಡಿಸುವೆ ಎಂದರು




1998-99 ಪಿಯುಸಿ ಬ್ಯಾಚ್‌ನ ವಿದ್ಯಾರ್ಥಿಗಳು ಸಂವಿಧಾನ ಪುಸ್ತಕ. ನೆನಪಿನ ಕಾಣಿಕೆ. ನೀಡಿ ಗುರು ವೃಂಧದವರನ್ನು ಸನ್ಮಾನಿಸಿ ಅಶೀರ್ವಾದ ಪಡೆದುಕೊಂಡರು ಕಳೆದ 10 ನೇತರಗತಿಯಲ್ಲಿ ಟಾಪರ್ ಬಂದಿದ್ದ ಎಂ.ಎನ್.ಪುರುಷೋತ್ತಮರೆಡ್ಡಿ ಸೇರಿದಂತೆ ಇತರೆ ಮಕ್ಕಳಿಗೆ ವೇದಿಕೆ ಮೇಲೆ ಬಹುಮಾನ ನೀಡಿ ಗೌರವಿಸಿದರು. ಸಮಾರಂಭಕ್ಕೂ ಮುನ್ನ ಸಚಿವರು 300 ಕ್ಕೂ ಹೆಚ್ಚು ಗಿಡಗಳನ್ನ ನೆಟ್ಟರು.

ಈ ಸಮಾರಂಭದಲ್ಲಿ ಬೆಂಗಳೂರು ಕಿದ್ವಾಯಿ ಆಸ್ಪತ್ರೆ ನಿರ್ದೇಶಕ ಡಾ.ಆರ್.ರಾಮಚಂದ್ರ ಅಲೀವೀನ್ ವಿಧ್ಯಾರ್ಥಿಗಳ ಸಂಘದ ಅಧ್ಯಕ್ಷ ಶಿವಶರಣ್ ಡಾ. ಆಶೋಕ್ ನವೋದಯ ಶಾಲೆಯ ಪ್ರಾಂಶುಪಾಲ ಟಿ.ಪಳನೀವೇಲು. ಶಿಕ್ಷಕರು ಸಿಬ್ಬಂದಿ ಹಾಜರಿದ್ದರು.

# ಶಾಂತಿಯುತ ಮತದಾನ

**ಶಿಡ್ಲಘಟ್ಟ** : ತಾಲ್ಲೂಕಿನಲ್ಲಿ ಅವಧಿ ಮುಗಿದ ಜಂಗಮಕೋಟೆ ಹೋಬಳಿಯ ನಾಲ್ಕು ಗ್ರಾಮ ಪಂಚಾಯಿತಿಗಳಿಗೆ ಭಾನುವಾರ ಮತದಾನ ನಡೆದಿದ್ದು ಯಾವುದೆ ಅಡ್ಡಿ ಆತಂಕ ಇಲ್ಲದೆ ಶಾಂತಿಯುತವಾಗಿ ಮತದಾನ ನಡೆಯಿತು,ನಾಲ್ಕೂ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಸ ಶೇ 95% ? ರಷ್ಟು ಮತದಾನವಾಗಿದೆ ಎಂದು ತಿಳಿದು ಬಂದಿದೆ.

ಈಗಾಗಲೇ ಹೊಸಪೇಟೆ ಗ್ರಾಮ ಪಂಚಾಯಿತಿಯ ಎದ್ದಲತಿಪ್ಪೇನಹಳ್ಳಿ ಹಾಗೂ ದೊಡ್ಡ ಚೊಕ್ಕಂಡಹಳ್ಳಿಯ 3 ಕ್ಷೇತ್ರಗಳಿಗೆ ಅವಿರೋಧ ಆಯ್ಕೆಯಾಗಿದ್ದು ಇನ್ನುಳಿದಂತೆ ಭಕ್ತರಹಳ್ಳಿ, ಮಳಮಾಚನಹಳ್ಳಿ, ಹೊಸಪೇಟೆ ಹಾಗೂ ನಾಗಮಂಗಲ ಗ್ರಾಮ ಪಂಚಾಯಿತಿ ವ್ಯಾಪ್ತಿಯ 43 ಸ್ಥಾನಗಳಿಗೆ ಮತದಾನ ನಡೆಯಿತು.

ಬೆಳಗ್ಗೆ 7 ಗಂಟೆಗೆ ಆರಂಭವಾದ ಮತದಾನ ಪ್ರಕ್ರಿಯೆ ಸಂಜೆ 5 ಗಂಟೆಯವರೆಗೂ ನಡೆಯಿತು. ನಾಲ್ಕು ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ 19 ಮತಗಟ್ಟೆಗಳಲ್ಲಿ ಮತದಾನ ನಡೆಯಿತು,ಬೆಳಿಗ್ಗೆ ಆರಂಭದ ಸಮಯದಲ್ಲಿ ಮತ ಹಾಕಲು ಮತದಾರ ಅಷ್ಟೇನೂ ಉತ್ಸಾಹ ತೋರಲಿಲ್ಲವಾದರೂ ಮದ್ಯಾಹ್ನ ನಂತರ ಹೆಚ್ಚಿನ ಸಂಖ್ಯೆಯಲ್ಲಿ ಮತದಾರರು ಮತಗಟ್ಟೆಯತ್ತ ಆಗಮಿಸಿ ಮತ ಚಲಾಯಿಸಿದರು.ಸಾಮಾನ್ಯ ಕ್ಷೇತ್ರಕ್ಕಿಂತಲೂ ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಮತಟ್ಟೆಗಳ ಬಳಿ ಹೆಚ್ಚಿನ ಪೊಲೀಸ್ ಭದ್ರತೆಯನ್ನು ಬಂದೋ ಬಸ್ತಾಗಿ ನಿಯೋಜಿಸಿದ್ದರು.

ಡಿವೈಎಸ್ಪಿ ಮುರಳೀಧರ್, ಸರ್ಕಲ್ ಇನ್ಸ್‌ಕ್ಟರ್ ಎಂ.ಶ್ರೀನಿವಾಸ್, ಗ್ರಾಮಾಂತರ ಠಾಣೆಯ ಎಸ್‌ಐ ಸತೀಶ್ ಮತಗಟ್ಟೆಗಳಿಗೆ ಭೇಟಿ ನೀಡಿ ಬಂದೋಬಸ್ತನ್ನು ಪರಿಶೀಲಿಸಿದರು.

ಮತ ಪೆಟ್ಟಿಗೆಗಳನ್ನು ಶಿಡ್ಲಘಟ್ಟ ನಗರದ ತಾಲ್ಲೂಕು ಕಚೇರಿ ಪಕ್ಕದಲ್ಲಿರುವ ಸರ್ಕಾರಿ ಪ್ರೌಢಶಾಲೆಯಲ್ಲಿ

ಸುರಕ್ಷಿತವಾಗಿ ಸ್ಟ್ರಾಂಗ್ ರೂಮ್ ನಲ್ಲಿ ಪೊಲೀಸ್ ಬಂದೋಬಸ್ತ್ ನಲ್ಲಿ ಇರಿಸಲಾಗುವುದು ಎಂದು ಚುನಾವಣಾ ಅಧಿಕಾರಿಗಳು ತಿಳಿಸಿದರು.

ಕಾಂಗ್ರೆಸ್, ಜೆಡಿಎಸ್, ಬಿಜೆಪಿಯ ಬೆಂಬಲಿತ ಅಭ್ಯರ್ಥಿಗಳು ಮತಗಟ್ಟೆ ಬಳಿ ಮತದಾನದ ಕಡೆಯ ಗಳಿಗೆಯವರೆಗೂ ಮತದಾರರ ಮನವೊಲಿಸುವ ಕಾರ್ಯದಲ್ಲಿ ತಲ್ಲೀನರಾಗಿದ್ದರೆ ಅವರಿಗೆ ಪಕ್ಷದ ಕಾರ್ಯಕರ್ತರು, ಮುಖಂಡರು ಸಾಥ್ ನೀಡಿದ್ದರು.ಮತಗಟ್ಟೆ ಬಳಿ ಮಹಿಳಾ ಕಾರ್ಯಕರ್ತರು ಎಲೆ,ಅಡಿಕೆ, ಬಾಳೆಹಣ್ಣು, ಅರಿಶಿಣ,ಕುಂಕುಮ ಇಟ್ಟುಕೊಂಡು ಮಹಿಳಾ ಮತದಾರರಿಗೆ ಅರಿಶಿಣ,ಕುಂಕುಮ,ಬಾಳೆಹಣ್ಣು,ಎಲೆ, ಅಡಿಕೆ ಕೊಟ್ಟು ಮತ ಹಾಕುವಂತೆ ಮನವಿ ಮಾಡಿದ ದೃಶ್ಯಗಳು ಸಮಾನ್ಯವಾಗಿದ್ದವು.

# ವಕ್ಫ್ ಬೋರ್ಡ್‌ನ್ನು ಕೂಡಲೇ ರದ್ದುಗೊಳಿಸಬೇಕು

**ಶಿಡ್ಲಘಟ್ಟ** : ಪಾಕಿಸ್ತಾನ ಹಾಗೂ ಬಾಂಗ್ಲಾದೇಶ ಆ ದೇಶಗಳಿಲ್ಲಿಲ್ಲದ ಕಾಯ್ದೆಗಳು ನಮಗೇಕೆ ಹಾಗಾಗಿ ಕೂಡಲೇ ವಕ್ಫ್ ಬೋರ್ಡ್‌ನ್ನು ಕೂಡಲೇ ರದ್ದುಗೊಳಿಸಬೇಕು ಎಂದು ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆಗ್ರಹಿಸಿದರು.

ತಾಲ್ಲೂಕಿನ ಬೆಳ್ಳೂಟಿ ಗ್ರಾಮದ ಬಳಿಯಿರುವ ಪುರಾತನ ಕಾಲದ ಶ್ರೀಆಂಜನೇಯಸ್ವಾಮಿ ದೇವಾಲಯಕ್ಕೆ ಭೇಟಿ ನೀಡಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿ ಅವರು ಮಾತನಾಡಿದರು.

ಒಂದಾಗಿದ್ದ ದೇಶ 1947ರಲ್ಲಿ ಸ್ವತಂತ್ರಗೊಂಡ ನಂತರ ಹಿಂದುಸ್ತಾನ ಹಾಗೂ ಪಾಕಿಸ್ತಾನವಾಗಿ ಪ್ರತ್ಯೇಕಗೊಂಡಿತು. ನಂತರ 1971ರಲ್ಲಿ ಬಾಂಗ್ಲಾದೇಶ ರೂಪುಗೊಂಡಿತು,

ದೇಶಗಳು ಒಂದಾಗಿದ್ದಾಗ ಇದ್ದ ವಕ್ಫ್ ಕಾಯ್ದೆ ಇಂದು ಭಾರತದಲ್ಲಿರುವ ಕಾರಣ ಕೂಡಲೇ ವಕ್ಫ್ ರದ್ದುಗೊಳಿಸಬೇಕು ಈ ನಿಟ್ಟಿನಲ್ಲಿ ರಾಜ್ಯಾದ್ಯಂತ ಮೂರು ತಂಡಗಳಾಗಿ ಬಿಜೆಪಿ ಪ್ರವಾಸ ಕೈಗೊಂಡು ವಕ್ಫ್ ಬೋರ್ಡ್ ನೋಟಿಸ್‌ನಿಂದ ಗೊಂದಲಕ್ಕೆ ಸಿಲುಕಿರುವವರ ಅಹವಾಲು ಸ್ವೀಕರಿಸುವ ಜತೆಗೆ ಮುಂಬರುವ ಅಧಿವೇಶನದಲ್ಲಿ ಈ ಬಗ್ಗೆ ಗಟ್ಟಿ ಧ್ವನಿ ಎತ್ತಲಾಗುವುದು ಎಂದರು.

ತಾಲ್ಲೂಕಿನ ಬೆಳ್ಳೂಟಿ ಗ್ರಾಮದ ಶ್ರೀಆಂಜನೇಯ ಸ್ವಾಮಿ ದೇವಾಲಯ ಪುರಾತನ ಕಾಲದಿಂದ ಇದ್ದು, ಈಗ ದೇವಾಲಯದ ಜಾಗ ವಕ್ಫ್ ಗೆ ಸೇರಿಸಿರುವುದು ಖಂಡನೀಯ. ವಿಶೇಷವೆಂದರೆ ಇಡೀ ಗ್ರಾಮದಲ್ಲಿ ಒಂದೇ ಒಂದು ಮುಸ್ಲಿಂ ಕುಟುಂಬವಿಲ್ಲ, ಆದರೂ ಗ್ರಾಮದ ದೇವಾಲಯ ಜಾಗವನ್ನು ವಕ್ಫ್‌ಗೆ ಸೇರಿಸಿರುವುದು ಕಾಂಗ್ರೆಸ್ ಸರ್ಕಾರದ ಓಲೈಕೆ ರಾಜಕಾರಣಕ್ಕೆ ನಿದರ್ಶನವಾಗಿದೆ ಹೇಳಿದರು.



ರಾಜ್ಯದಲ್ಲಿ 2019ರಲ್ಲಿ ಬಿಜೆಪಿ ಸರ್ಕಾರದ ಅವಧಿಯಲ್ಲಿ ಈ ದೇವಾಲಯದ ಜಾಗದ ಪಹಣಿಯಲ್ಲಿ ವಕ್ಫ್ ಆಸ್ತಿ ಎಂದು ನಮೂದಾಗಿದೆ,ಈ ಬಗ್ಗೆ ನಿಮ್ಮ ನಿಲುವೇನು ಎಂಬ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಛಲವಾದಿ ನಾರಾಯಣಸ್ವಾಮಿ, ಪಹಣಿಯಲ್ಲಿ ವಕ್ಫ್ ಹೆಸರು ನಮೂದಿಸಿರುವುದು ಅಧಿಕಾರಿ ವರ್ಗ ಯಾವುದೇ ಸರ್ಕಾರದ ಅವಧಿಯಲ್ಲಿ ಆಗಿದ್ದರೂ ಅಂತಹ ಅಧಿಕಾರಿಗಳನ್ನು ಜೈಲಿಗೆ ಕಳುಹಿಸಲಿ ಎಂದರು.

ಡಾಕ್ಟರ್ ಅಲ್ಲದವ ರಾಜ್ಯದ ಆರೋಗ್ಯ ಸಚಿವ, ಇನ್ನು ವಿದ್ಯೆ ಇಲ್ಲದವ, ಕನ್ನಡ ಬಾರದ ವ್ಯಕ್ತಿ ವಿದ್ಯಾಮಂತ್ರಿ ಎಂದು ಮೂದಲಿಸಿದ ಛಲವಾದಿ ನಾರಾಯಣಸ್ವಾಮಿ, ಯೋಗ್ಯತೆ ಇಲ್ಲದವರನ್ನು ಮಂತ್ರಿ ಮಾಡಿರುವುದರಿಂದಲೇ ನಿರಂತರವಾಗಿ ಅವಾಯುಕ ಬಾಣಂತಿಯರು ಹಾಗೂ ಹಸುಗೂಸುಗಳ ಸಾವುಗಳು ಸಂಭವಿಸುತ್ತಿವೆ,ಸಚಿವ ದಿನೇಶ್ ಗುಂಡೂರಾವ್ ಅವರಿಗೆ ನಾಚಿಕೆ ಆಗಬೇಕು ನೈತಿಕತೆ ಇದ್ದಲ್ಲಿ ಈಗಾಗಲೇ ರಾಜೀನಾಮೆ ನೀಡಬೇಕಿತ್ತು ಎಂದರು.

ಕೋಲಾರ ಮಾಜಿ ಸಂಸದ ಎಸ್. ಮುನಿಸ್ವಾಮಿ ಮಾತನಾಡಿ ಆ ಸಮುದಾಯದವರು ತಾಲ್ಲೂಕು ದಂಡಾಧಿಕಾರಿಗಳಾಗಿ ಬಂದಾಗ ಅವರ ಕಮ್ಯೂನಿಟಿಯ ಅ ಅಭಿಮಾನ ಇರುತ್ತದೆ ಕೋಲಾರದಲ್ಲಿ ಜಿಲ್ಲಾಧಿಕಾರಿ ಅಕ್ರಂಪಾಷ ಇದೇ ಕೆಲಸ ಮಾಡಿದ್ದಾರೆ ಯಾವುದೇ ತಾಲ್ಲೂಕಿಗೆ ಆ ಸಮುದಾಯದವರು ಬಂದಾಗ ವಕ್ಫ್ ಹೆಸರಿಗೆ ಮಾಡಿದ್ದಾರೆ.

ಈ ಸಂದರ್ಭದಲ್ಲಿ ವಿದಾನಪರಿಷತ್ ಮಾಜಿ ಸದಸ್ಯ ವೈ.ಎ.ನಾರಾಯಣಸ್ವಾಮಿ,ಮುಖಂಡರಾದ ದೇವನಹಳ್ಳಿ ಗೋಪಿ,ಸೀಕಲ್ ಆನಂದಗೌಡ,ನಗರಸಭೆ ಸದಸ್ಯ ನಾರಾಯಣಸ್ವಾಮಿ, ಕಂಬದಹಳ್ಳಿ ಸುರೇಂದ್ರಗೌಡ, ಮುನಿರಾಜು ,ರೈತ ಸಂಘದ ಮುನಿಕೆಂಪಣ್ಣ ಸುತ್ತ ಮುತ್ತಲಿನ ಗ್ರಾಮಸ್ಥರು, ಇನ್ನಿತರರು ಪಾಲ್ಗೊಂಡಿದ್ದರು.

# ಗ್ರಾ. ಪಂ ಸಖಿಯರ ಒಕ್ಕೂಟದ ಬೇಡಿಕೆ ಪರಿಗಣಿಸಲು ಮನವಿ

**ಕುಕನೂರು** : ಕೌಶಲ್ಯ ಅಭಿವೃದ್ಧಿ ಜೀವನೋಪಾಯ ಇಲಾಖೆಯ ಅಡಿಯಲ್ಲಿ ಕರ್ತವ್ಯ ನಿರ್ವಹಿಸುವ ಕರ್ನಾಟಕ ರಾಜ್ಯ ಗ್ರಾಮ ಪಂಚಾಯತ್ ಮಟ್ಟದ ಮುಖ್ಯ ಪುಸ್ತಕ ಬರಹಗಾರರ ಮತ್ತು ಸ್ಥಳೀಯ ಸಮುದಾಯ ಸಂಪನ್ಮೂಲಗಳ ಸಖಿಯರ ಮಹಾ ಒಕ್ಕೂಟದ ಸದಸ್ಯರ ಬೇಡಿಕೆಗಳನ್ನು ಸರ್ಕಾರ ಪರಿಗಣಿಸಲು ಮತ್ತು ಈಡೇರಿಸಲು ಮುಂದಾಗಬೇಕು ಎಂದು ಒಕ್ಕೂಟದ ರಾಜ್ಯಾಧ್ಯಕ್ಷೆ ರುದ್ರಮ್ಮ ಹೇಳಿದ್ದಾರೆ.

ಪಟ್ಟಣದಲ್ಲಿ ಜಿಲ್ಲಾವಾರು ಸದಸ್ಯರ ಬೇಡಿಕೆಗಳ ಜಾಗೃತಿ ಮೂಡಿಸಲು ಸುದ್ದಿಗೋಷ್ಠಿ ನಡೆಸಿ ಮಾತನಾಡಿದರು. ಈಗಾಗಲೇ ಡಿಸೇಂಬರ್ 6 ರಂದು ಇಲಾಖೆಯ ಸಚಿವರು, ಅಧಿಕಾರಿಗಳೊಂದಿಗೆ ಬೆಂಗಳೂರಲ್ಲಿ ಸಭೆ ನಡೆಸಲಾಗಿದೆ. ಒಕ್ಕೂಟದಿಂದ ಮತ್ತೊಮ್ಮೆ ಇದೇ 12 ನೇ ತಾರೀಖು ಬೆಳಗಾವಿ ಸುವರ್ಣ ಸೌಧದಲ್ಲಿ ಸಚಿವರಿಗೆ ಮನವಿ ಕೊಡುತ್ತೇವೆ ಅಂದು ಅವರು ಹೇಳಿದರು.

ರಾಜ್ಯದಲ್ಲಿ 29 ಸಾವಿರ ಒಕ್ಕೂಟದ ಸದಸ್ಯರು ಕೆಲಸ ಮಾಡುತ್ತಿದ್ದು ಗೌರವ ಧನ ಹೆಚ್ಚಿಸಬೇಕು, ಪ್ರತಿ ಒಕ್ಕೂಟಕ್ಕೆ ಸುಮಾರು 6 ಲಕ್ಷ ರೂ ಅನುದಾನ ಕೊಡಬೇಕು, ಪ್ರಯಾಣ ಭತ್ಯೆ, ದಿನ ಭತ್ಯೆ ನೀಡಬೇಕು ಎಂದು ಹಲವು ಬೇಡಿಕೆಗಳನ್ನು ಇಲಾಖೆಯ ಮುಂದೆ ಸಲ್ಲಿಸಿದ್ದೇವೆ ಮತ್ತೊಮ್ಮೆ ಗಮನ ಸೆಳೆಯಲು ಮನವಿ ಸಲ್ಲಿಸುತ್ತೇವೆ ಎಂದು ರುದ್ರಮ್ಮ ಹೇಳಿದರು. ಈ ಸಂದರ್ಭದಲ್ಲಿ ಶಾಂತಿ ತಿಮ್ಮಾಪುರ, ಶರಣಮ್ಮ ಕಸಗಿ ಮಠ, ಜಯಶ್ರೀ ಹಿರೇ ಕುರುಬರ, ಚಂದ್ರಕಲಾ, ಶಾರದಾ ಇದ್ದರು.

# ಮಾನವ-ಪ್ರಾಣಿ ಸಂಘರ್ಷ: ತ.ನಾಡು ಮಾದರಿ ಅಧ್ಯಯನ ಮಾಡುವಂತೆ ಅಧಿಕಾರಿಗಳಿಗೆ ಖಂಡ್ರೆ ಸೂಚನೆ

**ಬೆಂಗಳೂರು:** ಮಾನವ-ಪ್ರಾಣಿ ಸಂಘರ್ಷಗಳನ್ನು ನಿಯಂತ್ರಿಸುವಲ್ಲಿ ತಮಿಳುನಾಡು ಅನುಸರಿಸುತ್ತಿರುವ ವಿಧಾನಗಳ ಪರಿಣಾಮಕಾರಿತ್ವದ ಕುರಿತು ಅಧ್ಯಯನ ಮಾಡುವಂತೆ ಅರಣ್ಯ ಮತ್ತು ಪರಿಸರ ಸಚಿವ ಈಶ್ವರ್ ಖಂಡ್ರೆ ಅವರು ಗುರುವಾರ ಅರಣ್ಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಕರ್ನಾಟಕದಲ್ಲಿ ಆನೆಗಳ ಸಂಖ್ಯೆ ಕೇವಲ 5,395 ರಷ್ಟಿದೆ. ಜೀವ ಮತ್ತು ಬೆಳೆ ಹಾನಿಯನ್ನು ತಡೆಯಲು ಪರ್ಯಾಯ ಯೋಜನೆಯನ್ನು ರೂಪಿಸುವಂತೆ ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.



ಕೊಡಗು, ಹಾಸನ, ಸಕಲೇಶಪುರ, ಶಿವಮೊಗ್ಗ, ಚಿಕ್ಕಮಗಳೂರು, ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಗಳಲ್ಲಿ ಮಾನವ-ಪ್ರಾಣಿ ಸಂಘರ್ಷದಿಂದ ಹೆಚ್ಚು ಹಾನಿಯಾಗುತ್ತಿದೆ.

ಪ್ರಸ್ತುತ ಕರ್ನಾಟಕವು ಅರಣ್ಯ ಪ್ರದೇಶಗಳಿಗೆ ಹೊಂದಿಕೊಂಡಿರುವ ಹಳ್ಳಿಗಳಿಗೆ ಆನೆಗಳು ನುಗ್ಗದಂತೆ ತಡೆಯಲು ರೈಲ್ವೆ ಹಳಿಗಳನ್ನು ಬಳಸಿ ಬ್ಯಾರಿಕೇಡ್ ನಿರ್ಮಿಸಲು ಪ್ರತಿ ಕಿಲೋಮೀಟರ್‌ಗೆ 1.5 ಕೋಟಿ ರೂ. ವೆಚ್ಚವಾಗುತ್ತಿದ್ದು, ಕರ್ನಾಟಕವು ಇದುವರೆಗೆ 312 ಕಿ.ಮೀ. ಬ್ಯಾರಿಕೇಡ್ ನಿರ್ಮಿಸಿದೆ.

ಆದರೆ ತಮಿಳುನಾಡು ಪ್ರತಿ ಕಿಲೋಮೀಟರ್‌ಗೆ ಕೇವಲ 45 ಲಕ್ಷ ರೂಪಾಯಿ ವೆಚ್ಚದಲ್ಲಿ ಉಕ್ಕಿನ ಹಗ್ಗಗಳನ್ನು ಬಳಸುತ್ತಿದೆ. ಸ್ಟೀಲ್ ಹಗ್ಗಗಳು ಆನೆಗಳು ಮತ್ತು ಇತರ ಕಾಡು ಪ್ರಾಣಿಗಳ ಅತಿಕ್ರಮಣವನ್ನು ತಡೆದುಕೊಳ್ಳುತ್ತದೆಯೇ ಎಂಬುದನ್ನು ನಾವು ನೋಡಬೇಕು. ಈ ಬಗ್ಗೆ ಪರಿಶೀಲಿಸಿ 10 ದಿನದೊಳಗೆ ವರದಿ ಸಲ್ಲಿಸುವಂತೆ ಸಚಿವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ರೈಲ್ವೆ ಹಳಿ ಬಳಸಿದ ಬೇಲಿಗಳನ್ನು ಅಳವಡಿಸುವ ಮೊದಲು ಮತ್ತು ನಂತರದ ಜೀವಹಾನಿ ಮತ್ತು ಬೆಳೆ ಹಾನಿಯ ಬಗ್ಗೆ ತುಲನಾತ್ಮಕ ವರದಿಯನ್ನು ಸಲ್ಲಿಸುವಂತೆ ಸಚಿವರು ಅಧಿಕಾರಿಗಳಿಗೆ ಆದೇಶಿಸಿದರು.

ಈ ಸಂಬಂಧ ಎಲ್ಲಾ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳಿಗೂ ಸೂಚನೆ ರವಾನಿಸಲಾಗಿದೆ ಎಂದು ಸಚಿವ ಖಂಡ್ರೆ ಅವರ ಕಚೇರಿಯ ಪತ್ರಿಕಾ ಪ್ರಕಟಣೆ ತಿಳಿಸಿದೆ.

# ಮೀಸಲಾತಿ ಕೊಟ್ಟರೆ ಮುತ್ತಿನ ಹಾರ, ಕೊಡದಿದ್ದರೆ ಸುವರ್ಣಸೌಧಕ್ಕೆ ಮುತ್ತಿಗೆ

**ಬೆಳಗಾವಿ:** 2ಎ ಮೀಸಲಾತಿಗೆ ಆಗ್ರಹಿಸಿ ಮತ್ತೆ ಪಂಚಮಸಾಲಿ ಸಮಾಜ ಸಿಡಿದೆದ್ದಿದೆ. ಚಳಿಗಾಲ ಅಧಿವೇಶನದ ವೇಳೆ ಕೂಡಲಸಂಗಮದ ಲಿಂಗಾಯತ ಪಂಚಮಸಾಲಿ ಪೀಠದ ಬಸವಜಯ ಮೃತ್ಯುಂಜಯ ಸ್ವಾಮೀಜಿ ನೇತೃತ್ವದಲ್ಲಿ ಬೃಹತ್ ಟ್ರ್ಯಾಕ್ಟರ್ ರ‍್ಯಾಲಿಗೆ ಸಿದ್ಧತೆ ನಡೆದಿದೆ. ಕಾಲಿಗೆ ಚಕ್ರ ಕಟ್ಟಿಕೊಂಡಂತೆ ಸ್ವಾಮೀಜಿ ಹಳ್ಳಿಹಳ್ಳಿಗೆ ಭೇಟಿ ನೀಡಿ ಜನರನ್ನು ಜಾಗೃತಿಗೊಳಿಸುತ್ತಿದ್ದಾರೆ.

"ಸಿದ್ದರಾಮಯ್ಯ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಸುಮಾರು 18 ತಿಂಗಳಿನಿಂದ ಶಾಂತಿಯುತವಾಗಿ ಹೋರಾಡಿದ್ದೇವೆ. ಆದರೂ ಸೌಜನ್ಯಯುತವಾಗಿಯೂ ಕರೆದು ನಮ್ಮನ್ನು ಮಾತನಾಡಿಸಲಿಲ್ಲ. ವಕೀಲರು ಹೋರಾಟ ಮಾಡಿದ ಮೇಲೆ, ಬೆಂಗಳೂರಿಗೆ ಕರೆಸಿ ಮುಖ್ಯಮಂತ್ರಿಗಳು ಮಾತನಾಡಿದರು. ಆದರೆ, ಆ ವೇಳೆ ಯಾವುದೇ ಭರವಸೆ ಮತ್ತು ಸಮಯಾವಕಾಶವನ್ನೂ ಕೊಡಲಿಲ್ಲ. ಇದು ನಮಗೆ ಮತ್ತು ವಕೀಲರಿಗೆ ತೀವ್ರ ನಿರಾಸೆ ತಂದಿತು" ಎಂದು ಸ್ವಾಮೀಜಿ ಬೇಸರಿಸಿದರು.

"ಪಂಚಮಸಾಲಿ ಸಮುದಾಯಕ್ಕೆ ಮೀಸಲಾತಿ ನೀಡುವಲ್ಲಿ ನಿರ್ಲಕ್ಷ್ಯ ತೋರಿದ ಸರ್ಕಾರಗಳ ವಿರುದ್ಧ ಚಳಿಗಾಲ ಅಧಿವೇಶನ ವೇಳೆ ಧರಣಿ ಮಾಡುತ್ತಾ ಬಂದಿದ್ದೇವೆ. ಹಿಂದೆ ಜಗದೀಶ ಶೆಟ್ಟರ್ ಮುಖ್ಯಮಂತ್ರಿ ಆಗಿದ್ದಾಗಲೂ ಸೌಧಕ್ಕೆ ಮುತ್ತಿಗೆ ಹಾಕಿದ್ದೆವು. 2020ರಲ್ಲಿ ಯಡಿಯೂರಪ್ಪ ಸರ್ಕಾರ, 2022ರಲ್ಲಿ ಬೊಮ್ಮಾಯಿ ಸರ್ಕಾರಕ್ಕೂ ಬಿಸಿ ಮುಟ್ಟಿಸಿದ್ದೆವು. ಈಗ ಸಿದ್ದರಾಮಯ್ಯ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಯಾವುದೇ ಸ್ಪಂದನೆ ಸಿಗದ ಹಿನ್ನೆಲೆಯಲ್ಲಿ 5 ಸಾವಿರ ಟ್ರ್ಯಾಕ್ಟರ್, 10 ಸಾವಿರ ವಕೀಲರ ನೇತೃತ್ವದಲ್ಲಿ, ಲಕ್ಷಾಂತರ ಪಂಚಮಸಾಲಿ ಸಮುದಾಯದವರು ಸೌಧಕ್ಕೆ ಮುತ್ತಿಗೆ ಹಾಕಲಿದ್ದೇವೆ. ಮೀಸಲಾತಿ ಘೋಷಿಸುವವರೆಗೂ ಅಲ್ಲೇ ಧರಣಿ ಮುಂದುವರಿಸುತ್ತೇವೆ" ಎಂದು ಸ್ವಾಮೀಜಿ ತಿಳಿಸಿದರು.

ಪಂಜಾಬ್ ಮಾದರಿ ಟ್ರಾಕ್ಟರ್ ರ‍್ಯಾಲಿ: "ದೆಹಲಿಯಲ್ಲಿ ಪಂಜಾಬ್ ರೈತರ ಮೆರವಣಿಗೆ ಮಾದರಿಯಲ್ಲಿ ನಾವು ಟ್ರ್ಯಾಕ್ಟರ್ ಮೆರವಣಿಗೆಗೆ ಸಜ್ಜಾಗಿದ್ದೇವೆ. ಆದರೆ, ನಮ್ಮದು ಕಾನೂನಿಗೆ ಪೂರಕವಾಗಿ, ಬಸವಣ್ಣನವರ ಶಾಂತಿ ತತ್ವ, ರಾಣಿ ಚನ್ನಮ್ಮನವರ ಹೋರಾಟ ಪ್ರೇರಣೆಯಾಗಿಸಿಕೊಂಡು ಶಾಂತಿಯುತ ಪ್ರತಿಭಟನೆ ಕೈಗೊಳ್ಳುತ್ತೇವೆ. ಡಿ.7ರಂದು ಬೆಳಗಾವಿಯಲ್ಲಿ ಸಮಾಜದ ಹಾಲಿ-ಮಾಜಿ ಶಾಸಕರು, ಮುಖಂಡರ ಸಭೆ ಕರೆದಿದ್ದೇವೆ. ಟ್ರ್ಯಾಕ್ಟರ್ ರ‍್ಯಾಲಿ ಎಲ್ಲಿಂದ ಆರಂಭಿಸಬೇಕು, ಸಮಾವೇಶ ಹೇಗಿರಬೇಕು, ಸೌಧಕ್ಕೆ ಮುತ್ತಿಗೆ ಹಾಕುವ ಬಗ್ಗೆ ವಿಸ್ತೃತವಾಗಿ ಚರ್ಚಿಸಿ ನಿರ್ಧರಿಸುತ್ತೇವೆ" ಎಂದು ತಿಳಿಸಿದರು.

**ಡಿ.10ರಂದು ಮುತ್ತಿಗೆ:** "ಕಳೆದ ನಾಲ್ಕು ವರ್ಷಗಳಲ್ಲಿ ನಮ್ಮ ಹೋರಾಟ ಹತ್ತಿಕ್ಕಲು ಅನೇಕರು ಯತ್ನಿಸಿದ್ದಾರೆ. ಆದರೆ, ನಮ್ಮೊಳಗಿನ ಪ್ರಾಮಾಣಿಕ ಹೋರಾಟದ ಗುಣ, ಸಾಮಾಜಿಕ ನ್ಯಾಯದ ಪರ ಇರೋದರಿಂದ ಜನರ ರೂಪದಲ್ಲಿ ದೇವರು ನಮಗೆ ಶಕ್ತಿ ತುಂಬುತ್ತಿದ್ದಾನೆ. ಬಸವಣ್ಣ, ಚನ್ನಮ್ಮಾಜಿ ಕಾಲದಲ್ಲೂ ಅಂಥ ಮನಸ್ಥಿತಿಗಳು ಇದ್ದವು. ಹಾಗಾಗಿ, ಯಾವುದೇ ಜನಪ್ರತಿನಿಧಿ, ಮುಖಂಡರ ಗಾಸಿಪ್ ಮಾತುಗಳಿಗೆ ಯಾರೂ ಕಿವಿಗೊಡಬಾರದು. ಡಿ.10ರಂದು ಮಂಗಳವಾರ ಬೆಳಿಗ್ಗೆ 10 ಗಂಟೆಗೆ ಸುವರ್ಣ ಸೌಧಕ್ಕೆ ಮುತ್ತಿಗೆ ಹಾಕುವುದು ಶತಸಿದ್ಧ. ಹೆಚ್ಚಿನ ಸಂಖ್ಯೆಯಲ್ಲಿ ಸಮಾಜದ ಜನರು ಹೋರಾಟದಲ್ಲಿ ಪಾಲ್ಗೊಳ್ಳಬೇಕು" ಎಂದು ಸ್ವಾಮೀಜಿ ಕರೆ ನೀಡಿದರು.



"ಹೋರಾಟಕ್ಕೂ ಮೊದಲು ಮೀಸಲಾತಿ ಘೋಷಿಸಿದರೆ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಅವರಿಗೆ 15 ಅಡಿ ಎತ್ತರದ ಮುತ್ತಿನ ಹಾರ ಹಾಕಿ, ಚನ್ನಮ್ಮಾಜಿ ಪುತ್ಥಳಿ ನೀಡಿ ಸನ್ಮಾನಿಸುತ್ತೇವೆ. ಮೀಸಲಾತಿ ಆದೇಶ ಪತ್ರ ಕೊಡದಿದ್ದರೆ ಮುತ್ತಿಗೆ ಹಾಕುವುದು ಶತಸಿದ್ಧ" ಎಂದು ಸ್ವಾಮೀಜಿ ಎಚ್ಚರಿಕೆ ನೀಡಿದರು.

ಪುರುಷರು ಬಸವಣ್ಣ, ಮಹಿಳೆಯರು ಚನ್ನಮ್ಮನಂತೆ ಬನ್ನಿ: "ಹಿಂದೆ ಬೆಂಗಳೂರಲ್ಲಿ 10 ಲಕ್ಷ, ಬೆಳಗಾವಿಯಲ್ಲಿ 20 ಲಕ್ಷ ಜನರನ್ನು ಸೇರಿಸಿ ಶಕ್ತಿ ಪ್ರದರ್ಶನ ಮಾಡಿದ್ದೇವೆ. ಹಾಗಾಗಿ, ಈ ಬಾರಿ ಶಕ್ತಿ ಪ್ರದರ್ಶನದ ಜೊತೆಗೆ ಸರ್ಕಾರದಿಂದ ನಮಗಾಗಿರುವ ಅಸಮಾನತೆ, ನೋವು ವ್ಯಕ್ತಪಡಿಸಲು ಲಕ್ಷಾಂತರ ಸಂಖ್ಯೆಯಲ್ಲಿ ಸೇರುತ್ತೇವೆ. ಪ್ರತೀ ಊರಿನಿಂದ ಕನಿಷ್ಟ 1 ಟ್ರ್ಯಾಕ್ಟರ್ ತರಬೇಕು. ತಮ್ಮ ವಾಹನಗಳಲ್ಲಿ ಜನರನ್ನು ಕರೆತರಬೇಕು. ಟ್ರ್ಯಾಕ್ಟರ್ ಮೂಲಕ ರಸ್ತೆ ತಡೆದು, ವಾಹನಗಳಲ್ಲಿ ಬರುವವರು ಸೌಧಕ್ಕೆ ಮುತ್ತಿಗೆ ಹಾಕಲಾಗುವುದು. ಪುರುಷರು ಬಸವಣ್ಣ, ಮಹಿಳೆಯರು ಚನ್ನಮ್ಮನಂತೆ ಪಾಲ್ಗೊಳ್ಳಬೇಕು" ಸ್ವಾಮೀಜಿ ಇದೇ ವೇಳೆ ಕರೆ ನೀಡಿದರು.

## ಸುದ್ದಿ ಸಂಜೆ

### ಅವಧಿ ವಿಸ್ತರಣೆ

**ಚಾಮರಾಜನಗರ:** ಹಿಂದುಳಿದ ವರ್ಗಗಳ 'ಇಲಾಖೆಯಿಂದ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ, ಅರೆಅಲೆಮಾರಿ ಪ್ರವರ್ಗ-1ರ ವಿದ್ಯಾರ್ಥಿಗಳಿಂದ ವಿದ್ಯಾರ್ಥಿವೇತನ, ಶುಲ್ಕಮರುಪಾವತಿ,ವಿದ್ಯಾಸಿರಿ (ಊಟ ಮತ್ತು ವಸತಿ ಸಹಾಯ ಯೋಜನೆ) ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕಅರ್ಜಿ ಸಲ್ಲಿಸುವ ಅವಧಿಯನ್ನು ಡಿಸೆಂಬರ್ 20 ರವರೆಗೆ ವಿಸ್ತರಿಸಲಾಗಿದೆ.ಮೆಟ್ರಿಕ್ ನಂತರದ ಪಿಯುಸಿ ಮತ್ತು ಸಮನಾಂತರ, ಸಾಮಾನ್ಯ ಪದವಿ,ಸಂಯೋಜಿತ ಉಭಯ ಪದವಿ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ 2024-25ನೇ ಸಾಲಿನ ಮೆಟ್ರಿಕ್ ನಂತರದ ವಿದ್ಯಾರ್ಥಿಗಳು ಸೌಲಭ್ಯಕ್ಕೆ ಆನ್‌ಲೈನ್‌ಮೂಲಕ ವೆಬ್‌ಸೈಟ್ https://ssp.postmatric.karnataka.gov.in ನಲ್ಲಿ ಅರ್ಜಿ ಸಲ್ಲಿಸಬಹುದು. ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ವೆಬ್‌ಸೈಟ್ https://bcwd.karnataka.gov.in, ಇಲಾಖಾ ಸಹಾಯವಾಣಿ ದೂ.ಸಂ 8050770005, ಇ-ಮೇಲ್ bcwdhelpline@gmail.in, ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ ಸಹಾಯವಾಣಿ ಇ-ಮೇಲ್ postmatrichelp@karnataka.gov.in ಮತ್ತು ದೂ.ಸಂ 1902 ಸಂಪರ್ಕಿಸಬಹುದು. ಅರ್ಜಿ ಸಲ್ಲಿಸಲು ಡಿಸೆಂಬರ್ 20 ಅಂತಿಮ ದಿನವಾಗಿದೆ ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅರ್ಜಿ ಆಹ್ವಾನ

**ಚಾಮರಾಜನಗರ:** ಕರ್ನಾಟಕ ಕುರಿಮತ್ತು ಉಣ್ಣೆ ಅಭಿವೃದ್ಧಿ ನಿಗಮದ ವತಿಯಿಂದ 2024-25ನೇ ಸಾಲಿಗೆ ಗಿರಿಜನ ಉಪಯೋಜನೆಯಡಿ ನೀಡಲಾಗುವ ಕುರಿ, ಮೇಕೆ ಘಟಕ ಸಹಾಯಧನಕ್ಕಾಗಿ ನೋಂದಾಯಿತ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘಗಳ ಪರಿಶಿಷ್ಟ ಪಂಗಡದ ಸದಸ್ಯರಿಂದ ಅರ್ಜಿ ಆಹ್ವಾನಿಸಲಾಗಿದೆ. ಯೋಜನೆಯಡಿ 10 ಸುಧಾರಿತ ಹೆಣ್ಣು ಕುರಿ, ಮೇಕೆ, 1 ಟಗರು/ಹೋತ ಒಟ್ಟು ಘಟಕ ವೆಚ್ಚ 66 ಸಾವಿರ ರೂ. ಗಳಿದ್ದು ಶೇ.90 ರಷ್ಟು ಸಹಾಯಧನ ಹೊಂದಿರುತ್ತದೆ. 18 ರಿಂದ 60 ವರ್ಷದೊಳಗಿನ ಮಹಿಳಾ ಹಾಗೂ ಪುರುಷ ಸದಸ್ಯರು ಅರ್ಜಿ ಸಲ್ಲಿಸಬಹುದು. ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘಗಳ ಮೂಲಕ ಡಿ.15ರೊಳಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಹತ್ತಿರದಲ್ಲಿರುವ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘ ಅಥವಾ ಚಾಮರಾಜನಗರದ ಪಶು ಆಸ್ಪತ್ರೆ ಆವರಣದಲ್ಲಿರುವ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಸಹಾಯಕ ನಿರ್ದೇಶಕರ ಕಚೇರಿ ಸಂಪರ್ಕಿಸುವಂತೆ ನಿಗಮದ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸ್ಕೇಟಿಂಗ್; ಶಿಡ್ಲಘಟ್ಟ ವಿದ್ಯಾರ್ಥಿಗಳಿಗೆ ಜಯ

ಶಿಡ್ಲಘಟ್ಟ : ಶಿಡ್ಲಘಟ್ಟ ಸ್ಪೀಡ್ ಸ್ಕೇಟಿಂಗ್ ಅಸೋಸಿಯೇಷನ್ ವಿದ್ಯಾರ್ಥಿಗಳು ಗೌರಿಬಿದನೂರಿನ ನೇತಾಜಿ ಕ್ರೀಡಾಂಗಣದಲ್ಲಿ ನಡೆದ ಜಿಲ್ಲಾಮಟ್ಟದ ಸ್ಕೇಟಿಂಗ್ ಪಂದ್ಯಾವಳಿಯಲ್ಲಿ ಜಯ ಸಾದಿಸಿದ್ದು ನಾಲ್ಕು ಪ್ರಥಮ, ಎರಡು ದ್ವಿತೀಯ ಹಾಗು ಎರಡು ತೃತೀಯ ಸ್ಥಾನಗಳನ್ನು ಪಡೆದಿದ್ದಾರೆ.ಪ್ರಶಸ್ತಿ ವಿಜೇತರು:ನಿರಂಜನ್ (10 ವರ್ಷ): 500 ಮೀಟರ್ ಮತ್ತು 1000 ಮೀಟರ್ ಕ್ವಾಡ್ ಸ್ಕೇಟಿಂಗ್‌ನಲ್ಲಿ ಎರಡು ಪ್ರಥಮ ಸ್ಥಾನ ಪಡೆದಿದ್ದಾರೆ.ರಿತ್ವಿಕ್ (10 ವರ್ಷ): 500 ಮೀಟರ್‌ನಲ್ಲಿ ದ್ವಿತೀಯ ಹಾಗೂ 1000 ಮೀಟರ್‌ನಲ್ಲಿ ತೃತೀಯ ಸ್ಥಾನ ಜಯಿಸಿದ್ದಾರೆ.ಮೋಹನ್ (10 ವರ್ಷ): 500 ಮೀಟರ್‌ನಲ್ಲಿ ತೃತೀಯ ಮತ್ತು 1000 ಮೀಟರ್‌ನಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ.ಸಿ.ತನ್ಮಯಿ (12 ವರ್ಷ): 500 ಮೀಟರ್ ಮತ್ತು 1000 ಮೀಟರ್ ಕ್ವಾಡ್ ಸ್ಕೇಟಿಂಗ್‌ನಲ್ಲಿ ಎರಡು ಪ್ರಥಮ ಸ್ಥಾನ ಗಳಿಸಿದ್ದಾರೆ.ಸ್ಕೇಟಿಂಗ್ ತರಬೇತುದಾರ ಅರುಣ್ ಕುಮಾರ್ ಅವರು ವಿದ್ಯಾರ್ಥಿಗಳ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿದ್ದು ಈ ಸಾಧನೆ ಉತ್ತಮ ಪರಿಶ್ರಮದ ಫಲವಾಗಿದೆ ಎಂದು ಶ್ಲಾಘಿಸಿದರು. ಈ ವಿಜೇತ ವಿದ್ಯಾರ್ಥಿಗಳು ಮುಂದಿನ ಹಂತದ ಸ್ಕೇಟಿಂಗ್ ಪಂದ್ಯಾವಳಿಗಳತ್ತ ಗಮನಹರಿಸಿದ್ದು, ತಮಗೆ ಮತ್ತಷ್ಟು ಯಶಸ್ಸು ತರುವ ಭರವಸೆ ವ್ಯಕ್ತಪಡಿಸಿದ್ದಾರೆ.

### ಗುಂಡಿಗಳಿಂದ ತುಂಬಿರುವ ರಸ್ತೆ

ಮಾಲೂರು: ತಾಲ್ಲೂಕಿನ ಲಕ್ಕೂರು ಹೋಬಳಿಯ ಕೋಡಿಹಳ್ಳಿ ಗೇಟ್ ಬಳಿ ಗುಂಡಿಯಲ್ಲಿ ಕೆ.ಎಸ್. ಆರ್.ಟಿ.ಸಿ.ಬಸ್ ನಿಂತು ಹೋದ ಹಿನ್ನೆಲೆಯಲ್ಲಿ ಸುಮಾರು 2-3 ಕೀ.ಮಿ ವಾಹನಗಳ ಜಾಮ್. ಜಾಮ್‌ನಿಂದ ಶಾಲಾ ವಾಹನಗಳು, ಕಾರ್ಮಿಕರು, ವಾಹನ ಸವಾರರು, ಸಾರ್ವಜನಿಕರು ಪರದಾಡುವಂತ ಪರಿಸ್ಥಿತಿ ನಿರ್ಮಾಣವಾಗಿತ್ತು. ಇತ್ತೀಚೆಗೆ ಸತತವಾಗಿ ಬಾರಿ ಮಳೆಗಳು ಸುರಿದ ಹಾಗೂ ಅಧಿಕ ಭಾರದ ವಾಹನಗಳ ಸಂಚಾರದ ಹಿನ್ನೆಲೆಯಲ್ಲಿ ರಸ್ತೆಗಳು ಹದಗೆಟ್ಟು ಬಾರಿ ಗಾತ್ರದ ಗುಂಡಿಗಳು ಬಿದ್ದಿದ್ದು, ಹೆಚ್ಚು ಮಳೆ ಸುರಿಯುತ್ತಿರುವುದರಿಂದ ಗುಂಡಿಗಳಲ್ಲಿ ವ ಳೆಯ ನೀರು ನಿಂತು ಗುಂಡಿ ಯಾವುದು ರಸ್ತೆ ಯಾವುದು ಎನ್ನುವುದು ಗೊತ್ತಾಗಿದೆ ಕೆ.ಎಸ್. ಅರ್.ಟಿ.ಸಿ ಬಸ್ ಚಾಲಕ ಗುಂಡಿಯಲ್ಲಿ ಬಿಟ್ಟಿದರಿಂದ ಬಸ್ ಗುಂಡಿಯಲ್ಲಿ ಸಿಲುಕಿ ಹಿಂದೆ ಬರುವ ವಾಹನಗಳು ಸೀತನಾಯಕನಹಳ್ಳಿವರೆಗೆ ಹಾಗೂ ಜಯಮಂಗಲ ಗ್ರಾಮದವರೆಗೆ 2-3 ಕಿ.ಮೀ ನಿಂತು ಸವಾರರು ಪರದಾಡುವಂತ ಪರಿಸ್ಥಿತಿ ನಿರ್ಮಾಣವಾಗಿ ಶಾಲಾ ಕಾಲೇಜು, ಕಾರ್ಮಿಕರು, ಸವಾರರು 2 ಗಂಟೆಗಳ ರಸ್ತೆಯಲ್ಲಿ ನಿಲ್ಲುವಂತ ಘಟನೆ ನಡೆಯಿತು. ಅಧಿಕಾರಿಗಳ ಬಿರುದ್ದ ಹಿಡಿ ಶಾಪ ಹಾಕಿ ಇನ್ನಾದರೂ ಸಂಬಂಧ ಪಟ್ಟ ಅಧಿಕಾರಗಳು ಇತ್ತ ಗಮ ನಹರಿಸಿ ತಾತ್ಕಾಲಿಕವಾಗಿ ಗುಂಡಿಗಳನ್ನು ಮುಚ್ಚಿ ವಾಹನ ಸವಾರರ ಸುಗಮ ಸಂಚಾರಕ್ಕೆ ಅನುಕೂಲ ಕಲ್ಪಿಸುವರೇ ಎನ್ನುವುದು ಯಕ್ಷ ಪ್ರಶ್ನೆಯಾಗಿದೆ.

# ಸರ್ಕಾರಿ ಶಾಲೆ ವಿದ್ಯಾರ್ಥಿ ಎಂಬ ಕೀಳರಿಮೆ ಸಲ್ಲದು: ಡಾ. ಸಂತೋಷ್



**ಬೇಲೂರು, ಡಿಸೆಂಬರ್ 09:** ನಮ್ಮ ದೇಶದಲ್ಲಿ ಹಲವಾರು ಮಹನೀಯರು ಆಗಿ ಹೋಗಿದ್ದು, ಅವರಲ್ಲಿ ಬಹುತೇಕರು ಸರ್ಕಾರಿ ಶಾಲೆಯಲ್ಲಿ ಓದಿದವರೇ ಆಗಿರುತ್ತಾರೆ. ಖಾಸಗಿ ಶಾಲೆಯಲ್ಲಿ ಓದಿದವರು ಶ್ರೇಷ್ಠರು ಸರ್ಕಾರಿ ಶಾಲೆಯಲ್ಲಿ ಓದಿದವರು ಕನಿಷ್ಠರು ಎಂಬ ಭಾವನೆ ಸಲ್ಲದು ಎಂದು ಬೇಲೂರು ದೇಶಭಕ್ತ ರಬಳಗದ ಅಧ್ಯಕ್ಷ ಡಾ. ಸಂತೋಷ್ ಹೇಳಿದರು.

ಸರ್ಕಾರಿ ಪ್ರೌಢಶಾಲೆಯಲ್ಲಿ ಮಕ್ಕಳ ದಿನಾಚರಣೆಯ ಅಂಗವಾಗಿ ವಿವಿಧ ಸಾಂಸ್ಕೃತಿಕ ಮತ್ತು ಕ್ರೀಡಾ ಸ್ಪರ್ಧೆಗಳಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ದೇಶಭಕ್ತರ ಬಳಗ ಬೇಲೂರು ವತಿಯಿಂದ ಬಹುಮಾನ ವಿತರಿಸಿ ಮಾತನಾಡಿದರು.

ಮಕ್ಕಳ ದಿನಾಚರಣೆಯಂದು ಮಾಡಿದ ಸ್ಪರ್ಧೆಗಳು ಮಕ್ಕಳಲ್ಲಿರುವ ಪ್ರತಿಭೆಯನ್ನು ಲೋಕ ಮುಖಕ್ಕೆ ಪ್ರಕಟಪಡಿಸುವುದಕ್ಕೆ ಒಂದು ಅವಕಾಶ ವಾಗಿರುತ್ತದೆ ಇದನ್ನು ವಿದ್ಯಾರ್ಥಿಗಳು ಸದುಪಯೋಗಪಡಿಸಿಕೊಳ್ಳಬೇಕು ಮತ್ತು ವಿದ್ಯಾರ್ಥಿ ಜೀವನ ಎಂಬುದು ಉತ್ತಮ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಲು ಒಂದು ಉತ್ತಮ ಅವಕಾಶ ವಾಗಿರುತ್ತದೆ ಎಂದು ಅಭಿಪ್ರಾಯಪಟ್ಟರು.

ಸಂಸ್ಥೆಯ ಕಾರ್ಯದರ್ಶಿ ಮಹೇಶ್ ಮಲ್ಲಿಕಾರ್ಜುನ ಗ್ರೂಪ್ಸ್ ಮಾತನಾಡಿ, ಸರ್ವೇ ಜನಾಃ ಸುಖಿನೋ ಭವಂತು ಎಂಬುದು ಭಾರತೀಯರ ಪುರಾತನ ಕಲ್ಪನೆಯಾಗಿದೆ ಅಂದರೆ ಈ ಪ್ರಪಂಚದ ಎಲ್ಲವರು ಸುಖಿಯಾಗಿರಲಿ ಎಂದು ಬಯಸುವ ವಿಶಾಲ ಮನೋಭಾವ ಹೊಂದಿದ ಏಕೈಕ ಸಂಸ್ಕೃತಿ ಹೊಂದಿರುವ ಮಹಾನ್ ದೇಶ ನಮ್ಮದು ದೇಶ ಸುತ್ತಲೂ ಶತ್ರುಗಳ ಸಂಖ್ಯೆ ಜಾಸ್ತಿಯಾಗುತ್ತಿದ್ದು ದೇಶ ಇಂದು ದೇಶದ ಒಳಗಿನ ಶತ್ರುಗಳನ್ನು ಮತ್ತು ಹೊರಗಿನ ಶತ್ರುಗಳನ್ನು ಎದುರಿಸುವ ಮಹಾನ್ ಅಪಾಯ ಒದಗಿ ಬಂದಿದೆ. ಈ ದೆಸೆಯಲ್ಲಿ ಇಂದಿನ ವಿದ್ಯಾರ್ಥಿಗಳ ಮುಂದಿನ ಜನಾಂಗ ದೇಶಭಕ್ತಿಯನ್ನು ಹೊಂದಿ ದೇಶದ ಏಳಿಗೆಗಾಗಿ ದುಡಿಯಬೇಕೆಂದು ಸಲಹೆ ನೀಡಿದರು.

ದೇಶಭಕ್ತರ ಬಳಗದ ಸದಸ್ಯರಾದ ಪವನ್ ಗ್ಲಾಸ್ ಪ್ರಕಾಶ್ ಮತ್ತು ಹಯವದನರಾವ್ ಅವರು ವಿದ್ಯಾರ್ಥಿಗಳಿಗೆ ಬಹುಮಾನ ಮತ್ತು ನೋಟ್ ಬುಕ್ ವಿತರಣಾ ಕಾರ್ಯದಲ್ಲಿ ಕೈಜೋಡಿಸಿದರು.

ಈ ಕಾರ್ಯಕ್ರಮದಲ್ಲಿ ಶಾಲಾ ಮುಖ್ಯೋಪಾಧ್ಯಾಯರಾದ ಸಿದ್ದೇಗೌಡರು, ಹನಿಕೆ ಶಾಲೆಯ ಅಧ್ಯಾಪಕರಾದ ಬಿ.ಎಸ್ ಪಾಟೀಲ್, ಸೋಮಶೇಖರ್, ಮಂಜುಳಾ, ಪೂರ್ಣಿಮಾ ಮತ್ತು ನಾಜಿಯಾ ಉಪಸ್ಥಿತರಿದ್ದರು.

# ಹುತ್ತೂರು ಕ್ಷೇತ್ರವನ್ನು ಬಂಗಾರಪೇಟೆಗೆ ಸೇರ್ಪಡೆ ಮಾಡಲು ಬಿಡುವುದಿಲ್ಲ: ಮಾರ್ಕಂಡೇಗೌಡ



**ಬಂಗಾರಪೇಟೆ, ಡಿಸೆಂಬರ್ 09:** ಕೋಚಿಮಲ್ ನಿಂದ ಬಂಗಾರಪೇಟೆ ಹಾಗೂ ಕೆಜಿಎಫ್ ಎರಡು ಕ್ಷೇತ್ರಗಳನ್ನು ಮರು ವಿಂಗಡಣೆ ಮಾಡಿರುವುದು ಸಮರ್ಪಕವಾಗಿದೆ, ಆದರೆ ಹುತ್ತೂರು ಹೋಬಳಿಯನ್ನು ಬಂಗಾರಪೇಟೆ ಕ್ಷೇತ್ರಕ್ಕೆ ಸೇರಿಸಲು ಹುನ್ನಾರ ನಡೆಸುತ್ತಿರುವುದು ಸರಿಯಲ್ಲ ಯಾವುದೇ ಕಾರಣಕ್ಕೂ ಹುತ್ತೂರು ಕ್ಷೇತ್ರವನ್ನು ಬಂಗಾರಪೇಟೆಗೆ ಸೇರ್ಪಡೆ ಮಾಡಲು ಬಿಡುವುದಿಲ್ಲ ಎಂದು ಹಾಲು ಉತ್ಪಾದಕರ ಸಹಕಾರ ಸಂಘದ ಮಾಜಿ ಅಧ್ಯಕ್ಷ ವಿ.ಮಾರ್ಕಂಡೇ ಗೌಡ ಹೇಳಿದರು.

ಪಟ್ಟಣದ ಕೆಂಪೇಗೌಡ ಕಲ್ಯಾಣ ಮಂಟಪದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಒಬ್ಬ ಮುಖಂಡನನ್ನು ಓಲೈಕೆ ಮಾಡಲು ಹುತ್ತೂರು ಹೋಬಳಿಯನ್ನು ಬಂಗಾರಪೇಟೆ ಕ್ಷೇತ್ರಕ್ಕೆ ಸೇರಿಸಲು ಹೊರಟಿರುವುದು ಸರಿಯಲ್ಲ, ಬಂಗಾರಪೇಟೆ ಕ್ಷೇತ್ರದ ಯಾರೇ ಅಭ್ಯರ್ಥಿಯಾದರು ಪಕ್ಷ ಬೇಧ ಮರೆತು ಗೆಲ್ಲಿಸಲು ಶ್ರಮಿಸೋಣ, ಕೆಜಿಎಫ್ ಮತ್ತು ಬಂಗಾರಪೇಟೆ ಕ್ಷೇತ್ರವನ್ನು ಸಮನಾಗಿ 61:61 ಡೈರಿಗಳನ್ನು ಸಮನಾಗಿ ಹಂಚಿಕೆ ಮಾಡಿರುವುದು ಸಮರ್ಪಕವಾಗಿದೆ. ಆದರೆ ಕೆಲ ಬಲ್ಲ ಮೂಲಗಳ ಪ್ರಕಾರ ಹುತ್ತೂರು ಹೋಬಳಿಯಲ್ಲಿ ಬಂಗಾರಪೇಟೆಗೆ ಸೇರಿಸುವುದರಿಂದ ಬಂಗಾರಪೇಟೆ ಕ್ಷೇತ್ರದ ಅಭ್ಯರ್ಥಿಗೆ ನಷ್ಟವಾಗುತ್ತದೆ. ಆದ್ದರಿಂದ ನಾವು ಇದನ್ನು ವಿರೋಧಿಸುತ್ತೇವೆ, ಯಾವುದೇ ಕಾರಣಕ್ಕೂ ಹುತ್ತೂರು ಹೋಬಳಿ ಬಂಗಾರಪೇಟೆಗೆ ಸೇರಿಸುವುದು ಕಂಡುಬಂದಲ್ಲಿ ನ್ಯಾಯಾಲಯದಿಂದ ತಡೆಯಾಜ್ಞೆ ತರಲಾಗುವುದೆಂದು ಎಚ್ಚರಿಕೆ ನೀಡಿದರು.

ಎರಡು ಕ್ಷೇತ್ರಗಳಾಗಿ ವಿಂಗಡಣೆ ಮಾಡಿರುವುದರಿಂದ ಈ ಬಾರಿ ಹೊಸದಾಗಿ ಬಂಗಾರಪೇಟೆ ಕ್ಷೇತ್ರದ ಒಬ್ಬರು ನಿರ್ದೇಶಕರಾಗಲು ಅವಕಾಶ ಸಿಕ್ಕಿರುವುದರಿಂದ ಅದನ್ನು ಸದುಪಯೋಗಪಡಿಸಿಕೊಂಡು ಸ್ಥಳೀಯರಿಗೆ ಅವಕಾಶ ಸಿಗಲಿ ಎಂದರು, ಪಕ್ಷ ಬೇಧ ಮರೆತು ನಮ್ಮ ಬಂಗಾರಪೇಟೆ ಕ್ಷೇತ್ರದ ಅಭ್ಯರ್ಥಿಯನ್ನು ಗೆಲ್ಲಿಸಲು ಶ್ರಮಿಸೋಣ ಎಂದರು, ಯಾವುದೇ ಕಾರಣಕ್ಕೂ ಬಂಗಾರಪೇಟೆ ಕ್ಷೇತ್ರಕ್ಕೆ ಸೇರಿಸುವುದನ್ನು ವಿರೋಧಿಸುತ್ತೇವೆ ಎಂದರು. ಗೋಲ್ಡನ್ ಡೈರಿ ನಿರ್ಮಾಣ ಮಾಡುತ್ತಿರುವ ಕಾರ್ಯವನ್ನು ಸ್ವಾಗತಿಸುವುದಾಗಿ ತಿಳಿಸಿದರು.

ವೇದಿಕೆಯಲ್ಲಿ ತಾಲ್ಲೂಕಿನ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರಾದ ಹುನ್ಕುಂದ ವೆಂಕಟೇಶ್, ಸುಬ್ರಮಣಿ, ರಮೇಶ್, ಸಂಪಂಗಿರೆಡ್ಡಿ, ಸೀತಾರಾಮಪ್ಪ, ಮುಖಂಡರಾದ ದೇವರಾಜ್, ಜುಂಜನಳ್ಳಿ ನಾರಾಯಣಸ್ವಾಮಿ ಮೊದಲಾದವರು ಹಾಜರಿದ್ದರು.

## ಮುಂದಿನ ದಿನಗಳಲ್ಲಿ ಪ್ರತಿ ಮನೆಯಲ್ಲೂ ಅಂಬೇಡ್ಕರ್ ಅವರಿಗೆ ನಮನ ಸಲ್ಲಿಕೆ



**ಬೇತಮಂಗಲ, ಡಿಸೆಂಬರ್ 09:** ಪ್ರಬುದ್ಧ ಪ್ರಜಾ ವೇದಿಕೆ ಸಂಘಟನೆ ವತಿಯಿಂದ ಅಂಬೇಡ್ಕರ್ ಅವರ 68ನೇ ಪರಿನಿರ್ವಾಣ ದಿನವನ್ನು ಕ್ಯಾಂಡಲ್ ಹಚ್ಚಿ ನಮನ ಸಲ್ಲಿಸಲಾಯಿತು,

ಪ್ರಬುದ್ಧ ಪ್ರಜಾ ವೇದಿಕೆ ರಾಜ್ಯಾಧ್ಯಕ್ಷ ಶ್ರೀನಾಥ್ ನಾಸ್ತಿಕ ಮಾತನಾಡಿ, ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ದೇಶದಲ್ಲಿ ಪ್ರತಿಯೊಬ್ಬರೂ ಶಾಂತಿ ಸುವ್ಯವಸ್ಥೆ ಯಿಂದ ಹಾಗೂ ಸ್ವಾಂತಂತ್ರ್ಯವಾಗಿ ಜೀವಿಸುವ ಹಕ್ಕನ್ನು ನೀಡಿದ ಮಹಾನ್ ನಾಯಕ. ಅವರು ಮೃತಪಟ್ಟರು ಅವರು ನೀಡಿರುವ ಕೊಡುಗೆ ಅಪಾರವಾದದ್ದು ಅದೇ ರೀತಿ ಮುಂದಿನ ದಿನಗಳಲ್ಲಿ ನಮ್ಮ ಸಂಘಟನೆಯಿಂದ ಪ್ರತಿ ಮನೆಯಲ್ಲೂ ಅಂಬೇಡ್ಕರ್ ಸಿದ್ಧಾಂತ ಆದರ್ಶಗಳ ಬಗ್ಗೆ ಅರಿವು ಮೂಡಿಸುವ ಪ್ರಯತ್ನ ಮಾಡಲಾಗುತ್ತಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಅಂಬೇಡ್ಕರ್ ಅವರ ಸಾಧನೆಯು ಒಂದು ದಿನಕ್ಕೆ ಸೀಮಿತವಾಗಬಾರದು ಅವರ ಕೊಡುಗೆ ಪ್ರತಿಯೊಬ್ಬರೂ ತಿಳಿದುಕೊಳ್ಳಬೇಕು ಎಂದರು.

ಪ್ರಬುದ್ಧ ಪ್ರಜಾ ವೇದಿಕೆ ಸಂಘಟನೆಯ ಪದಾಧಿಕಾರಿಗಳಿಂದ ಕ್ಯಾಂಡಲ್ ಮೂಲಕ ಅಂಬೇಡ್ಕರ್ ಅವರ ಪರಿನಿರ್ವಾಣ ದಿನವನ್ನು ಅರ್ಥಪೂರ್ಣವಾಗಿ ಪ್ರಣಾಮಿಸಲಾಯಿತು. ಜೊತೆಗೆ ಕಲಾವಿದರಿಂದ ಅಂಬೇಡ್ಕರ್ ಜೀವನ ಚರಿತ್ರೆಯ ಗೀತೆಗಳನ್ನು ಆಡಲಾಯಿತು.

ಪ್ರಬುದ್ಧ ಪ್ರಜಾ ವೇದಿಕೆ ರಾಜ್ಯಾಧ್ಯಕ್ಷ ಶ್ರೀನಾಥ್ ನಾಸ್ತಿಕ, ರಾಜ್ಯ ಸಮಿತಿ ಕಾರ್ಯದರ್ಶಿ ದೀಪಕ್, ಚಂದ್ರ ಶೇಖರ್, ದೇವರಾಜ್ , ನಾರಾಯಣ ಸ್ವಾಮಿ(ಬನ್ನಿ), ಕೋಲಾರ ಜಿಲ್ಲಾಧ್ಯಕ್ಷ ಕೃಷ್ಣ ಮೂರ್ತಿ, ತಾಲ್ಲೂಕು ಅಧ್ಯಕ್ಷ ಹರೀಶ್, ಉಪಾಧ್ಯಕ್ಷ ಕೆಜಿಎಫ್ ಸಂದೀಲ್ ಕುಮಾರ್, ಕೂಡುಗಲ್ ಬಾಬು, ಶ್ರೀನಿವಾಸ್, ಮಂಜುನಾಥ್, ರಾಧಾ ಕೃಷ್ಣ, ಬೂಚೇಪಲ್ಲಿ ಸಾಮ್ರಾಟ್ ಕೃಷ್ಣ ಮೂರ್ತಿ, ಆಕಾಶ್, ಚಂದ್ರ ಸೇರಿದಂತೆ ಪ್ರಬುದ್ಧ ಪ್ರಜಾ ವೇದಿಕೆ ಸಂಘಟನೆಯ ಪದಾಧಿಕಾರಿಗಳು ಹಾಗೂ ದಲಿತ ಸಂಘಟನೆಗಳ ಮುಖಂಡರು ಹಾಜರಿದ್ದರು.

## ಹಿಂದುಳಿದ ಗ್ರಾಮಗಳ ಅಭಿವೃದ್ಧಿಗೆ ಹೋಂಡಾ ಕಂಪನಿಯ ಸೇವೆ ಶ್ಲಾಘನೀಯ: ಕೆ ವೈ ನಂಜೇಗೌಡ




**ಮಾಲೂರು, ಡಿಸೆಂಬರ್ 09:** ತಾಲ್ಲೂಕಿನಲ್ಲಿ ಹಿಂದುಳಿದ ಗ್ರಾಮಗಳ ಅಭಿವೃದ್ಧಿಗೆ ಹೋಂಡಾ ಕಂಪನಿಯ ಸೇವೆ ಶ್ಲಾಘನೀಯವಾಗಿದೆ ಎಂದು ಶಾಸಕ ಕೆ ವೈ ನಂಜೇಗೌಡ ತಿಳಿಸಿದರು.

ಶಿವಾರ ಪಟ್ಟಣ ಗ್ರಾಮ ಪಂಚಾಯತಿಯ ಕರಿನಾಯಕನಹಳ್ಳಿ ಯಲ್ಲಿ ಹೋಂಡಾ ಕಂಪನಿಯ ಸಿ ಎಸ್ ಅರ್ ಅನುದಾನದಲ್ಲಿ ನಿರ್ಮಾಣ ವಾಗಿರುವ ಒಳಚರಂಡಿ ಸಂಸ್ಕರಣಾ ಘಟಕ ಉದ್ಘಾಟನಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕಿಗೆ ದೊಡ್ಡ ದೊಡ್ಡ ಕೈಗಾರಿಕೆ ಗಳು ಬಂದಿರುವುದರಿಂದ ಹಿಂದುಳಿದ ಗ್ರಾಮಗಳಲ್ಲಿ ಶಿಕ್ಷಣ, ರಸ್ತೆ, ಐಮಾಸ್ ಲೈಟ್, ಶುದ್ಧ ಕುಡಿಯುವ ನೀರಿನ ಘಟಕ ಸೇರಿದಂತೆ ಹಲವಾರು ಸೌಕರ್ಯಗಳು ಸಿಗುತ್ತಿವೆ. ಹೋಂಡಾ ಕಂಪನಿ ಮಾಲೂರು ತಾಲ್ಲೂಕುಗೆ ಬಂದು 25 ವರ್ಷಗಳು ಆಗಿದ್ದು, ಈ ಕಂಪನಿ ಶಾಶ್ವತವಾಗಿ ಉಳಿಯುವಂತ ಕಾರ್ಯಕ್ರಮಗಳನ್ನು ಮಾಡುತ್ತಿದೆ. ಮಾಲೂರು ಪಟ್ಟಣದಲ್ಲಿ ಒಳ್ಳೆ ಸ್ಟೇಡಿಯಂ ನಿರ್ಮಾಣ ಮಾಡಿ ನಾಗರಿಕರಿಗೆ ವಾಕಿಂಗ್, ವಿದ್ಯಾರ್ಥಿಗಳಿಗೆ ಕ್ರೀಡಾ ಕೂಟ ಸೇರಿದಂತೆ ಸಭೆ ಸಮಾರಂಭಗಳಿಗೆ ಅನುಕೂಲವಾಗಿದೆ. ಬಹುತೇಕ ಹಳ್ಳಿಗಳಲ್ಲಿ ರಸ್ತೆ, ಚರಂಡಿ ವಿದ್ಯುತ್ ದೀಪ ಸೇರಿದಂತೆ ಮೂಲಭೂತ ಸೌಕರ್ಯ ಗಳು ಶಾಲೆ ಕಟ್ಟಡ ವಿದ್ಯಾರ್ಥಿಗಳಿಗೆ ಬ್ಯಾಗ್, ಪುಸ್ತಕ, ಕಂಪ್ಯೂಟರ್ ನೀಡಿ ಅಭಿವೃದ್ಧಿ ಮಾಡಲು ಮುಂದಾಗಿದೆ ಹೋಂಡಾ ಕಂಪನಿ ಸೇವೆ ತಾಲ್ಲೂಕಿಗೆ ಅಪಾರ ವಾಗಿದೆ ಎಂದು ಹೇಳಿದರು. ಸ್ಥಳೀಯ ಗ್ರಾಮ ಪಂಚಾಯತಿ ಜನಪ್ರತಿನಿಧಿಗಳು ಸರ್ಕಾರದ ಅನುದಾನಗಳ ಜತೆಗೆ ಖಾಸಗಿ ಕಂಪನಿಗಳು ಸಿ ಎಸ್ ಅರ್ ಅನುದಾನಗಳನ್ನು ಬಳಸಿಕೊಂಡು ಗ್ರಾಮಗಳ ಸರ್ವೋರ್ತೋಮುಖ ಅಭಿವೃದ್ಧಿಗೆ ಮುಂದಾಗೂವಂತೆ ತಿಳಿಸಿದರು.

ಈ ಸಂರ್ಭದಲ್ಲಿಸರ್ಕಾರಿ ನೌಕರ ಸಂಘ ತಾಲ್ಲೂಕು ಅಧ್ಯಕ್ಷ ಮುನೇಗೌಡ,ತಾ. ಪಂ ಇ. ಒ ವಿ ಕೃಷ್ಣಪ್ಪ ಗ್ರಾ. ಪಂ ಅಧ್ಯಕ್ಷ ಮುನೇಗೌಡ, ಪಿ ಡಿ ಒ ರಮೇಶ್ ನಾಯಕ್, ಮುಖಂಡರಾದ ಆನಂದ ರೆಡ್ಡಿ, ನಾಗವೇಣಿ, ಹೋಂಡಾ ಕಂಪನೀಯ ಆಡಳಿತ ಮಂಡಳಿ ಸುನಿಲ್ ಕುಮಾರ್ ಮಿತ್ತಲ್,ತಕಯುಕಿ ಸುಜಾಕಿ ಸಾನ್, ಬ್ಲೂ ಡ್ರಾಪ್ ಕಂಪನಿಯ ಗಂಗೇಶ್ ರೆಡ್ಡಿ ಸೇರಿದಂತೆ ಇನ್ನಿತರರು ಇದ್ದರು.

## ಆಟೋ ಚಾಲಕರಿಗೆ ಸಮ ವಸ್ತ್ರ ವಿತರಣೆ



**ಹೊಸಕೋಟೆ, ಡಿಸೆಂಬರ್ 09:** ಹೊಸಕೋಟೆ ನಗರದ ಗೌತಮ್ ಕಾಲೋನಿಯಲ್ಲಿ ಭೀಮಾ ಸೇವಾ ಸಮಿತಿ ರಾಜ್ಯಾಧ್ಯಕ್ಷ ಶ್ರೀಕಾಂತ್ ರಾವಣ ಅಂಬೇಡ್ಕರ್ ಪರಿನಿರ್ವಾಣ ದಿನದ ಅಂಗವಾಗಿ ಆಟೋ ಚಾಲಕರಿಗೆ ಸಮವಸ್ತ್ರಗಳನ್ನು ವಿತರಣೆ ಮಾಡಿದರು.

ಭೀಮಾ ಸೇವಾ ಸಮಿತಿಯ ರಾಜ್ಯ,ಜಿಲ್ಲಾ ಹಾಗೂ ತಾಲ್ಲೂಕು ಪದಾಧಿಕಾರಿಗಳು ಈ ಸಂದರ್ಭದಲ್ಲಿ ಹಾಜರಿದ್ದರು.

## ಶಾಲಾ ಹಂತದಲ್ಲೇ ಸಹಕಾರ ವಿಷಯ ಪಠ್ಯ ಕ್ರಮಕ್ಕೆ ಸೇರ್ಪಡೆಗೆ ಕ್ರಮ; ಸಚಿವ ಕೆ.ಎನ್. ರಾಜಣ್ಣ

**ಬೆಂಗಳೂರು, ಡಿ, 9:** ಅಸೋಸಿಯೇಷನ್ ಆಫ್ ಪೀಪಲ್ ವಿತ್ ಡಿಸೆಬಿಲಿಟಿ (ಎಪಿಡಿ)ಯಿಂದ ಇಂದು ಸೋಮವಾರ ನಗರದ



ಹೆಣ್ಣೂರು ಮುಖ್ಯರಸ್ತೆಯ ಇಂಡಿಯಾ ಕ್ಯಾಂಪಸ್ ಕ್ರುಸೇಡ್ ಫಾರ್ ಕ್ರೈಸ್ಟ್ ಸಂಸ್ಥೆಯಲ್ಲಿ ವಿಕಲಚೇತನರ ಉತ್ಸವ ಆಯೋಜಿಸಲಾಗಿದೆ.

ಇಡೀ ದಿನ ನಡೆಯುವ ಈ ಕಾರ್ಯಕ್ರಮವನ್ನು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಕೆ. ಕೃಷ್ಣಮೂರ್ತಿ ಉದ್ಘಾಟಿಸಲಿದ್ದು, "ಸುಸ್ಥಿರ ಭವಿಷ್ಯಕ್ಕಾಗಿ ಅಂಗವೈಕಲ್ಯ ವಲಯದ ನಾಯಕತ್ವವನ್ನು ಮುಂಚೂಣಿಗೆ ತರುವ" ವಿಷಯದ ಮೇಲೆ ಚರ್ಚೆ, ವಿಕಲಚೇತನ ವ್ಯಕ್ತಿಗಳ ಪ್ರಮುಖ ಕೊಡುಗೆಗಳ ಬಗ್ಗೆ ಬೆಳಕು ಚೆಲ್ಲಲಾಗುತ್ತದೆ.

"ಯೆಸ್ ಟು ಆಕ್ಸೆಸ್" ಸ್ಮಾರ್ಟ್ಫೋನ್ ಆಪ್ ಮೂಲಕ ವಿಕಲಚೇತರನ ಸಮಸ್ಯೆಗಳು, ಪರಿಹಾರ ಕಲ್ಪಿಸುವ ಮತ್ತು ಸಮಸ್ಯೆ ಹೊಂದಿರುವ ವಿಶೇಷ ಚೇತರನ್ನು ತಲುಪುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಬೆನ್ನುಹುರಿಯ ಗಾಯ ನಿವಾರಣೆ ಮತ್ತು ಪುನರ್ವಸತಿ ಕ್ರಮಗಳನ್ನು ಇದು ಒಳಗೊಂಡಿದೆ. ಕೌಶಲ್ಯ ತರಬೇತಿ, ವಿಶೇಷ ಚೇತನ ಸಮುದಾಯದ ಮರುಸಂಘಟನೆ, ಆಘಾತಕ್ಕೆ ಒಳಗಾದವರಿಗೆ ಪುನರ್ ವಸತಿ ಮತ್ತಿತರೆ ರಚನಾತ್ಮಕ ಕಾರ್ಯಕ್ರಮಗಳನ್ನು ಹಮಿಕೊಳ್ಳಲಾಗಿದೆ.

ಎಪಿಡಿ ಸಿಇಒ ಡಾ.ಸೆಂಥಿಲ್ ಎನ್.ಎಸ್. ಕುಮಾರ್ ಮಾತನಾಡಿ, "ಐಡಿಪಿಡಿ ದಿನಾಚರಣೆಯ ಅಂಗವಿಕಲರು ಎದುರಿಸುತ್ತಿರುವ ಸವಾಲುಗಳನ್ನು ಅರ್ಥಮಾಡಿಕೊಳ್ಳಲು ಮತ್ತು ಅವರನ್ನು ಬೆಂಬಲಿಸಲು ಒಂದು ಸದಾವಕಾಶವಾಗಿದೆ. ಅಡೆತಡೆಗಳನ್ನು ಮೀರಿ, ಯೆಸ್ ಟು ಆಕ್ಸೆಸ್ ಆಪ್ ಮತ್ತು ವೈದ್ಯಕೀಯ ಮತ್ತು ಪುನರ್ವಸತಿಗೆ ಅಗತ್ಯವಾದ ಹಣಕಾಸಿನ ಬೆಂಬಲವನ್ನು ಒದಗಿಸುವ ಸರ್ಕಾರಿ ಬೆಂಬಲಿತ ಉಪಕ್ರಮವಾದ ನಿರಾಮಯ ಆರೋಗ್ಯ ವಿಮಾ ಯೋಜನೆ ವ್ಯಾಪ್ತಿಗೆ ಅರ್ಹರನ್ನು ಸೇರ್ಪಡೆ ಮಾಡಿಕೊಳ್ಳಲು ಬೆಂಬಲಿಸಲಾಗುತ್ತದೆ ಎಂದರು.

# ಐ.ಟಿ.ಸಂಸ್ಥೆ ಕ್ಯಾನರೀಸ್‌ನಿಂದ ಅದ್ದೂರಿ ಕನ್ನಡ ರಾಜ್ಯೋತ್ಸವ

**ಬೆಂಗಳೂರು, ಡಿ, 9;** ಐ.ಟಿ.ಉದ್ಯಮ ಕ್ಯಾನರೀಸ್ ನಲ್ಲಿ ಸತತ 16ನೇ ವರ್ಷದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ಅತ್ಯಂತ ವೈಭವದಿಂದ ನಡೆಯಿತು.

ಪತ್ತಿ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕ್ಯಾಲೆಂಡರ್ ಬಿಡುಗಡೆ ಜೊತೆಗೆ ವೈಭವದ ಸಾಂಸ್ಕೃತಿಕ ಸಮಾರಂಭ ನೆರವೇರಿತು.

ಸಾಹಿತಿ ಡಾ. ಸೋಮೇಶ್ವರ್ ಮತ್ತು ಕ್ಯಾನರೀಸ್ ಸಂಸ್ಥೆಯ ಸಿ.ಇ.ಓ.ಶೇಷಾದ್ರಿ ಕಾರ್ಯಕ್ರಮ ಉದ್ಘಾಟಿಸಿದರು.

ಶೇಷಾದ್ರಿ ಮಾತನಾಡಿ, ಐ.ಟಿ.ಉದ್ಯಮ ಸಂಪೂರ್ಣ ಅಂಗ್ಲಮಯವಾಗಿರುತ್ತದೆ ಅದರೆ ನಮ್ಮ ಸಂಸ್ಥೆಯಲ್ಲಿ ಸಂಪೂರ್ಣ ಕನ್ನಡ ವಾತಾವರಣ ನಿರ್ಮಾಣ ಮಾಡಿದ್ದೇವೆ. ಐ.ಟಿ.ಸಂಸ್ಥೆಗಳಲ್ಲಿ ಕನ್ನಡ ರಾಜ್ಯೋತ್ಸವ ಆಚರಿಸಲು ಹಿಂಜರಿಯುತ್ತಿದ್ದಸರು. ಕನ್ನಡ ನುಡಿ, ಭಾಷೆ ಸಂಸ್ಕೃತಿ ಸಂಪ್ರಾದಯವನ್ನು ಇಲ್ಲಿ ನೆಲೆಸಿರುವ ಪ್ರತಿಯೊಬ್ಬರು ಸಂಭ್ರಮಿಸಬೇಕು. ನಾಡು, ನುಡಿ ಸಂರಕ್ಷಣೆಗಾಗಿ ನಮ್ಮ ಸಂಸ್ಥೆ ಕಟಿಬದ್ದವಾಗಿ ಶ್ರಮಿಸುತ್ತಿದೆ. ನಮ್ಮ ನಾಡಿನ ಇತಿಹಾಸ ಮರೆಯಬಾರದು ಎಂದು ನಮ್ಮ ಸಂಸ್ಥೆಯ ಕಛೇರಿಯ ವಿಭಾಗಗಳಿಗೆ ನಾಡಿನ ಹೆಸರಾಂತ ಕವಿಗಳು ಮತ್ತು ನದಿಗಳ ಹೆಸರು ಇಡಲಾಗಿದೆ. ಕನ್ನಡ ಭಾಷೆ ಅತಿ ಪ್ರಾಚೀನ ಭಾಷೆ ಅದನ್ನ ಉಳಿಸಿ, ಬೆಳಸಲು ಕ್ಯಾನರೀಸ್ ಸಂಸ್ಥೆ ದಿಟ್ಟಹೆಜ್ಜೆ ಇಟ್ಟಿದೆ ಎಂದು ಹೇಳಿದರು.

ಕ್ಯಾನರಿಸ್ ಐ.ಟಿ.ಸಂಸ್ಥೆಯ ಕನ್ನಡ ರಾಜ್ಯೋತ್ಸವದಲ್ಲಿ 600ಕ್ಕೂ ಹೆಚ್ಚು ಸಿಬ್ಬಂದಿ ಭಾಗವಹಿಸಿದ್ದರು. ಗೀತೆಗಾಯನ, ನೃತ್ಯ ಮತ್ತು ನಾಟಕ, ಚಲನಚಿತ್ರ ಗೀತೆಗಳ ಸಾಂಸ್ಕೃತಿಕ ಕಾರ್ಯಕ್ರಮ ಗಮನ ಸೆಳೆಯಿತು.

# ಯುವತಿ ಜೊತೆ ಅಸಭ್ಯ ವರ್ತನೆ: ಅಪಾರ್ಟ್ಮೆಂಟ್ ಮಾಲೀಕನ ಪುತ್ರನ ಬಂಧನ



**ಬೆಂಗಳೂರು, ಡಿ, 9;** ಮದ್ಯಪಾನ ಮಾಡಿ ಯುವತಿ ಜತೆ ಅಸಭ್ಯ ವರ್ತನೆ ತೋರಿದ ಆರೋಪದ ಮೇಲೆ ಅಪಾರ್ಟ್ ಮೆಂಟ್ವೊಂದರ ಮಾಲೀಕರ ಮಗನನ್ನು ಸಂಜಯನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಸಂಜಯನಗರದ ಪ್ಲಾನೆಟ್ ವಿಸ್ತಾ ಅಪಾರ್ಟ್ಮೆಂಟ್ನ ಮಾಲೀಕರ ಮಗ ಮಂಜುನಾಥ್ ಬಂಧಿತ ಆರೋಪಿ. ಹೊಟೇಲ್ ನಡೆಸುತ್ತಿರುವ ಪಶ್ಚಿಮ ಬಂಗಾಳದ ಯುವತಿ ಪ್ಲಾನೆಟ್ ವಿಸ್ತಾ ಅಪಾರ್ಟ್ಮೆಂಟ್‌ನಲ್ಲಿ ವಾಸವಾಗಿದ್ದಾರೆ.

ಕಳೆದ 3ರಂದು ರಾತ್ರಿ 10.30ರ ಸಮಯದಲ್ಲಿ ಯುವತಿ ಪಾರ್ಸಲ್ ತೆಗೆದುಕೊಳ್ಳಲು ಗೇಟ್ ಬಳಿ ಬಂದಾಗ ಆರೋಪಿ ಮಂಜುನಾಥ್ ಯುವತಿಗೆ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾನೆ. ಆತ ಕುಡಿದಿದ್ದಾನೆ ಎಂದು ಏನೂ ಮಾತನಾಡದೆ ಯುವತಿ ಸುಮನಾಗಿದ್ದಾಳೆ.

ಮತ್ತೆ ಆರೋಪಿ ಬಯ್ಯುತ್ತಾ ಯುವತಿಯ ಕಪಾಳಕ್ಕೆ ಹೊಡೆದಿದ್ದಾನೆ. ಅಲ್ಲದೆ, ಬಿಗಿಯಾಗಿ ಕುತ್ತಿಗೆ ಹಿಡಿದಿದ್ದಾನೆ. ತಪ್ಪಿಸಿಕೊಳ್ಳಲು ಹೋದಾಗ ಬೆರಳು ಕಚ್ಚಿ ಗಾಯಗೊಳಿಸಿದ್ದಾನೆ. ನಂತರ ಯುವತಿಯನ್ನು ಮನೆಯೊಳಗೆ ಎಳೆದುಕೊಂಡು ಹೋಗಲು ಪ್ರಯತ್ನಿಸಿದ್ದಾನೆ. ತಕ್ಷಣ ಯುವತಿ ಆತನಿಂದ ತಪ್ಪಿಸಿಕೊಂಡು ಮನೆಗೆ ಹೋಗಿ ಬಾಗಿಲು ಹಾಕಿಕೊಂಡಿದ್ದಾಳೆ.

ಬೆಳಗ್ಗೆ ಆರೋಪಿ ಮಂಜುನಾಥ್ ಯುವತಿ ಮನೆಯ ಕಿಟಕಿಯಲ್ಲಿ ಇಣುಕಿ ಒಳಗೆ ಬರುತ್ತೇನೆ ಬಾಗಿಲು ತೆಗಿ ಎಂದು ಹೇಳಿದ್ದಾನೆ. ಆಗ ಯುವತಿ ಬಾಗಿಲು ತೆಗೆದಿಲ್ಲ. ಇದರಿಂದ ಕೋಪಗೊಂಡು ಮತ್ತೆ ನಿಂದಿಸಿ ಗಲಾಟೆ ಮಾಡಿ ಹೋಗಿದ್ದಾನೆ.

ಇದರಿಂದ ಮನನೊಂದ ಯುವತಿ ಸಂಜಯನಗರ ಠಾಣೆ ಪೊಲೀಸರಿಗೆ ಈ ಬಗ್ಗೆ ದೂರು ನೀಡಿದರು. ತನಿಖೆ ಕೈಗೊಂಡ ಪೊಲೀಸರು ಆರೋಪಿಯನ್ನು ಬಂಧಿಸಿ ವಿಚಾರಣೆಗೆ ಒಳಪಡಿಸಿದ್ದಾರೆ.

## ನಮ್ಮ ಮೆಟ್ರೋದಲ್ಲಿ ಒಂದೇ ದಿನ 9.20 ಲಕ್ಷ ಜನ ಓಡಾಟ



**ಬೆಂಗಳೂರು:** ಬೆಂಗಳೂರಿನ ನಮ್ಮ ಮೆಟ್ರೋ ಪ್ರಯಾಣಿಕರ ಓಡಾಟದಲ್ಲಿ ದಾಖಲೆ ನಿರ್ಮಿಸಿದೆ. ಒಂದೇ ದಿನ ಮೆಟ್ರೋದಲ್ಲಿ ಸಂಚರಿಸುವವರ ಸಂಖ್ಯೆ ಭಾರೀ ಏರಿಕೆ ಕಂಡಿದ್ದು, ಗರಿಷ್ಠ ಪ್ರಮಾಣ ತಲುಪಿದೆ.

ಈ ವಿಷಯದ ಕುರಿತಾಗಿ ಬಿಎಂಆರ್‌ಸಿಎಲ್ ಮಾಹಿತಿಯನ್ನು ಹಂಚಿಕೊಂಡಿದೆ. 'ನಮ್ಮ ಮೆಟ್ರೋ' ಪ್ರಯಾಣಿಕರ ಸಂಚಾರದಲ್ಲಿ ಹೊಸ ದಾಖಲೆ ನಿರ್ಮಾಣವಾಗಿದ್ದು, ಡಿ. 6ರಂದು ಬೆಂಗಳೂರಿನ ನಮ್ಮ ಮೆಟ್ರೋದಲ್ಲಿ 9.20 ಲಕ್ಷ ಕ್ಕೂ ಅಧಿಕ ಪ್ರಯಾಣಿಕರು ಸಂಚಾರ ಮಾಡುವ ಮೂಲಕ ಹೊಸ ದಾಖಲೆ ನಿರ್ಮಾಣವಾಗಿದೆ ಎಂದು ಬಿಎಂಆರ್‌ಸಿಎಲ್ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಮಾಹಿತಿ ನೀಡಿದೆ. ನೇರಳೆ ಮಾರ್ಗದಲ್ಲಿ 4,39,616 ಜನ ಪ್ರಯಾಣಿಸಿದ್ದು, ಹಸಿರು ಮಾರ್ಗದಲ್ಲಿ 3,12,248 ಜನ ಪ್ರಯಾಣಿಸಿದ್ದಾರೆ. ಕೆಂಪೇಗೌಡ ನಿಲ್ದಾಣದಿಂದ ಮಾರ್ಗ ಬದಲಿಸುವ ಮೂಲಕ 1,67,617 ಜನ ಪ್ರಯಾಣಿಸಿದ್ದಾರೆ.ಕಳೆದ ಆಗಸ್ಟ್ 14ರಂದು ನಮ್ಮ ಮೆಟ್ರೋದಲ್ಲಿ ಒಂದೇ ದಿನ ಬರೋಬ್ಬರಿ 9.17 ಲಕ್ಷ ಮಂದಿ ಸಂಚರಿಸುವ ಮೂಲಕ ದಾಖಲೆ ಸೃಷ್ಟಿಸಿತ್ತು. ಇದೀಗ ನಮ್ಮ ಮೆಟ್ರೋದಲ್ಲಿ 9.20 ಲಕ್ಷಕ್ಕೂ ಅಧಿಕ ಜನ ಪ್ರಯಾಣಿಸುವ ದಾಖಲೆಯನ್ನು ಮುರಿದಿದೆ.

# ಹಾಸನದಿಂದ ಮಂಗಳೂರಿಗೆ ಕೈಗಾರಿಕಾ ಕಾರಿಡಾರ್ ಘೋಷಿಸಬೇಕು: ಎಚ್.ಡಿ.ದೇವೇಗೌಡ

**ಬೆಂಗಳೂರು:** ಚೆನ್ನೈ–ಬೆಂಗಳೂರು ಮತ್ತು ಹೈದ್ರಾಬಾದ್ –ಬೆಂಗಳೂರು ಕೈಗಾರಿಕಾ ಕಾರಿಡಾರ್ ಎರಡನ್ನೂ ಒಟ್ಟುಗೂಡಿಸಿ ಹಾಸನದಿಂದ ಮಂಗಳೂರಿಗೆ ಕೈಗಾರಿಕಾ ಕಾರಿಡಾರ್ ಘೋಷಣೆ ಮಾಡಬೇಕು ಎಂದು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರು ತಿಳಿಸಿದರು.

ದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಕಾರಿಡಾರ್ ನಿರ್ಮಾಣವಾದರೆ ವ್ಯಾಪಾರ ಚಟುವಟಿಕೆಗಳು ದೊಡ್ಡ ಪ್ರಮಾಣದಲ್ಲಿ ಹೆಚ್ಚಾಗಲಿವೆ. ಮನಮೋಹನ್ ಸಿಂಗ್ ಅವರು ಪ್ರಧಾನಿಯಾದಾಗ ಚೆನ್ನೈ–ಬೆಂಗಳೂರು ಕಾರಿಡಾರ್ ಘೋಷಣೆಯಾಗಿದ್ದರೂ ಇನ್ನೂ ಪೂರ್ಣಗೊಂಡಿಲ್ಲ. ಈಗ ಚಂದ್ರಬಾಬು ನಾಯ್ಡು ಅವರು ಹೈದ್ರಾಬಾದ್–ಬೆಂಗಳೂರು ಕೈಗಾರಿಕಾ ಕಾರಿಡಾರ್ ಘೋಷಣೆ ಮಾಡಿದ್ದರು. ಇದನ್ನು ಕಾರ್ಯಗತಗೊಳಿಸಬೇಕು ಎಂದರು.

ಈ ಎರಡೂ ಕಾರಿಡಾರ್‌ಗಳನ್ನು ಒಟ್ಟುಗೂಡಿಸಿ ಹಾಸನ, ಮಂಗಳೂರು ಕೈಗಾರಿಕಾ ಕಾರಿಡಾರ್ ನಿರ್ಮಾಣ ಮಾಡಿದರೆ ಆ ಭಾಗದ ಜನರಿಗೆ ಹೆಚ್ಚು ಅನುಕೂಲವಾಗಲಿದೆ ಎಂದರು. ಹಾಸನ ವಿಮಾನನಿಲ್ದಾಣವನ್ನು ಅಭಿವೃದ್ಧಿಪಡಿಸಿದರೆ ಪ್ರವಾಸೋದ್ಯಮ ಹಾಗೂ ವಾಣಿಜ್ಯಾಭಿವೃದ್ಧಿ ಕೂಡ ಆಗಲಿದೆ. ಹಾಸನದಲ್ಲಿ ವಿಮಾನನಿಲ್ದಾಣಕ್ಕೆ 1,200 ಕೋಟಿ ರೂ. ವೆಚ್ಚದ ಟೆಂಡರ್ ಕರೆಯಲಾಗಿತ್ತು.

ಐವರು ಮುಖ್ಯಮಂತ್ರಿಗಳು ಆಡಳಿತ ನಡೆಸಿದ್ದಾರೆ. ಒಂದೊಂದು ಕಾಲದಲ್ಲಿ ಒಂದೊಂದು ರೀತಿ ಆಗಿದೆ. ಆದರೂ ವಿಮಾನನಿಲ್ದಾಣ ನಿರ್ಮಾಣ ವಿಳಂಬವಾಗುತ್ತಿದೆ. ಈಗ ವಿಮಾನನಿಲ್ದಾಣವನ್ನು ಅಭಿವೃದ್ಧಿಪಡಿಸಿದರೆ ವಾಣಿಜ್ಯ ಅಭಿವೃದ್ಧಿ ಜೊತೆಗೆ ರೈತರ ಕೃಷಿ ಉತ್ಪನ್ನಗಳನ್ನು ರಫ್ತು ಮಾಡಲು ಅನುಕೂಲವಾಗಲಿದೆ. ಹೀಗಾಗಿ ರಫ್ತಿಗೂ ಉತ್ತೇಜನ ದೊರೆಯಲಿದೆ ಎಂದು ಹೇಳಿದರು. ಹಾಸನ ಜಿಲ್ಲೆಯಲ್ಲಿ ಬೇಲೂರು, ಹಳೇಬೀಡು, ಶ್ರವಣಬೆಳಗೊಳ ಈ ಮೂರೂ ಪ್ರಮುಖ ಪ್ರವಾಸಿ ಕೇಂದ್ರಗಳಾಗಿವೆ. ಈ ತಾಣಗಳಿಗೆ ಬಸ್ ಸೌಕರ್ಯ ಕಲ್ಪಿಸಲಾಗಿದೆ. ವಿಮಾನನಿಲ್ದಾಣದಿಂದ ಈ ಪ್ರವಾಸಿ ತಾಣಗಳಿಗೆ ಪ್ರವಾಸೋದ್ಯಮ ಇಲಾಖೆಗಳಿಂದಲೇ ಟ್ಯಾಕ್ಸಿ ಸೇವೆ ಕಲ್ಪಿಸಿದರೆ ಪ್ರವಾಸಿಗರಿಗೆ ಹೆಚ್ಚು ಅನುಕೂಲವಾಗುತ್ತದೆ. ಪ್ರವಾಸೋ ದ್ಯಮವೂ ಅಭಿವೃದ್ಧಿಯಾಗುತ್ತದೆ ಎಂದರು.



ಕಾಂಗ್ರೆಸ್‌ನಿಂದ ಹಾಸನದಲ್ಲಿ ಜನಕಲ್ಯಾಣ ಸಮಾವೇಶವನ್ನು ಮಾಡಿದ್ದಾರೆ. ಆ ಸಮಾವೇಶವನ್ನು ದೇವೇಗೌಡರ ಬಗ್ಗೆ ನಿಂದನೆ ಮಾಡಲು ಬಳಸಿಕೊಂಡಿದ್ದಾರೆ. ಸಂತೋಷ. ಅದಕ್ಕೆ ಯಾವುದೇ ತಕರಾರಿಲ್ಲ. ಜನರು ಮುಂದೆ ತೀರ್ಮಾನ ಮಾಡುತ್ತಾರೆ. ದೇವೇಗೌಡರು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಮಾಜಿ ಸಚಿವ ಎಚ್.ಡಿ.ರೇವಣ್ಣ ಏನೇನು ಮಾಡಿದ್ದಾರೆ ಎಂಬುದು ಜನರಿಗೆ ಗೊತ್ತಿದೆ. ಬಹಳಷ್ಟು ಜನ ನನ್ನನ್ನು ಗುರಿ ಮಾಡಿದವರು ಇದ್ದಾರೆ. ಆದರೂ ನಾವಿನ್ನೂ ಬದುಕಿದ್ದೇವೆ. ಗುರಿ ಮಾಡುವವರನ್ನು ಅಡ್ಡಿಪಡಿಸಲಾಗುವುದಿಲ್ಲ. ಮಾಡಿಕೊಳ್ಳಲಿ, ಯಾರೂ ಅದನ್ನು ಬೇಡ ಎನ್ನುವುದಿಲ್ಲ ಎಂದು ಗುಡುಗಿದರು.

ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿಯಾಗಿ ಸೋತಿರುವ ನಿಖಿಲ್ ಕುಮಾರಸ್ವಾಮಿ ಅವರನ್ನು ಕ್ರಿಯಾಶೀಲರಾಗಿರುವಂತೆ ನಾನೇ ಹೇಳಿದ್ದೇನೆ. ಸೋತು ಮನೆಯಲ್ಲಿ ಇರುವುದು ಬೇಡ. ಹೋರಾಟದ ಕೆಚ್ಚು ಇದೆ. ಹೀಗಾಗಿ ಪಕ್ಷ ಸಂಘಟನೆಯಲ್ಲಿ ತೊಡಗಿಕೊಳ್ಳಲು ಸೂಚಿಸಿದ್ದೇನೆ. ನಿಖಿಲ್ ಕುಮಾರಸ್ವಾಮಿ ರಾಜಕೀಯವಾಗಿ ಬೆಳೆದು, ಜನಸೇವೆ ಮಾಡುವುದನ್ನು ಯಾರೂ ತಡೆಯಲಾಗದು. ಅವರಿಗೂ ಒಳ್ಳೆಯ ಕಾಲ ಬಂದೇ ಬರುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕುಮಾರಸ್ವಾಮಿ ಹಾಗೂ ನಾನು ಒಟ್ಟಿಗೇ ಪ್ರಧಾನಿ ಮೋದಿಯವರನ್ನು ಭೇಟಿ ಮಾಡಿ ಎನ್‌ಡಿಎ ಒಕ್ಕೂಟ ಸೇರಿದ್ದೇವೆ. ಹೀಗಾಗಿ ಬಿಜೆಪಿ ಜೊತೆ ಜೆಡಿಎಸ್ ರಾಜ್ಯದಲ್ಲಿ ಹೋರಾಟದಲ್ಲಿ ಭಾಗಿಯಾಗಲಿವೆ.

ಸೋಮವಾರದಿಂದ ಬೆಳಗಾವಿಯಲ್ಲಿ ವಿಧಾನಮಂಡಲದ ಉಭಯ ಸದನದಗಳ ಅಧಿವೇಶನ ನಡೆಯಲಿದ್ದು, ಎರಡೂ ಪಕ್ಷಗಳ ಶಾಸಕರು ಒಟ್ಟಾಗಿ ಯಾವ ಯಾವ ವಿಚಾರ ಪ್ರಸ್ತಾಪ ಮಾಡಬೇಕು, ಯಾವ ರೀತಿ ಹೋರಾಟ ಮಾಡಬೇಕೆಂಬುದನ್ನು ನಿರ್ಧರಿಸುತ್ತಾರೆ ಎಂದರು.

